ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 166
16–12–2025 ಮಂಗಳವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 166

## ಪಂಚಪೀಠ ಶ್ರೀಗಳ ಸಮ್ಮುಖದಲ್ಲಿ ಶಾಮನೂರು ಶಿವಶಂಕರಪ್ಪ ಕ್ರಿಯಾಸಮಾಧಿ

# ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ

**ದಾವಣಗೆರೆ :** ಕಾಂಗ್ರೆಸ್ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರ ಅಂತಿಮ ವಿಧಿ ವಿಧಾನ ದಾವಣಗೆರೆಯ ಕಲ್ಲೇಶ್ವರ ಮಿಲ್? ಆವರಣದಲ್ಲಿ ವೀರಶೈವ–ಲಿಂಗಾಯತ ಸಂಪ್ರದಾಯದಂತೆ ನೆರವೇರಿದೆ. ಕ್ರಿಯಾಸಮಾಧಿ ಬಳಿಕ ಪಾರ್ಥಿವ ಶರೀರಕ್ಕೆ ಅಭಿಷೇಕ ಮಾಡಲಾಗಿದ್ದು, ಮಣ್ಣು ಹಾಕದೆ ಕ್ರಿಯಾ ಸಮಾಧಿಯಲ್ಲಿ ವಿಭೂತಿ, ಬಿಲ್ವಪತ್ರೆ, ಗಂಗಾಜಲ ಹಾಕುವುದರ ಜೊತೆಗೆ ಕಳಸವಿಟ್ಟು ವಿಧಿವಿಧಾನ ನೆರವೇರಿಸಲಾಗಿದೆ. ಶಾಮನೂರು ಶಿವಶಂಕರಪ್ಪ ಅವರ ಪುತ್ರ ಖ.ಖ.ಮಲ್ಲಿಕಾರ್ಜುನ್ ಈ ಎಲ್ಲ ಕಾರ್ಯಗಳನ್ನು ನೆರವೇರಿಸಿದ್ದಾರೆ.

ಪಂಚಪೀಠದ ಜಗದ್ಗುರುಗಳ ಸಮ್ಮುಖದಲ್ಲಿ ವಿಧಿವಿಧಾನ

ಶ್ರೀ ರಂಭಾಪುರಿ ಪೀಠದ ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರು, ಶ್ರೀ ಉಜ್ಜಯಿನಿ ಪೀಠದ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದರು, ಶ್ರೀ ಶೈಲ ಪೀಠದ ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಕಾಶೀ ಜಗದ್ಗುರು ಡಾ. ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಮತ್ತು ಕಾಶೀ ಜಗದ್ಗುರು ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿಗಳ ಸಮ್ಮುಖದಲ್ಲಿ ಶಾಮನೂರು ಶಿವಶಂಕರಪ್ಪ ಅವರ ಅಂತಿಮ ವಿಧಿ ವಿಧಾನ ನಡೆಸಲಾಗಿದೆ. ಅವರ ಪತ್ನಿ ಸಮಾಧಿ ಪಕ್ಕದಲ್ಲೇ ಅಂತ್ಯಕ್ರಿಯೆ ನಡೆದಿದೆ.

ಶಾಮನೂರು ಅವರ ಅಂತಿಮ ಸಂಸ್ಕಾರಕ್ಕೂ ಮುನ್ನ ರಾಜ್ಯದ ವತಿಯಿಂದ ಸಕಲ ಸರ್ಕಾರಿ ಗೌರವ ಸಲ್ಲಿಕೆ ಮಾಡಲಾಗಿದೆ. ಪಾರ್ಥಿವ ಶರೀರದ ಮೇಲೆ ತ್ರಿವರ್ಣ ಧ್ವಜ ಹೊದಿಸಿ, ಗಾಳಿಯಲ್ಲಿ 3 ಸುತ್ತು ಗುಂಡು ಹಾರಿಸಿ ಗೌರವ ನೀಡಲಾಗಿದೆ. ಬಳಿಕ ಪಾರ್ಥಿವ ಶರೀರದ ಮೇಲೆ ಹೊದಿಸಿದ್ದ ತ್ರಿವರ್ಣ ಧ್ವಜವನ್ನು ಕುಟುಂಬಸ್ಥರಿಗೆ ಡಿಸಿಎಂ ಡಿ.ಕೆ. ಶಿವಕುಮಾರ್ ಹಸ್ತಾಂತರಿಸಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸ್ಪೀಕರ್





ಯು.ಟಿ.ಖಾದರ್, ಸಚಿವರಾದ ಹೆಚ್.ಸಿ.ಮಹದೇವಪ್ಪ, ಕೆ.ಜೆ.ಜಾರ್ಜ್, ಭೈರತಿ ಸುರೇಶ್, ಎಂ.ಬಿ.ಪಾಟೀಲ್, ಖಂಡ್ರೆ, ಮುನಿಯಪ್ಪ, ಶರಣಬಸಪ್ಪ ದರ್ಶನಾಪುರ, ಡಿ.ಸುಧಾಕರ್, ಜಮೀರ್ ಅಹ್ಮದ್, ಬೋಸರಾಜು, ಸತೀಶ್, ಹೆಬ್ಬಾಳ್ಕರ್, ವಿಧಾನಸಭೆ ವಿಪಕ್ಷ ನಾಯಕ ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಸಿರಿಗೆರೆ ತರಳಬಾಳು ಮಠದ ಡಾ.ಶಿವಮೂರ್ತಿಶ್ರೀ, ರಂಭಾಪುರಿ ಜಗದ್ಗುರುಗಳು, ಹರಿಹರ ಪಂಚಮಸಾಲಿ ಪೀಠದ ವಚನಾನಂದಶ್ರೀ ಸೇರಿ ವಿವಿಧ ಮಠಾಧೀಶರು, ಗಣ್ಯರು, ಶಾಮನೂರು ಕುಟುಂಬಸ್ಥರು, ಸಾವಿರಾರು ಅಭಿಮಾನಿಗಳು ಅಂತ್ಯಕ್ರಿಯೆ ವೇಳೆ ಉಪಸ್ಥಿತರಿದ್ದರು. ಕ್ರಿಶ್ಚಿಯನ್ ಧರ್ಮಗುರುಗಳು ಸಹ ಈ ವೇಳೆ ಭಾಗಿಯಾಗಿದ್ದರು.

# ಬೆಳಗಾವಿ ಅಧಿವೇಶನ: ಶಾಮನೂರು ಶಿವಶಂಕರಪ್ಪಗೆ ಸಂತಾಪ; ಉಭಯ ಸದನಗಳ ಕಲಾಪ ಮುಂದೂಡಿಕೆ

**ಬೆಳಗಾವಿ:** ಭಾನುವಾರ ನಿಧನರಾದ ಹಿರಿಯ ಕಾಂಗ್ರೆಸ್ ಶಾಸಕ ಶಾಮನೂರು ಶಿವಶಂಕರಪ್ಪ ಅವರಿಗೆ ಸೋಮವಾರ ವಿಧಾನಸಭೆ ಮತ್ತು ವಿಧಾನ ಪರಿಷತ್ ನಲ್ಲಿ ಸಂತಾಪ ಸೂಚಿಸಲಾಯಿತು.

ಬೆಳಗಾವಿಯ ಸುವರ್ಣಸೌಧದಲ್ಲಿ ಚಳಿಗಾಲದ ಅಧಿವೇಶನ ನಡೆಯುತ್ತಿದ್ದು, ಇಂದು ವಿಧಾನಸಭೆ ಕಲಾಪ ಆರಂಭವಾಗುತ್ತಿದ್ದಂತೆ ಶಾಮನೂರು ಶಿವಶಂಕರಪ್ಪಗೆ ಅವರಿಗೆ ಸಂತಾಪ ಸೂಚಿಸಲಾಯಿತು. ಬಳಿಕ ಉಭಯ ಸದನಗಳ ಕಲಾಪವನ್ನು ಮಂಗಳವಾರಕ್ಕೆ ಮುಂದೂಡುಲಾಯಿತು.

ವಿಧಾನಸಭೆಯಲ್ಲಿ ಸಂತಾಪ ಸೂಚನೆ ನಿರ್ಣಯ ಮಂಡಿಸಿ ಮಾತನಾಡಿದ ಸ್ಪೀಕರ್ ಯು.ಟಿ.ಖಾದರ್ ಅವರು, ಎಷ್ಟೇ ಜಟಿಲವಾದ ಸಮಸ್ಯೆಯನ್ನು ತಾಳ್ಮೆಯಿಂದ ನಿಭಾಯಿಸುವ ಗುಣ ಶಾಮನೂರು ಅವರಲ್ಲಿತ್ತು. ಅವರ ಜೀವನವೇ ಒಂದು ಸಂದೇಶ ಎಂದು ಬಣ್ಣಿಸಿದರು.

ಬಳಿಕ ಸಂತಾಪ ಸೂಚಿಸಿ,ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ದಾವಣಗೆರೆ ಜಿಲ್ಲೆ ಸಾಮಾಜಿಕವಾಗಿ, ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಅಭಿವೃದ್ಧಿಯಾಗಿದ್ದಾರೆ ಅದಕ್ಕೆ ಶಾಮನೂರು ಶಿವಶಂಕರಪ್ಪ ಅವರು ಕಾರಣ. ಶಾಮನೂರು ಶಿವಶಂಕರಪ್ಪ ಅವರು ತಮ್ಮ 63ನೇ ವಯಸ್ಸಿನಲ್ಲಿ ವಿಧಾನಸಭೆ ಪ್ರವೇಶಿಸಿ ಆರು ಬಾರಿ ಶಾಸಕರಾದವರು. ಒಮ್ಮೆ ಸಂಸತ್ ಸದಸ್ಯರಾಗಿದ್ದರು. ದೀರ್ಘ ಕಾಲದ ರಾಜಕೀಯದಲ್ಲಿದ್ದರು. ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷರಾಗಿದ್ದರು. 1969ರಲ್ಲಿ ದಾವಣಗೆರೆ ಪುರಸಭೆ ಸದಸ್ಯರಾಗಿ ನಂತರ ನಗರಸಭೆ ಅಧ್ಯಕ್ಷರಾಗಿಯೂ ಸೇವೆ ಸಲ್ಲಿಸಿದರು ಎಂದರು.



ದಾವಣಗೆರೆಯಲ್ಲಿ ಬಾಪೂಜಿ ವಿದ್ಯಾ ಕೇಂದ್ರದ ಮೂಲಕ ಇಂಜಿನಿಯರಿಂಗ್, ವೈದ್ಯಕೀಯ ಕಾಲೇಜುಗಳು ಸೇರಿದಂತೆ ಅನೇಕ ಸಂಸ್ಥೆಗಳನ್ನು ಕಟ್ಟಿ ಜಿಲ್ಲೆಯನ್ನು ವಿದ್ಯಾಕಾಶಿಯಾಗಿಸಿದರು. ಉದ್ಯಮಿಯಾಗಿ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಕ್ಷೇತ್ರಗಳಲ್ಲಿ ತಮ್ಮದೇ ಛಾಪು ಮೂಡಿಸಿದ್ದಾರೆ.

ಜವಳಿ ಕ್ಷೇತ್ರದ ಅವನತಿ ಪ್ರಾರಂಭವಾದಾಗ ದಾವಣಗೆರೆಗೆ ಒಂದು ಬ್ರಾಂಡ್ ಹೆಸರನ್ನು ಶಿವಶಂಕರಪ್ಪ ಅವರು ತಂದುಕೊಟ್ಟರು. ದೀರ್ಘಕಾಲ ಎಐಸಿಸಿ ಖಜಾಂಚಿ ಆಗಿದ್ದರು. ಎಲ್ಲರೊಂದಿಗೂ ಸ್ನೇಹ ಸಂಪಾದಿಸಿದ್ದವರು, ಅಜಾತಶತ್ರು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು.

ದಾವಣಗೆರೆಗೆ ಭೇಟಿ ನೀಡಿದಾಗಲೆಲ್ಲ ಅವರ ಗೆಸ್ಟ್ ಹೌಸ್‌ನಲ್ಲಿ ಉಳಿಯುತ್ತಿದ್ದೆ, ಅವರ ಒತ್ತಾಯದ ಮೇರೆಗೆ ಅವರ ಮನೆಯಲ್ಲಿಯೇ ಊಟ ಮಾಡುತ್ತಿದ್ದೆ. ನನ್ನ 75ನೇ ಜನ್ಮದಿನವನ್ನು ದಾವಣಗೆರೆಯಲ್ಲಿಯೇ ಆಚರಿಸಿಕೊಂಡಿದ್ದೆ, ಅದಕ್ಕೂ ಸಾಕಷ್ಟು ಸಹಕಾರ ನೀಡಿದ್ದರು ಎಂದರು.

ಶಾಮನೂರು ಶಿವಶಂಕರಪ್ಪ ಕಷ್ಟದ ಸಂದರ್ಭಗಳಲ್ಲಿ ಜನರಿಗೆ ಸಹಾಯಹಸ್ತ ಚಾಚುತ್ತಿದ್ದರು. ಕೋವಿಡ್ ಸಂದರ್ಭದಲ್ಲಿ ಆರು ಕೋಟಿಗೂ ಹೆಚ್ಚು ವೆಚ್ಚ ಮಾಡಿ ಆಕ್ಸಿಜನ್ ಸರಬರಾಜು ಮಾಡಿದ್ದರು.

ಹಿಂದೆ ನಾನು ಮುಖ್ಯಮಂತ್ರಿ ಆಗಿದ್ದಾಗ ಮಂತ್ರಿ ಮಂಡಲದಲ್ಲಿ ಶಾಮನೂರು ಶಿವಶಂಕರಪ್ಪ ಅವರು ಸಚಿವರಾಗಿ ಕಾರ್ಯನಿರ್ವಹಿಸಿದ್ದರು. 2016ರಲ್ಲಿ ಸಂಪುಟ ಪುನರ್ ರಚನೆಯಾದಾಗ ಅವರ ಪುತ್ರ ಎಸ್ ಎಸ್ ಮಲ್ಲಿಕಾರ್ಜುನ್ ಅವರನ್ನು ಸಚಿವರನ್ನಾಗಿ ಮಾಡಲು ಕೋರಿಕೊಂಡಿದ್ದರು. ಮಲ್ಲಿಕಾರ್ಜುನ್ ಅವರು ನಮ್ಮ ಈಗಿನ ಸಚಿವ ಸಂಪುಟದಲ್ಲಿ ಮಂತ್ರಿಗಳಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

15 ದಿನಗಳ ಹಿಂದೆ ಆಸ್ಪತ್ರೆಯಲ್ಲಿ ಅವರನ್ನು ಭೇಟಿ ಮಾಡಿದಾಗ ಮಾತನಾಡುವ ಸ್ಥಿತಿಯಲ್ಲಿ ಇರಲಿಲ್ಲ. ಅವರ ನಿಧನದಿಂದ ಜನಪರ ನಾಯಕನನ್ನು ಕಳೆದುಕೊಂಡಂತಾಗಿದೆ. ಅವರು ದೊಡ್ಡ ಕುಟುಂಬ ಹಾಗೂ ಲಕ್ಷಾಂತರ ಅಭಿಮಾನಿಗಳನ್ನು ಅಗಲಿದ್ದು, ಭಗವಂತ ಅವರೆಲ್ಲರಿಗೂ ದುಃಖ ಭರಿಸುವ ಶಕ್ತಿಯನ್ನು ನೀಡಲಿ ಹಾಗೂ ಮೃತರ ಆತ್ಮಕ್ಕೆ ಚಿರಶಾಂತಿ ನೀಡಲಿ ಪ್ರಾರ್ಥಿಸುತ್ತೇನೆ.

ನಂತರ ಸ್ಪೀಕರ್ ಯುಟಿ ಖಾದರ್ ಅವರು ವಿಧಾನಸಭೆ ಕಲಾಪವನ್ನು ನಾಳೆಗೆ ಮುಂದೂಡಿದರು.

## ಡಾ.ಶಾಮನೂರು ಶಿವಶಂಕರಪ್ಪ ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ

**ದಾವಣಗೆರೆ.ಡಿ.15:** ಡಾ.ಶಾಮನೂರು ಶಿವಶಂಕರಪ್ಪ ಅವರ ಆತ್ಮಕ್ಕೆ ಶಾಂತಿ ಸಿಗಲೆಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಘಟಕದ ವತಿಯಿಂದ ನಗರದ ಡಾ.ಮೋದಿ ವೃತ್ತದಲ್ಲಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಭಾವಪೂರ್ಣ ಶ್ರದ್ಧಾಂಜಲಿ ನಮನ ಸಲ್ಲಿಸಲಾಯಿತು.

ಈ ವೇಳೆ ಕರವೇ ಜಿಲ್ಲಾಧ್ಯಕ್ಷ ಎಂ.ಎಸ್.ರಾಮೇಗೌಡ ಮಾತನಾಡಿ, ಶಾಮನೂರು ಶಿವಶಂಕರಪ್ಪ ಮಧ್ಯಮ ವರ್ಗದ ಧ್ವನಿಯಾಗಿದ್ದರು. ದಾವಣಗೆರೆಯು ಶೈಕ್ಷಣಿಕವಾಗಿ ಜ್ಞಾನಕಾಶಿ ಎಂಬ ಬಿರುದು ಬರಲು ಶಿವಶಂಕರಪ್ಪ ಅವರೇ ಕಾರಣ. ಅಂತಹ ಮಹಾನ್ ವ್ಯಕ್ತಿಯನ್ನು ಕಳೆದುಕೊಂಡಿರುವುದು ದಾವಣಗೆರೆಗೆ ತುಂಬಲಾರದ ನಷ್ಟವಾಗಿದೆ ಎಂದರು.

ಹಲವು ವರ್ಷಗಳ ಬೇಡಿಕೆಯಾದ ಗುಂಡಿ ವೃತ್ತದ ಪಾದಾಚಾರಿ ವ್ಯಾಪಾರಿಗಳಿಗೆ ವ್ಯವಸ್ಥಿತವಾಗಿ ಪರ್ಯಾಯ ವ್ಯವಸ್ಥೆ ಕಲ್ಪಿಸುವಲ್ಲಿ ಶಾಮನೂರು ಶಿವಶಂಕರಪ್ಪ ಅವರ ಬಹುದೊಡ್ಡ ಪಾತ್ರವಿದೆ. ಎಷ್ಟೋ ಕಡುಬಡವ ವಿದ್ಯಾರ್ಥಿಗಳಿಗೆ ಮತ್ತು ಪತ್ರಕರ್ತರ ಮಕ್ಕಳಿಗೆ ಸ್ಕಾಲರ್‌ಶಿಪ್ ಕೊಡುವ ಮೂಲಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುವಂತ ಕೆಲಸ ಶಾಮನೂರು ಮಾಡಿದ್ದಾರೆ. ದಾವಣಗೆರೆ, ರಾಜ್ಯ, ಹೊರ ರಾಜ್ಯದ ದೇವಸ್ಥಾನಗಳ ಅಭಿವೃದ್ಧಿಗೂ ಹಣ ನೀಡಿರುವುದು. ಹೀಗೆ ಯಾರೇ ಬಂದರೂ ಅವರ ಕಷ್ಟ ಆಲಿಸಿ ಅವರಿಗೂ ಪರಿಹಾರ ನೀಡುವಲ್ಲಿ ಹಿರಿಯ ಶಾಸಕರು ಯಾವಾಗಲೂ ಮುಂದೆ ಇದ್ದರು. ಕೊಡುಗೈ ದಾನಿಗಳು ಆಗದ್ದರು ಎಂದು ಹೇಳಿದರು.

ಶಾಮನೂರು ಶಿವಶಂಕರಪ್ಪ ರಂತ ಮಹಾನ್ ವ್ಯಕ್ತಿ ನಗರದಲ್ಲಿ ಮತ್ತೊಮ್ಮೆ ಹುಟ್ಟುವುದು ಸಾಧ್ಯವಿಲ್ಲ. ಅವರ ಸಾಧನೆಯನ್ನೇ ಅನುಸರಿಸಿ, ಅವರು ಹಾಕಿಕೊಟ್ಟ ಮಾರ್ಗದಲ್ಲೇ ಅವರ ಮಗನಾದ ಎಸ್.ಎಸ್.ಮಲ್ಲಿಕಾರ್ಜುನ ಅವರು ಮುಂದುವರಿಯಲೆಂದು ಮನವಿ ಮಾಡಿದರು.

ಈ ವೇಳೆ ಕರವೇ ಪದಾಧಿಕಾರಿಗಳಾದ ಶ್ರೀಮತಿ ಬಸಮ್ಮ ,ಮಂಜುಳಾ ಗಣೇಶ್, ಸಲ್ಮಾಭಾನು, ಸಾಕಮ್ಮ ಬಾಯಿ ,ಮಂಜುಳಮ್ಮ, ಮಂಜುಶ್ರೀ ಗೌಡ, ಗಿರೀಶ್ ಕುಮಾರ್, ಗೋಪಾಲ್ ದೇವರ ಮನೆ, ಓ.ಮಹೇಶ್ವರಪ್ಪ, ಸುರೇಶ್, ಚಂದ್ರು, ತುಳಸಿರಾಮ್, ಬಸವರಾಜ್, ಸಂಜು, ನಾಗರಾಜ್, ಭಾಷಾ, ದಾದಾಪೀರ್, ಅಕ್ಷಯ್, ಕಾರ್ತಿ, ರಮೇಶ್, ಸಾಗರ್ ಇತರರು ಇದ್ದರು.

# ಚಳಿಗಾಲದ ಅಧಿವೇಶನ ಅವಧಿ ಒಂದು ವಾರ ವಿಸ್ತರಿಸಿ ಸ್ಪೀಕರ್‌ಗೆ ಆರ್.ಅಶೋಕ್ ಪತ್ರ

**ಬೆಳಗಾವಿ:** ರಾಜ್ಯ ಚಳಿಗಾಲದ ಅಧಿವೇಶನದ ಅವಧಿ ಒಂದು ವಾರ ವಿಸ್ತರಿಸಬೇಕು ಎಂದು ಸ್ಪೀಕರ್ ಯು.ಟಿ.ಖಾದರ್ ಅವರಿಗೆ ವಿಪಕ್ಷ ನಾಯಕ ಆರ್.ಅಶೋಕ್ ಅವರು ಪತ್ರ ಬರೆದು ಆಗ್ರಹಿಸಿದ್ದಾರೆ. ಡಿ. 8ರಿಂದ 19ರವರೆಗೆ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನ ನಡೆಸಲು ನಿರ್ಧರಿಸಲಾಗಿತ್ತು. ಆದರೆ, ಕಾರಣಾಂತರಗಳಿಂದ 10 ದಿನಗಳ ಅಧಿವೇನದಲ್ಲಿ 2 ದಿನದ ಅಧಿವೇಶನದ ಸಮಯ ಮೊಟುಕುಗೊಂಡಿದೆ. ಹೀಗಾಗಿ ಅಧಿವೇಶನ ಅವಧಿ ವಿಸ್ತರಿಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ಅಧಿವೇಶನದಲ್ಲಿ ರಾಜ್ಯದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚೆಯಾಗಬೇಕಾಗಿರುವ ಬಹಳಷ್ಟು ವಿಷಯಗಳು ಬಾಕಿಯಿದ್ದು, ಈ ಎಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕಾಗಿರುವ ಹಿನ್ನೆಲೆಯಲ್ಲಿ ತಾವು ಪ್ರಸ್ತುತ ಅಧಿವೇಶನವನ್ನು ಇನ್ನೂ ಒಂದು ವಾರಗಳ ಕಾಲ ವಿಸ್ತರಿಸಬೇಕೆಂದು ಆಗ್ರಹಿಸುತ್ತೇನೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ಮೂಡಿಗೆರೆಯಲ್ಲಿ ಸ್ಪೈಸ್ ಪಾರ್ಕ್ ಅಭಿವೃದ್ಧಿ

ಚಿಕ್ಕಮಗಳೂರು ಜಿಲ್ಲೆಯಲ್ಲಿ ಪಿ.ಪಿ.ಪಿ. ಮಾದರಿಯಲ್ಲಿ



ಸ್ಪೈಸ್ ಪಾರ್ಕ್ ಅಭಿವೃದ್ಧಿಪಡಿಸಲು ಏಕಗವಾಕ್ಷಿ ಏಜೆನ್ಸಿ ವತಿಯಿಂದ ಅನುಮೋದನೆ ಪಡೆದು ಬೆಂಗಳೂರಿನ ಐಡೆಕ್ ಸಂಸ್ಥೆಯನ್ನು ವ್ಯವಹರಣಾ ಸಮಾಲೋಚಕರನ್ನಾಗಿ ನೇಮಿಸಲಾಗಿದೆ ಎಂದು ಸಾರಿಗೆ ಸಚಿವರಾದ ರಾಮಲಿಂಗಾರೆಡ್ಡಿ ಅವರು ತಿಳಿಸಿದರು. ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ವಿಧಾನಸಭೆಯಲ್ಲಿ ಶಾಸಕ ರಾಜೇಗೌಡ ಟಿ.ಟಿ ಅವರ ಪ್ರಶ್ನೆಗೆ ತೋಟಗಾರಿಕೆ ಸಚಿವರ ಪರವಾಗಿ ರಾಮಲಿಂಗಾರೆಡ್ಡಿ ಅವರು ಉತ್ತರ ನೀಡಿದರು.

ಸ್ಪೈಸ್ ಪಾರ್ಕ್ ಅಭಿವೃದ್ಧಿಗೆ ಗುರುತಿಸಲಾಗಿದ್ದ ಜಾಗದ ಭೌತಿಕ ಪರಿಶೀಲನೆಯನ್ನು ಸಾಂಬಾರು ಮಂಡಳಿ, ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ ಹಾಗೂ ಕೈಗಾರಿಕೆ ಇಲಾಖೆಯ ಅಧಿಕಾರಿಗಳು ಕೈಗೊಂಡಾಗ, ಸದರಿ ಜಾಗವು ಸ್ಪೈಸ್ ಪಾರ್ಕ್ ನಿರ್ಮಾಣ ಮಾಡಲು ಸೂಕ್ತವಾಗದೇ ಇರುವ ಹಿನ್ನೆಲೆಯಲ್ಲಿ ಸೂಕ್ತವಾದ ಪರ್ಯಾಯ ಜಾಗವನ್ನು ನೀಡಲು ಕೋರಲಾಗಿತ್ತು. ಅದರಂತೆ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕು ಗೋಣಿಬೀಡು ಹೋಬಳಿ ಬೆಟ್ಟದಮನೆ ಗ್ರಾಮದಲ್ಲಿ ಸ್ಪೈಸ್ ಪಾರ್ಕ್ ಅಭಿವೃದ್ಧಿ ಉದ್ದೇಶಕ್ಕಾಗಿ ತೋಟಗಾರಿಕೆ ಇಲಾಖೆಗೆ ಭೂಮಿ ವರ್ಗಾಯಿಸಿ, ದಿನಾಂಕ 30–5–2025ರಂದು ಆದೇಶ ಹೊರಡಿಸಲಾಗಿದೆ.

ಜಮೀನಿನ ಹದ್ದುಬಸ್ತು ಗುರುತಿಸುವಿಕೆ ಪ್ರಕ್ರಿಯೆ ಪೂರ್ಣಗೊಂಡಿದೆ. ಪ್ರಸ್ತುತ ವ್ಯವಹರಣಾ ಸಮಾಲೋಚಕರನ್ನು ನೇಮಿಸಿ ವರದಿಯನ್ನು ಸಿದ್ಧಪಡಿಸಲು ಸೂಚಿಸಲಾಗಿರುತ್ತದೆ. ವರದಿ ಬಂದ ಕೂಡಲೇ ಆದಷ್ಟು ಶೀಘ್ರವಾಗಿ ಸ್ಪೈಸ್ ಪಾರ್ಕ್ ಕಾರ್ಯಾರಂಭಗೊಳಿಸಲಾಗುವುದು ಎಂದು ತಿಳಿಸಿದರು.

## ಸುಳ್ಳು ಮಾಹಿತಿ ನೀಡಿ ಹಣ ವಸೂಲಿ ಮಾಡುತ್ತಿರುವ ವಿರುದ್ಧ ಮಾಹಿತಿ ನೀಡಲು ಮನವಿ

**ಶಿವಮೊಗ್ಗ :** ಕೆಲವು ವ್ಯಕ್ತಿಗಳು ಕೇಂದ್ರ/ರಾಜ್ಯ ಸರ್ಕಾರದ ಆಹಾರ ಸುರಕ್ಷತಾಧಿಕಾರಿಗಳೆಂದು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಚಿಹ್ನೆ, ಸೀಲ್, ಗುರುತುಗಳುಳ್ಳ ವಿಸಿಟಿಂಗ್ ಕಾರ್ಡ್‌ಗಳನ್ನು ಬಳಸಿ ಆಹಾರ ಮಳಿಗೆಗಳಿಗೆ ಭೇಟಿ ನೀಡಿ ಲೈಸೆನ್ಸ್ ತೋರಿಸುವಂತೆ, ತಪಾಸಣೆ ಮಾಡುವುದಾಗಿ, ಆಹಾರ ಮಾದರಿಗಳನ್ನು ಸಂಗ್ರಹಿಸುವುದಾಗಿ ಬೆದರಿಸಿ ಆಹಾರ ಉದ್ದಿಮೆದಾರರಿಂದ ಹಣ ವಸೂಲಿ ಮಾಡುತ್ತಿರುವುದಾಗಿ ಕಳೆದ ಎರಡು ದಿನಗಳಿಂದ ಸಾಮಾಜಿಕ ಜಾಲತಾಣಗಳಲ್ಲಿ, ಪತ್ರಿಕೆಗಳಲ್ಲಿ ಹಾಗೂ ಟಿ.ವಿ. ಮಾಧ್ಯಮಗಳಲ್ಲಿ ಭಿತ್ತರವಾಗುತ್ತಿದ್ದು, ಈ ರೀತಿಯಾಗಿ ಹಣ ವಸೂಲಿ ಮಾಡುವವರು ಕಂಡು ಬಂದಲ್ಲಿ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಅಂಕಿತಾಧಿಕಾರಿ ಜಿ.ಹೆಚ್. ಸತ್ಯನಾರಾಯಣ–9008305426, ಆಹಾರ ಸುರಕ್ಷತಾ ಅಧಿಕಾರಿಗಳಾದ ಸೋಮೇಶ ಓಲೇಕಾರ–9901682320, ಶಶಿಕುಮಾರ್ ಟಿ. –9741505993 ಇವರುಗಳನ್ನು ಸಂಪರ್ಕಿಸಿ ಮಾಹಿತಿ ನೀಡುವಂತೆ ಅಂಕಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾಗ್ತಾರಾ ? ನಿತಿನ್ ನಬಿನ್ ಕಾರ್ಯಾಧ್ಯಕ್ಷ ಹುದ್ದೆಯ ಹಿಂದಿದೆ ಮಾಸ್ಟರ್ ಪ್ಲ್ಯಾನ್

**ದೆಹಲಿ :** ಭಾರತೀಯ ಜನತಾ ಪಾರ್ಟಿಯ ನೂತನ ರಾಷ್ಟ್ರೀಯ ಕಾರ್ಯಾಧ್ಯಕ್ಷರಾಗಿ ನಿತಿನ್ ನಬಿನ್ ನೇಮಕಗೊಂಡಿದ್ದಾರೆ. ಇದರೊಂದಿಗೆ ಬಿಜೆಪಿಯ ಇತಿಹಾಸದಲ್ಲಿ ಈ ಹುದ್ದೆಯನ್ನು ಅಲಂಕರಿಸಿದ ಎರಡನೇ ವ್ಯಕ್ತಿ ಎನಿಸಿಕೊಂಡಿದ್ದಾರೆ. ಬಿಜೆಪಿಯ ಮೂಲ ನಿಯಮದ ಪ್ರಕಾರ ಕಾರ್ಯಾಧ್ಯಕ್ಷರ ನೇಮಕಾತಿಗೆ



ಯಾವುದೇ ಅವಕಾಶವಿಲ್ಲ. ಅದಾಗ್ಯೂ 2019ರ ಜೂನ್‌ನಲ್ಲಿ ಅಮಿತ್ ಶಾ ಕೇಂದ್ರ ಗೃಹ ಸಚಿವರಾದ ಬಳಿಕ ಜಯ ಪ್ರಕಾಶ್ ನಡ್ಡಾ (ಜೆ.ಪಿ. ನಡ್ಡಾ) ಅವರನ್ನು ಬಿಜೆಪಿ ಕಾರ್ಯಾಧ್ಯಕ್ಷರನ್ನಾಗಿ ನೇಮಕ ಮಾಡಲಾಯಿತು. ಆ ಬಳಿಕ ಅವರು 6 ತಿಂಗಳ ಕಾಲ ಈ ಹುದ್ದೆಯಲ್ಲಿದ್ದರು. ನಂತರ ಅವರು 2020ರಲ್ಲಿ ಬಿಜೆಪಿ ರಾಷ್ಟ್ರಾಧ್ಯಕ್ಷರಾಗಿ ಜವಾಬ್ದಾರಿ ವಹಿಸಿಕೊಂಡರು.

ಬಳಿಕ ನಡ್ಡಾ ಸುಮಾರು 6 ವರ್ಷಗಳ ಕಾಲ ಪಕ್ಷದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಬಿಜೆಪಿಯ ಮೂಲ ನಿಯಮದ ಪ್ರಕಾರ ಒಬ್ಬ ವ್ಯಕ್ತಿ ತಲಾ ಮೂರು ವರ್ಷಗಳ ಎರಡು ಅವಧಿಗೆ ಅಧ್ಯಕ್ಷರಾಗಿ ಸೇವೆ ಸಲ್ಲಿಸಬಹುದು.

# ಪೊಲೀಸ್ ಸಿಬ್ಬಂದಿ ಕಠಿಣ ಶ್ರಮದಿಂದ ಸಮಸ್ಯೆ ನಿಭಾಯಿಸುತ್ತಾರೆ: ಜಿಲ್ಲಾಧಿಕಾರಿ ಮೀನಾ ನಾಗರಾಜ್

**ಚಿಕ್ಕಮಗಳೂರು:** ಜಿಲ್ಲಾ ಪೊಲೀಸ್ ಇಲಾಖೆಯು ಬಂದೋಬಸ್ತ್ ಕಾರ್ಯಗಳಲ್ಲಿ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿದೆ. ಸಿಬ್ಬಂದಿಗಳು ಶೌರ್ಯ, ಧೈರ್ಯದಿಂದ ಎಲ್ಲಾ ಸಂದರ್ಭದಲ್ಲೂ ಸನ್ನದ್ಧರಾಗಿತ್ತಾರೆ. ಪ್ರತಿ ವರ್ಷ ಹಲವಾರು ಸವಾಲುಗಳನ್ನು ಎದುರಿಸಿ ಯಶಸ್ವಿಯಾಗಿ ನಿಭಾಯಿಸುತ್ತಾರೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜು ತಿಳಿಸಿದರು.

ನಗರದ ರಾಮನಹಳ್ಳಿ ಜಿಲ್ಲಾ ಶಸಸ್ತ್ರ ಮೀಸಲುಪಡೆ ಕವಾಯತು ಮೈದಾನದಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಏರ್ಪಡಿಸಲಾಗಿದ್ದ ಪೊಲೀಸ್ ಸಿಬ್ಬಂದಿಗಳ ಎರಡು ದಿನಗಳ ಜಿಲ್ಲಾಮಟ್ಟದ ಕ್ರೀಡಾಕೂಟದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ದತ್ತಜಯಂತಿ, ಗಣೇಶೋತ್ಸವ,



ದೇವೀರಮ್ಮನವರ ದೀಪೋತ್ಸವ, ಅತೀವೃಷ್ಠಿ ಸೇರಿದಂತೆ ಎಲ್ಲಾ ಸಂದರ್ಭಗಳಲ್ಲಿ ಉತ್ತಮವಾಗಿ ಕರ್ತವ್ಯ ನಿರ್ವಹಿಸಿದ್ದಾರೆ ಎಂದು ತಿಳಿಸಿದರು.

ಎರಡು ದಿನದ ಕ್ರೀಡಾಕೂಟದಲ್ಲೂ ಸಹ ನಾಯಕತ್ವ ಕೌಶಲ್ಯ, ಸಾಮರ್ಥ್ಯವನ್ನು ಸಿಬ್ಬಂದಿ ತೋರ್ಪಡಿಸಿದ್ದಾರೆ. ಭಾಗವಹಿಸಿದ ಎಲ್ಲಾ ಕ್ರೀಡಾಪಟುಗಳು ಹಾಗೂ ಪ್ರಶಸ್ತಿ ವಿಜೇತರನ್ನು ಅಭಿನಂದಿಸುತ್ತೇವೆ. ಸೋಲು–ಗೆಲುವು ಎನ್ನುವುದು ನಮ್ಮ ದಿನನಿತ್ಯದ ಜೀವನದಲ್ಲಿ ತೂಗಿಸಿಕೊಂಡು ಹೋಗುತ್ತಿರುತ್ತೇವೆ. ಅದೇ ರೀತಿ ಕ್ರೀಡಾ ಸ್ಪರ್ಧೆಗಳಲ್ಲೂ ಸೋಲು–ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ವಿಕ್ರಮ ಅಮಟೆ ಮಾತನಾಡಿ, ಕಾನ್ಸ್ಟೇಬಲ್‌ಗಳಿಂದ ಹಿಡಿದು ಡಿವೈಎಸ್ಪಿ ದರ್ಜೆವರೆಗಿನ ಎಲ್ಲಾ ಸಿಬ್ಬಂದಿ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದಾರೆ. ಪೊಲೀಸರಿಗೆ ತಂಡ ಸ್ಫೂರ್ತಿ ಮತ್ತು ಸನ್ನದ್ಧತೆ ಬಹಳ ಮುಖ್ಯವಾಗುತ್ತದೆ. ಇವೆರಡನ್ನೂ ಕ್ರೀಡಾ ಸ್ಪರ್ಧೆಗಳಿಂದ ಪಡೆಯಲು ಸಾಧ್ಯವಿದೆ. ವರ್ಷಪೂರ್ತಿ ಇದೇ ರೀತಿ ಕರ್ತವ್ಯದಲ್ಲೂ ಸ್ಫೂರ್ತಿ, ಸನ್ನದ್ಧತೆ ಇದ್ದರೆ ಮಾತ್ರ ತಂಡವಾಗಿ ಯಶಸ್ಸು ಸಾದಿಸಲು ಆಗುತ್ತದೆ ಎಂದು ಹೇಳಿದರು.

ಕ್ರೀಡಾಕೂಟದಲ್ಲಿ ಚಾಂಪಿಯನ್‌ಶಿಪ್ ಆಗಿ ಡಿ.ಎ.ಆರ್. ತಂಡ ಹೊರಹೊಮ್ಮಿತು. ವೈಯಕ್ತಿಕ ಚಾಂಪಿಯನ್‌ಶಿಪ್ ಅನ್ನು ಪುರುಷರ ವಿಭಾಗದಲ್ಲಿ ಡಿಎಆರ್‌ನ ಎಪಿಸಿ ಜಿ.ಕೆ.ಪ್ರಸನ್ನ ಹಾಗೂ ಮಹಿಳೆಯರ ವಿಭಾಗದಲ್ಲಿ ಕೊಪ್ಪ ಪೊಲೀಸ್ ಠಾಣೆಯ ಪಿಸಿ ಕು. ಆತ್ಮೀಯ ಅವರು ಪಡೆದುಕೊಂಡರು

## ರಾಶಿ ಭವಿಷ್ಯ

### ಮೇಷ ರಾಶಿ

ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ. ಪ್ರೀತಿಯಲ್ಲಿ ನಿಮ್ಮ ಅಸಭ್ಯ ವರ್ತನೆಗೆ ಕ್ಷಮೆ ಕೋರಿ. ಹೊಸ ಯೋಜನೆಗಳು ಮತ್ತು ವಿಚಾರಗಳನ್ನು ಕಾರ್ಯರೂಪಕ್ಕೆ ತರಲು ಒಳ್ಳೆಯ ದಿನ.

### ವೃಷಭ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಸಾಮಾಜಿಕ ಅಡೆತಡೆಗಳನ್ನು ದಾಟಲು ಸಾಧ್ಯವಾಗುವುದಿಲ್ಲ. ಹಗಲುಗನಸು ನಿಮ್ಮ ಪತನಕ್ಕೆ ಕಾರಣವಾಗುತ್ತದೆ – ಇತರರು ನಿಮ್ಮ ಕೆಲಸ ಮಾಡುತ್ತಾರೆಂದು ನಿರೀಕ್ಷಿಸಬೇಡಿ.

### ಮಿಥುನ ರಾಶಿ

ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ತ್ಯರಾಗಿರುತ್ತೀರಿ. ಕೋಪ ಅಲ್ಪಾವಧಿ ಹಾಗೂ ಅದು ನಿಮ್ಮನ್ನು ತೊಂದರೆಯಲ್ಲಿ ಸಿಲುಕಿಸಬಹುದೆಂದು ಅರ್ಥ ಮಾಡಿಕೊಳ್ಳುವ ಸಮಯ. ಕಳೆದ ಸಂತೋಷದ ನೆನಪುಗಳು ನಿಮ್ಮನ್ನು ವ್ಯಸ್ತವಾಗಿಡುತ್ತವೆ. ಚೆನ್ನಾಗಿ ಅರ್ಥಮಾಡಿಕೊಳ್ಳದೇ ಯಾವುದೇ ವ್ಯಾಪಾರ / ಕಾನೂನುಬದ್ಧ ಕಡತಕ್ಕೆ ಸಹಿ ಮಾಡಬೇಡಿ.

### ಕರ್ಕ ರಾಶಿ

ಕ್ರೀಡೆಗಳು ಮತ್ತು ಇತರೆ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಪ್ರೀತಿಪಾತ್ರರು ನಿಮ್ಮನ್ನು ದ್ವೇಷಿಸಿದರೂ ನೀವು ಪ್ರೀತಿ ತೋರಿಸಬೇಕು.

### ಸಿಂಹ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು. ಒಬ್ಬ ಸ್ನೇಹಿತ ತನ್ನ ವೈಯಕ್ತಿಕ ಸಮಸ್ಯೆಗಳನ್ನು ಪರಿಹರಿಸುವಲ್ಲಿ ನಿಮ್ಮ ಸಲಹೆ ಪಡೆದುಕೊಳ್ಳುತ್ತಾರೆ. ನಿಮ್ಮ ಪ್ರಿಯತಮೆಗೆ ನಿಮ್ಮ ಅಸಡ್ಡೆಯ ಗಮನ ಮನೆಯಲ್ಲಿ ಒತ್ತಡದ ಕ್ಷಣಗಳನ್ನು ತರಬಹುದು

### ಕನ್ಯಾ ರಾಶಿ

ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು. ಪ್ರಣಯ ಸಂಬಂಧದಲ್ಲಿ ನಿಮ್ಮನ್ನು ತಪ್ಪಾಗಿ ತಿಳಿದುಕೊಳ್ಳುವ ಸಾಧ್ಯತೆಯಿದೆ.

### ತುಲಾ ರಾಶಿ

ನಿಮ್ಮ ಜಗಳಗಂಟ ನಡವಳಿಕೆ ನಿಮ್ಮ ಸಂಬಂಧವನ್ನು ಶಾಶ್ವತವಾಗಿ ಹಾಳು ಮಾಡಬಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿಡಿ. ನೀವು ತೆರೆದ ಮನಸ್ಸನ್ನು ಹೊಂದುವ ಮೂಲಕ ಮತ್ತು ಯಾರಾದರ ವಿರುದ್ಧ ಪೂರ್ವಾಗ್ರಹವನ್ನು ಕೈಬಿಡುವ ಮೂಲಕ ಇದರಿಂದ ಹೊರಬರಬಹುದು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ನೀವು ಸ್ವಲ್ಪ ಪ್ರೀತಿ ಹಂಚಿಕೊಂಡಲ್ಲಿ ಇಂದು ನಿಮ್ಮ ಪ್ರಿಯತಮೆ ನಿಮ್ಮ ದೇವತೆಯಾಗುತ್ತಾಳೆ.

### ವೃಶ್ಚಿಕ ರಾಶಿ

ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಪ್ರೀತಿಪಾತ್ರರ ಭಾವನೆಗಳನ್ನು ಇಂದು ಅರ್ಥಮಾಡಿಕೊಳ್ಳಿ.

### ಧನು ರಾಶಿ

ನಿಮ್ಮ ಆರೋಗ್ಯ ಸುಧಾರಿಸಲು ಸಹಕಾರಿಯಾಗುವ ಕೆಲಸಗಳನ್ನು ಮಾಡಬಹುದಾದ ಒಂದು ದಿನ. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು. ನೀವು ಕುಟುಂಬದಲ್ಲಿ ಒಂದು ಸಂಧಿಗಾರನಂತೆ ವರ್ತಿಸುತ್ತೀರಿ. ಎಲ್ಲರ ಸಮಸ್ಯೆಗಳಿಗೂ ಕಿವಿಗೊಡಿ ಹಾಗೂ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

### ಮಕರ ರಾಶಿ

ಧ್ಯಾನ ಮತ್ತು ಆತ್ಮ ಸಾಕ್ಷಾತ್ಕಾರ ಪ್ರಯೋಜನಕಾರಿಯಾಗಬಹುದು. ಸಹೋದರ–ಸಹೋದರಿಯರ ಸಹಾಯದಿಂದ ಇಂದು ನೀವು ಅರ್ಥಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ ಕುಟುಂಬದ ಪರಿಸ್ಥಿತಿ ಇಂದು ನೀವು ಯೋಚಿಸುವ ಹಾಗೆ ಇರುವುದಿಲ್ಲ. ಇಂದು ಮನೆಯಲ್ಲಿ ಯಾವುದೇ ವಿಷಯದ ಬಗ್ಗೆ ಅಪಶ್ರುತಿ ಉಂಟಾಗುವ ಸಾಧ್ಯತೆ ಇದೆ. ಅಂತಹ ಪರಿಸ್ಥಿಯಲ್ಲಿ ನಿಮ್ಮನ್ನು ನಿಯಂತ್ರಿಸಿ.

### ಕುಂಭ ರಾಶಿ

ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಇಂದು ಹೂಡಿಕೆಗಳನ್ನು ಮಾಡಬಾರದು. ನೀವು ಕಛೇರಿಯಲ್ಲಿ ಹೆಚ್ಚು ಸಮಯ ಕಳೆದರೆ ನಿಮ್ಮ ಮನೆಯ ಜೀವನಕ್ಕೆ ಹಾನಿಯಾಗಬಹುದು. ನಿಮ್ಮ ನಗು ಯಾವುದೇ ಅರ್ಥ ಹೊಂದಿಲ್ಲ ನಗುವಿಗೆ ಧ್ವನಿಯಿಲ್ಲ ನಿಮ್ಮ ಸಂಗವಿಲ್ಲದಿದ್ದಾಗ ಹೃದಯ ಬಡಿಯುವುದನ್ನು ಮರೆಯುತ್ತದೆ.

### ಮೀನ ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ. ಮಕ್ಕಳಿಂದ ಅನಿರೀಕ್ಷಿತ ಸುದ್ದಿ ಸಂತೋಷದ ಕ್ಷಣಗಳನ್ನು ತರುತ್ತದೆ. ನಿಮ್ಮ ಪ್ರೀತಿ ಅಸಮ್ಮತಿಯನ್ನು ಆಮಂತ್ರಿಸಬಹುದು.

# ಕಾಲ ಕಾಲಕ್ಕೆ ರಾಜ್ಯ ಸರಕಾರ ಬಿಸಿಯೂಟ ಅಡುಗೆಯವರಿಗೆ ಗೌರವಧನ ಹೆಚ್ಚಿಸುತ್ತಲೇ ಬಂದಿದೆ

**ಚಿಕ್ಕಮಗಳೂರು:** ಕಾಲ ಕಾಲಕ್ಕೆ ರಾಜ್ಯ ಸರಕಾರ ಬಿಸಿಯೂಟ ಅಡುಗೆಯವರಿಗೆ ಗೌರವಧನ ಹೆಚ್ಚಿಸುತ್ತಲೇ ಬಂದಿದೆ. ಆದರೆ, ಕೇಂದ್ರಸರಕಾರ ತನ್ನ ಪಾಲನ್ನು ಆರಂಭದಿಂದಲೂ ಹೆಚ್ಚಿಸಿಲ್ಲ. ಸಂಘಟನಾತ್ಮಕ ಹೋರಾಟದಿಂದ ಸಮ ಪಾಲನ್ನು ಪಡೆಯಲು ಸಾಧ್ಯ ಎಂದು ಶಾಸಕ ಎಚ್.ಡಿ.ತಮ್ಮಯ್ಯ ಹೇಳಿದರು.

ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಯೋಜನೆ ಅಡಿ ನಗರದ ಎಂಇಎಸ್ ಸಭಾಂಗಣದಲ್ಲಿ ಶನಿವಾರ ಏರ್ಪಡಿಸಿದ್ದ ಅಡುಗೆ ಸಿಬ್ಬಂದಿ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದಾಗ ಅಕ್ಷರದಾಸೋಹ ಬಿಸಿಯೂಟ ಕಾರ್ಯಕ್ರಮ ಜಾರಿಯಾಗುತ್ತದೆ. ಆರಂಭದಲ್ಲಿ ಈಶಾನ್ಯ ಕರ್ನಾಟಕದಲ್ಲಿ ಜಾರಿಯಾಗಿ ನಂತರ ರಾಜ್ಯಾದ್ಯಂತ ವಿಸ್ತರಣೆಯಾಗಿದೆ.



ಬಿಸಿಯೂಟ ಕಾರ್ಯಕ್ರಮಕ್ಕೆ ಕೇಂದ್ರ ಸರಕಾರದಿಂದ ಶೇ.60 ರಷ್ಟು ಹಣ, ರಾಜ್ಯದಿಂದ ಶೇ.40 ರಷ್ಟು ಅನುದಾನದ ಒಪ್ಪಂದದಲ್ಲಿ ಈ ಯೋಜನೆ ಆರಂಭವಾಯಿತು. ಆರಂಭದಲ್ಲಿ ರಾಜ್ಯ 400 ರೂ., ಕೇಂದ್ರ 600 ರೂ. ಸೇರಿ 1 ಸಾವಿರ ನೀಡಲಾಗುತ್ತಿತ್ತು. ಯೋಜನೆ ಆಂಭವಾಗಿ ಇಲ್ಲಿಗೆ 23 ವರ್ಷ ಕಳೆದಿದೆ. ಆದರೆ, ಇಂದಿಗೂ ಕೇಂದ್ರ ತನ್ನ ಪಾಲಿನ ಕೇವಲ 600 ರೂ. ಮಾತ್ರ ನೀಡುತ್ತಿದೆ. ಆದರೆ, ರಾಜ್ಯ ಸರಕಾರ 400 ರಿಂದ 4 ಸಾವಿರ ರೂ ಗೆ ಗೌರವಧನ ಹೆಚ್ಚಿಸಿದೆ. ಕೇಂದ್ರವೂ 6 ಸಾವಿರ ನೀಡಿದ್ದರೆ ಇಂದು ನೀವು 10 ಸಾವಿರ ರೂ ಗೌರವಧನ ಪಡೆಯಬಹುದಿತ್ತು ಎಂದರು. ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಸರಕಾರವಿದೆ. ಆ ಪಕ್ಷದ ಮುಖಂಡರು ಮುಂದೊಂದು ದಿನ ನಿಮ್ಮ ಬಳಿಗೆ ಬಂದೇ ಬರುತ್ತಾರೆ. ಆಗ ಈ ಬಗ್ಗೆ ಪ್ರಶ್ನಿಸಿ. ಅಲ್ಲದೆ ಬಿಸಿಯೂಟ ಅಡುಗೆ ಸಿಬ್ಬಂದಿ ಸಂಘಟನಾತ್ಮಕವಾಗಿ ಹೋರಾಟ ರೂಪಿಸಿದರೆ ಕೇಂದ್ರದ ಪಾಲನ್ನು ಪಡೆಯುವುದು ಅಸಾಧ್ಯವಾದುದೇನಲ್ಲ ಎಂದರು. ಮುಂದಿನ ರಾಜ್ಯ ಬಜೆಟ್ ನಲ್ಲಿ ಅಡುಗೆಯವರಿಗೆ ಗೌರವಧನ ಹೆಚ್ಚಿಸಬೇಕು ಎಂಬ ಬೇಡಿಕೆ ಮುಂದೆ ಇಡುತ್ತೇನೆ ಎಂದರು.

ಅಕ್ಷರದಾಸೋಹ ಫೆಡರೇಶನ್ ಕಾರ್ಯದರ್ಶಿ ವಿಜಯ್‌ಕುಮಾರ್ ಮಾತನಾಡಿ. ಹೋರಾಟದಿಂದ ಅಡುಗೆ ಸಿಬ್ಬಂದಿ ವೇತನ ಹೆಚ್ಚಿಸುತ್ತಲೆ ಬಂದಿದ್ದೇವೆ. 23 ವರ್ಷದ ಹೋರಾಟದ ಫಲ ಇಂದು 4700 ರೂ.ಗೆ ಬಂದಿದೆ. ಅದೇ ಅಂತಿಮವಲ್ಲ. ಸಂಘದ ಕಾರ್ಯಕ್ರಮಗಳಿಗೆ ಶೇ.50 ಜನ ಮಾತ್ರ ಬರುತ್ತಿದ್ದೀರಿ. ಪೂರ್ಣ ಪ್ರಮಾಣದಲ್ಲಿ ಸಂಘಕ್ಕೆ ಬಂದಲ್ಲಿ ನಿಮ್ಮ ಬೇಡಿಕೆಗಳ ಸಂಪೂರ್ಣ ಈಡೇರಿಕೆಗೆ ಸಹಾಯವಾಗಲಿದೆ ಎಂದರು.

ಪಿಎಂ ಪೋಷಣ್ ಶಿಕ್ಷಣಾಕಾರಿ ಎಸ್.ಪಿ.ನಟರಾಜ್ ಮಾತನಾಡಿ, ಇಡೀ ರಾಜ್ಯದಲ್ಲಿ ಕೇಂದ್ರ ಮತ್ತು ರಾಜ್ಯ ಸರಕಾರಗಳು ಶಾಲಾ ಮಕ್ಕಳಿಗಾಗಿ ಅತ್ಯುತ್ತಮ ಯೋಜನೆಗಳನ್ನು ಜಾರಿಗೆ ತರುತ್ತಿವೆ. ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಕೊಡುವ ಮೂಲಕ ವಿದ್ಯೆಗೆ ಪೂರಕವಾದ ವಾತಾವರಣ ಕಲ್ಪಿಸಲು ಮುಂದಾಗಿವೆ ಎಂದರು. ಶಿಕ್ಷಣ ಅಕಾರಿ ನೀಲಕಂಠ ಸ್ವಾಗತಿಸಿದರು. ಅಕ್ಷರದಾಸೋಹ ಫೆಡರೇಶನ್ ಅಧ್ಯಕ್ಷ ಜಿ.ರಘು, ಬಿಇಒ ರುದ್ರಪ್ಪ, ನಟರಾಜ್, ತಾಪಂ ಇಒ ವಿಜಯ್‌ಕುಮಾರ್, ಇಂಧುಮತಿ, ಸಮೀಮಾಭಾನು, ಕಾಂತರಾಜು, ಅಂಜನಪ್ಪ, ಪೂರ್ಣೇಶ್ ಮತ್ತಿತರರಿದ್ದರು.

# ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು

**ದಾವಣಗೆರೆ :** ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎನ್ನುವುದು ಕಾನೂನು ಪ್ರಾಧಿಕಾರದ ಮುಖ್ಯ ಉದ್ದೇಶವಾಗಿದ್ದು ಸಮಾಜದಲ್ಲಿ ವಾಸಿಸುವಂತಹ ಕಟ್ಟ ಕಡೆಯ ವ್ಯಕ್ತಿಗೂ ಕಾನೂನಿನ ಬಗ್ಗೆ ಅರಿವು ಮೂಡಿಸುವುದು ರಾಷ್ಟ್ರೀಯ ಸೇವಾ ಕಾನೂನು ಪ್ರಾಧಿಕಾರದ ಮುಖ್ಯ ಉದ್ದೇಶವಾಗಿದೆ ಎಂದು ದಾವಣಗೆರೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರು ಮತ್ತು ಪ್ರಧಾನ ಜಿಲ್ಲಾ ಸತ್ರ ನ್ಯಾಯಾದೀಶರಾದ ವೇಲಾ ಡಿ.ಕೆ. ಹೇಳಿದರು.

ಭಾನುವಾರ ಚನ್ನಗಿರಿ ತಾಲೂಕಿನ ಹೊನ್ನೇಮರದಹಳ್ಳಿ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲಾ ಅವರಣದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು. ಜಿಲ್ಲಾಡಳಿತ, ತಾಲೂಕು ಕಾನೂನು ಸೇವಾ ಸಮಿತಿ, ತಾಲೂಕು ಆಡಳಿತ ಮತ್ತು ಹೊನ್ನೇಮರದಹಳ್ಳಿ ಗ್ರಾಮಸ್ಥರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಪ್ರತಿಯೊಬ್ಬರಲ್ಲಿ ಕಾನೂನು ಅರಿವು ಇದ್ದರೆ ಅಪರಾಧಗಳ ಸಂಖ್ಯೆಯೂ ಸಹ ಕಡಿಮೆಯಾಗುತ್ತದೆ ಎಂದರು.

ಒಂದು ಗ್ರಾಮೀಣ ಪ್ರದೇಶದಲ್ಲಿ ಕಾನೂನಿನ ಬಗ್ಗೆ ತಿಳಿದುಕೊಳ್ಳುವಂತಹ ಆಸಕ್ತಿಯನ್ನು ಗ್ರಾಮಸ್ತರು ಹೊಂದಿರುವುದು ನಿಜಕ್ಕೂ ಸಂತಸದ ಸಂಗತಿಯಾಗಿದೆ. ಗ್ರಾಮಸ್ಥರು ಈ ಗ್ರಾಮಕ್ಕೆ ಆಗತ್ಯವಿರುವಂತಹ ಮೂಲಭೂತ ಸೌಕರ್ಯಗಳ ಬಗ್ಗೆ ಮಾಹಿತಿಯನ್ನು ಸಹ ನೀಡಿದ್ದು ಮುಖ್ಯವಾಗಿ ಇಲ್ಲಿಗೆ ಬಸ್ ಸಂಚಾರ ವ್ಯವಸ್ಥೆ ಆಗತ್ಯವಿದ್ದು ಈ ಕಾರ್ಯಕ್ರಮದ ಮೂಲಕವಾಗಿ ಅದನ್ನು ಕಲ್ಪಿಸಲಾಗಿದೆ ಎಂದರು .ಅದಕ್ಕಾಗಿ ರಾಷ್ಟ್ರೀಯ ಕಾನೂನು ಪ್ರಾಧಿಕಾರವು ಸಾಮಾನ್ಯ ಜನರಿಗೆ ಕಾನೂನನ್ನು ತಲುಪಿಸುವ ಉದ್ದೇಶದಿಂದ 2009ರಲ್ಲಿ ರಾಷ್ಟ್ರೀಯ ಜಾಗೃತಿ ಸಲಹೆಯನ್ನು ಹುಟ್ಟುಹಾಕಿದ್ದು ಕಾನೂನಿನಲ್ಲಿ ತೊಂದರೆಗಳು ಉಂಟಾದರೆ ರಕ್ಷಣೆ ನೀಡುವುದು ಇದರ ಮುಖ್ಯ ಉದ್ದೇಶವಾಗಿದೆ ಎಂದರು. ಕಾನೂನು ನೆರವು ಕಾರ್ಯಕ್ರಮದ ಮೂಲಕ ತಾಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಸಹ ಬಾಗವಹಿಸಿದ್ದು ಗ್ರಾಮಸ್ಥರ ಸಾಕಷ್ಟು ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳುವುದು ಆಗಿದೆ ಎಂದರು.




ಪಾಂಡೋಮಟ್ಟಿ ವಿರಕ್ತ ಮಠದ ಡಾ. ಗುರುಬಸವ ಸ್ವಾಮಿಗಳು ಮಾತನಾಡಿ ಒಂದು ಸಣ್ಣ ಹಳ್ಳಿಯಲ್ಲಿ ತಾಲೂಕಿನ ಅಡಳಿತ ವ್ಯವಸ್ಥೆ 4 ಜನ ನ್ಯಾಯಾಧೀಶರ ಸಮ್ಮುಖದಲ್ಲಿ ಸಮಸ್ಯೆಗಳನ್ನು ಬಗೆಹರಿಸಲು ಮುಂದಾಗಿರುವುದು ಈ ಗ್ರಾಮಕ್ಕೆ ಹೆಮ್ಮೆಯಾಗಿದೆ. ಕಾನೂನಿಗಿಂತ ದೊಡ್ಡವರು ಯಾರು ಇಲ್ಲ. ಸಂವಿಧಾನ ಪೀಠಿಕೆಯನ್ನು ಮೆಲಕು ಹಾಕಬೇಕು. ಉಳ್ಳವರ ದಬ್ಬಾಳಿಕೆ ಹೆಚ್ಚಾಗಿದೆ. ಇಲ್ಲದವರ ಶಕ್ತಿಯನ್ನು ಕಬಳಿಸುವ ಕೆಲಸ ಉಳ್ಳವರದ್ದು ಆಗಿದ್ದು ನಾಟಕದ ಮೂಲಕ ಅದನ್ನು ಪ್ರಸ್ತುತ ಪಡಿಸಲಾಗಿದೆ. ಸಂವಿಧಾನ ನಮಗೆ ಶ್ರೇಷ್ಟವಾದ ಕಾನೂನು ನೀಡಿದ್ದು ನಮ್ಮ ಹಕ್ಕನ್ನು ನಾವೇ ಪ್ರತಿಪಾಧಿಸಬೇಕು. ಗ್ರಾಮೀಣ ಪ್ರದೇಶಗಳಲ್ಲಿ ಅನಾವಶ್ಯಕವಾಗಿ ಜಾತಿನಿಂದನೆ ಪ್ರಕರಣಗಳು ದಾಖಲಾಗುತ್ತಿದ್ದು ಇಂತಹ ಪ್ರಕರಣಗಳ ಬಗ್ಗೆ ಪುನರ್ ಪರಿಶೀಲನೆಯಾಗಬೇಕಿದೆ. ಆತಿಹಕ್ಕು ಪ್ರಕರಣಗಳಲ್ಲಿ ಸಹ ತಂದೆ ತಾಯಿಗಳ ಆಸ್ತಿ ಪಡೆದು ಮಕ್ಕಳು ತಂದೆ ತಾಯಿಯನ್ನು ವೃದ್ಧಾಶ್ರಮಗಳಿಗೆ ನೂಕುತ್ತಿದ್ದು ಇಂತಹ ಪ್ರಕರಣಗಳಲ್ಲಿ ವೃದ್ದರ ಬಗ್ಗೆ ಗಮನಹರಿಸಬೇಕು ಎಂದರು.

ಚನ್ನಗಿರಿಯ ಹಿರಿಯ ಸಿವಿಲ್ ನ್ಯಾಯಾದೀಶರಾದ ಸೌಬಾಗ್ಯ ಬುಷೇರ ಮಾತನಾಡಿ ಸಾಮಾನ್ಯ ಜನರಿಗೆ ನ್ಯಾಯ ನೀಡುವ ಉದ್ದೇಶದಿಂದ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಮತ್ತು ತಾಲೂಕು ಕಾನೂನು ಸೇವಾ ಸಮಿತಿ ತೆರೆಯಲಾಗಿದ್ದು ಅಗತ್ಯ ಇರುವವರು ಇದರ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಈ ಕಾರ್ಯಕ್ರಮವು ಒಂದು ಇತಿಹಾಸವನ್ನು ಬರೆಯುವಂತಹ ಕಾರ್ಯಕ್ರಮವಾಗಿದ್ದು ಆಗತ್ಯವಿರುವಂತಹ ಗ್ರಾಮಗಳಲ್ಲಿ ಮಾಡಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಗ್ರಾಮದ ಜನರು ನ್ಯಾಯಾದೀಶರೊಂದಿಗೆ ಸಂವಾದ ಕಾರ್ಯಕ್ರಮವನ್ನು ಸಹ ನಡೆಸಿ ತಮ್ಮ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಂಡರು. ಕಾರ್ಯಕ್ರಮದಲ್ಲಿ ಪ್ರಧಾನ ಸಿವಿಲ್ ನ್ಯಾಯಾದೀಶರಾದ ಶಮ ಶ್ರೀ ವತ್ಸ, ಪ್ರಧಾನ ಸಿವಿಲ್ ನ್ಯಾಯಾದೀಶರಾದ ಮಹಾಲಕ್ಷ್ಮಿ ಎ.ಎಸ್.ಪಿ.ಸ್ಯಾಮ್ ವರ್ಗಿಸ್, ತಹಶೀಲ್ದಾರ್ ಎನ್.ಜೆ. ನಾಗರಾಜ್, ತಾಲೂಕು ವಕೀಲರ ಸಂಘದ ಅಧ್ಯಕ್ಷ ಮೋಹನ್ ಎಚ್, ಬಿ.ಇ.ಓ. ಜಯ್ಯಪ್ಪ ಇತರರು ಹಾಜರಿದ್ದರು.

# ದಸ್ತಾವೇಜು ಬರಹಗಾರರಿಗೆ ಹಾಗೂ ವಕೀಲರಿಗೆ ಪ್ರತ್ಯೇಕ ಲಾಗಿನ್ ನೀಡುವುದು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಧರಣಿ

**ಗದಗ:** ದಸ್ತಾವೇಜು ಬರಹಗಾರರಿಗೆ ಹಾಗೂ ವಕೀಲರಿಗೆ ಪ್ರತ್ಯೇಕ ಲಾಗಿನ್ ನೀಡುವುದು ಸೇರಿ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ದಸ್ತಾವೇಜು ಬರಹಗಾರರ ಅಸೋಸಿಯೇಷನ್ ತಾಲೂಕು ಘಟಕದ ಸದಸ್ಯರು ಹಾಗೂ ದಸ್ತಾವೇಜು ಬರಹಗಾರರು ನಗರದ ಸಬ್ ರಿಜಿಸ್ಟ್ರಾರ್ ಕಚೇರಿ ಎದುರು ಶುಕ್ರವಾರ ಪ್ರತಿಭಟನೆ ನಡೆಸಿದರು.

ಇತ್ತೀಚಿನ ಗಣಕೀಕೃತ ಇ–ಸ್ವತ್ತು ಮತ್ತು ಇ–ಅಸ್ತಿ ದಾಖಲೆಗಳಿಂದ ನೋಂದಣಿಗೆ ಆಗುತ್ತಿರುವ ತಪ್ಪುಗಳನ್ನು ಸರಿಪಡಿಸಬೇಕು. ಅನಧಿಕೃತ ವ್ಯಕ್ತಿಗಳನ್ನು ತಡೆಗಟ್ಟಬೇಕು ಮತ್ತು ಕರ್ನಾಟಕ ರಾಜ್ಯ ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಮಹಾ ಪರಿವೀಕ್ಷಕರಿಂದ ರಾಜ್ಯದ ಎಲ್ಲಾ ಪತ್ರ (ದಸ್ತಾವೇಜು) ಬರಹಗಾರರಿಗೆ ಏಕ ಮಾದರಿಯ ಗುರುತಿನ ಚೀಟಿ ನೀಡಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಪತ್ರ ಬರಗಾರರಿಗೆ ಸೇವಾ ಭದ್ರತೆ ಒದಗಿಸುವುದು ಸೇರಿ

ನೋಂದಣಿಯಾಗುವ ಎಲ್ಲಾ ದಸ್ತಾವೇಜುಗಳಿಗೆ ಕಡ್ಡಾಯವಾಗಿ ಪತ್ರ ಬರಹಗಾರರ ಅಥವಾ ವಕೀಲರ ಲೀಗಲ್ ಕಾಂಟ್ಯಾಕ್ಟ್ ಕಡ್ಡಾಯಗೊಳಿಸಬೇಕು ಎಂದು ಆಗ್ರಹಿಸಿದರು.

ಇತ್ತೀಚೆಗೆ ಕಾವೇರಿ 2.0 ತಂತ್ರಾಂಶದಲ್ಲಿ ಸಿಟಿಜನ್ ಲಾಗಿನ್ ಅಳವಡಿಸಿದ್ದು, ಇದರ ಮೂಲಕ ದಸ್ತಾವೇಜುಗಳ ಬಗ್ಗೆ ಮಾಹಿತಿ ಇಲ್ಲದ ಅನಧಿಕೃತ ವ್ಯಕ್ತಿಗಳು ಸಹ ಪತ್ರ ಅಪ್ಲೋಡ್ ಮಾಡುತ್ತಿದ್ದಾರೆ. ಇದರಿಂದ ಸಾರ್ವಜನಿಕರಿಗೆ, ಸರ್ಕಾರದ ಬೊಕ್ಕಸಕ್ಕೆ ಆರ್ಥಿಕ ನಷ್ಟವಾಗುತ್ತಿದೆ. ಅಧಿಕೃತ ಪತ್ರ ಬರಹಗಾರರ ಜೀವನಕ್ಕೆ ತೊಂದರೆಯಾಗುತ್ತಿದೆ ಎಂದು ಮನವರಿಕೆ ಮಾಡಿಕೊಟ್ಟರು.

ದಸ್ತಾವೇಜು ಬರಹಗಾರರಾದ ಅಶೋಕ ಪರದೇಶಿ, ಹನುಮಂತಸಾ ರಂಗರೇಜ್, ಪ್ರಕಾಶ ಗಾಳಪ್ಪನವರ, ವೀರೇಶ ಕುಲಕರ್ಣಿ, ಗುರುದೇವ ಹಿರೇಮಠ, ನಾಗರಾಜ ದೊಡ್ಡಮನಿ ಹಾಗೂ ಪಿ.ವಿ. ಘಳಿಗೆ ಸೇರಿ ಇತರರು ಪಾಲ್ಗೊಂಡಿದ್ದರು.

# ಸಿಡ್ನಿ ಕಡಲತೀರದಲ್ಲಿ ಯಹೂದಿಗಳ ನರಮೇಧ; ಮೃತರ ಸಂಖ್ಯೆ 16ಕ್ಕೆ ಏರಿಕೆ

**ಸಿಡ್ನಿ:** ಧಾರ್ಮಿಕ ಕಾರ್ಯಕ್ರಮವೊಂದರ ನಿಮಿತ್ತ ಆಸ್ಟ್ರೇಲಿಯಾದ ಸಿಡ್ನಿಯ ಬೋಂಡಿ ಕಡಲತೀರದಲ್ಲಿ ಜಮಾವಣೆಯಾಗಿದ್ದ ಸುಮಾರು 2000 ಯಹೂದಿಗಳ ಮೇಲೆ ಇಬ್ಬರು ಗುಂಡಿನ ದಾಳಿ ನಡೆಸಿದ್ದು, ಪರಿಣಾಮ 16 ಮಂದಿ ಸಾವನ್ನಪ್ಪಿದ್ದಾರೆ.


ದಾಳಿ ಬೆನ್ನಲ್ಲೇ ಪೊಲೀಸರು ಪ್ರತಿದಾಳಿ ನಡೆಸಿ ಓರ್ವ ಬಂಧೂಕುಧಾರಿಯನ್ನು ಹತ್ಯೆ ಮಾಡಿದ್ದಾರೆ. ಮತ್ತೊಬ್ಬನನ್ನು ಬಂಧಿಸಲಾಗಿದ್ದು, ಆತನ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.

ಗಾಯಗೊಂಡಿರುವ ಆರೋಪಿ ಸಿಡ್ನಿಯಲ್ಲಿ ಡ್ರೈವರ್ ಆಗಿದ್ದ ನವೀದ್ ಅಕ್ರಮ್ (24) ಎಂದು ಗುರ್ತಿಸಲಾಗಿದೆ. ಈತ ಪಾಕಿಸ್ತಾನ ಮೂಲದವನು ಎಂದು ಪತ್ರಿಕೆಯೊಂದು ವರದಿ ಮಾಡಿದೆ.

ಮೃತ ವ್ಯಕ್ತಿ ಹಾಗೂ ಗಾಯಗೊಂಡಿರುವ ವ್ಯಕ್ತಿ ತಂದೆ ಹಾಗೂ ಮಗನಾಗಿದ್ದಾನೆಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ನ್ಯೂ ಸೌತ್ ವೇಲ್ಸ್ ಪೊಲೀಸ್ ಆಯುಕ್ತ ಮಾಲ್ ಲ್ಯಾನ್ಯನ್ ಅವರು ಮಾತನಾಡಿ, ಒಬ್ಬ ಗುಂಡು ಹಾರಿಸಿದ ವ್ಯಕ್ತಿ ಭದ್ರತಾ ಸಂಸ್ಥೆಗೆ ತಿಳಿದಿರುವ ವ್ಯಕ್ತಿಯೇ ಆಗಿದ್ದು, ಇದು ಯೋಜಿತ ದಾಳಿ ಎಂಬುದಕ್ಕೆ ಯಾವುದೇ ಸುಳಿವುಗಳು ಸಿಗುತ್ತಿಲ್ಲ ಎಂದು ಹೇಳಿದ್ದಾರೆ.

ಘಟನೆಯಲ್ಲಿ ಗಾಯಗೊಂಡಿರುವ 42 ಮಂದಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ



ಕೊಡಿಸಲಾಗುತ್ತಿದ್ದು, ಹಲವರ ಸ್ಥಿತಿ ಗಂಭೀರವಾಗಿದೆ ಎಂದು ತಿಳಿಸಿದ್ದಾರೆ.

ಇನ್ನು ಘಟನೆಯನ್ನು ಆಸ್ಟ್ರೇಲಿಯಾ ಪ್ರಧಾನಿ ಆಂಟನಿ ಅಲ್ಬನೀಸ್, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಭಾರತದ ಪ್ರಧಾನಿ ನರೇಂದ್ರ ಮೋದಿ ಖಂಡಿಸಿದ್ದಾರೆ.

ಯಹೂದಿಗಳ 'ಹನಕ್ಕಾ' ಧಾರ್ಮಿಕ ಹಬ್ಬ 8 8 ದಿನಗಳ ಕಾಲ ನಡೆಯುತ್ತದೆ. ಭಾನುವಾರ ಹಬ್ಬದ ಮೊದಲ ದಿನವಾಗಿದ್ದು, 1000–2000 ಯಹೂದಿಗಳು ಹಬ್ಬದ ಆಚರಣೆಗಾಗಿ ಸಿಡ್ನಿಯ ಬೋಂಡಿ ಕಡಲತೀರದಲ್ಲಿ ಸೇರಿದ್ದರು.

ಸಂಜೆ 6:30ರ ಸುಮಾರಿಗೆ (ಆಸ್ಟ್ರೇಲಿಯಾ ಕಾಲಮಾನ) ಇಬ್ಬರು ಬಂದೂಕುಧಾರಿಗಳು ಸ್ಥಳಕ್ಕೆ ನುಗ್ಗಿ ಗುಂಡಿನ ದಾಳಿ ನಡೆಸಿದ್ದಾರೆ. 50 ಬಾರಿ ಗುಂಡು ಹಾರಿಸಿರುವುದು ವರದಿಯಾಗಿದೆ. ಉಗ್ರರು ಮಕ್ಕಳು ಮತ್ತು ವೃದ್ಧರನ್ನೇ ಗುರಿಯಾಗಿಸಿ ದಾಳಿ ಮಾಡಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ.

ಈ ವೇಳೆ ಅನೇಕರು ಸ್ಥಳದಲ್ಲೇ ಸಾವಿಗೀಡಾದರೆ, 50ಕ್ಕೂ ಹೆಚ್ಚು ಜನರಿಗೆ ಗಾಯಗಳಾಗಿವೆ. ಬಂದೂಕು ದಾಳಿಗೆ ಬೆಚ್ಚಿ ಜನರು ದಿಕ್ಕಾಪಾಲಾಗಿ ಓಡಿದ್ದಾರೆ.

# ಶಾಮನೂರು ಶಿವಶಂಕರಪ್ಪರು ಸರ್ವಧರ್ಮೀಯರ ಧೀಮಂತ ನಾಯಕರು ಸೈಯದ್ ಖಾಲಿದ್ ಅಹ್ಮದ್ ಸಂತಾಪ



**ದಾವಣಗೆರೆ:** ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರಾಧ್ಯಕ್ಷ ಶಾಮನೂರು ಶಿವಶಂಕರಪ್ಪರ ನಿಧನಕ್ಕೆ ರಾಷ್ಟ್ರೀಯ ಯುವ ಕಾಂಗ್ರೆಸ್ ಕಾರ್ಯದರ್ಶಿ ಸೈಯದ್ ಖಾಲಿದ್ ಅಹ್ಮದ್ ಸಂತಾಪ ಸೂಚಿಸಿದ್ದಾರೆ.

ಶಿಕ್ಷಣ ಕ್ಷೇತ್ರ, ರಾಜಕೀಯ, ಆಡಳಿತ, ಸರ್ವಧರ್ಮೀಯರನ್ನು ಸಮಾನಾಗಿ ಕಾಣುವ ಸರ್ವಧರ್ಮೀಯರ ನಾಯಕರಾಗಿದ್ದ ಶಾಮನೂರು ಶಿವಶಂಕರಪ್ಪರ ದೂರದೃಷ್ಟಿತ್ವ ಅಪಾರ. ದಾವಣಗೆರೆ ಜಿಲ್ಲೆಗೆ ನೀಡಿರುವ ಕೊಡುಗೆ ಅಪಾರ ಎಂದು ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.

ಶಾಮನೂರು ಶಿವಶಂಕರಪ್ಪರು ಆರು ಬಾರಿ ಶಾಸಕರಾಗಿ, ಒಮ್ಮೆ ಸಚಿವರಾಗಿ, ಸಂಸದರಾಗಿ ಅಜಾತಶತ್ರು ರಾಜಕಾರಣಿಯಾಗಿದ್ದರು. ಉದ್ಯಮದಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದ ಶಾಮನೂರು ಶಿವಶಂಕರಪ್ಪರ ಜನೋಪಯೋಗಿ ಕಾರ್ಯಗಳು ಎಂದೆಂದಿಗೂ ಅಜರಾಮರ. ಬಾಪೂಜಿ ವಿದ್ಯಾಸಂಸ್ಥೆ ಸೇರಿದಂತೆ ಕೈಗಾರಿಕೆ, ಶೈಕ್ಷಣಿಕ, ವೈದ್ಯಕೀಯ ಮತ್ತು ರಾಜಕೀಯ ಕ್ಷೇತ್ರಗಳಲ್ಲಿ ಅಪಾರ ಅನುಭವ ಉಳ್ಳವರಾಗಿದ್ದ ಶಿವಶಂಕರಪ್ಪರು 95ನೇ ವಯಸ್ಸಿನಲ್ಲಿಯೂ ಜನಪರ ಕಾಳಜಿ ಹೊಂದಿದ್ದ ಅಪರೂಪದ ವ್ಯಕ್ತಿತ್ವ ಹೊಂದಿದ್ದ ಧೀಮಂತ ನಾಯಕರು ಎಂದು ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.

# ಕರ್ನಾಟಕದ ಕಾಫಿ ಬೆಳೆಗಾರರಿಂದ ಸ್ವಂತ ಹವಾಮಾನ ಕೇಂದ್ರ ಸ್ಥಾಪನೆ!

**ಬೆಂಗಳೂರು:** ಹವಾಮಾನ ವೈಪರೀತ್ಯದಿಂದ ಬೆಳೆಗಳನ್ನು ರಕ್ಷಿಸಲು, ರಾಜ್ಯದ ಕಾಫಿ ಬೆಳೆಗಾರರು ತಮ್ಮ ಎಸ್ಟೇಟ್‌ಗಳಲ್ಲಿ ಸ್ವಯಂಚಾಲಿತ ಹವಾಮಾನ ಕೇಂದ್ರಗಳನ್ನು ಸ್ಥಾಪಿಸುತ್ತಿದ್ದಾರೆ.ಭಾರತೀಯ ಹವಾಮಾನ ಇಲಾಖೆ ಮತ್ತು ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ಮೇಲ್ವಿಚಾರಣಾ ಕೇಂದ್ರವು ವಿವಿಧ ಸಂಶೋಧನೆ ಮತ್ತು ಶಿಕ್ಷಣ ಸಂಸ್ಥೆಗಳ ಜೊತೆಗೆ ಈ ಉದ್ಯಮಕ್ಕಾಗಿ ಎಸ್ಟೇಟ್ ಮಾಲೀಕರಿಗೆ ಬೆಂಬಲ ನೀಡುತ್ತಿದೆ.ಕಾಫಿ ಮಂಡಳಿಯ ಅಧಿಕಾರಿಗಳು ಹವಾಮಾನ ವೀಕ್ಷಣಾಲಯಗಳನ್ನು ಅನೇಕ ಸ್ಥಳಗಳಲ್ಲಿ ಸ್ಥಾಪಿಸಲಾಗುತ್ತಿದೆ ಎಂದು ಹೇಳಿದ್ದಾರೆ. ಅವುಗಳಲ್ಲಿ ಕೆಲವು ಮಂಡಳಿಯಿಂದ ಅನುಮತಿ ಮತ್ತು ಪ್ರಮಾಣೀಕರಣವನ್ನು ಪಡೆಯುತ್ತಿವೆ. ಇವುಗಳನ್ನು ಕೊಡಗು, ಚಿಕ್ಕಮಗಳೂರು ಮತ್ತು ಹಾಸನ ಸೇರಿದಂತೆ 10 ಸ್ಥಳಗಳಲ್ಲಿ ಸ್ಥಾಪಿಸಲಾಗಿದೆ.ಹೂಬಿಡುವ, ಕೊಯ್ಲು ಮಾಡುವ ಸಮಯದಲ್ಲಿ ಮತ್ತು ಹುರುಳಿ ಒಣಗಿಸುವ ಸಮಯದಲ್ಲಿ ನಿಖರವಾದ ಹವಾಮಾನ ಮಾಹಿತಿಯ ಅವಶ್ಯಕತೆಯಿದೆ. ಹವಾಮಾನ ವೈಪರೀತ್ಯದಿಂದಾಗಿ ಹುರುಳಿ ಮತ್ತು ಹೂವು ಹಾನಿಗೊಳಗಾದ ನಿದರ್ಶನಗಳು ಹಿಂದೆ ಇದ್ದವು. ಐಎಂಡಿ ವೀಕ್ಷಣಾಲಯಗಳು ಅಗತ್ಯವಿರುವ ಸ್ಥಳಗಳಿಂದ ದೂರವಿದ್ದು, ಸಕಾಲಿಕ ನವೀಕರಣಗಳು ಯಾವಾಗಲೂ ಲಭ್ಯವಿರುವುದಿಲ್ಲ. ಹೀಗಾಗಿ ಎಸ್ಟೇಟ್ ಮಾಲೀಕರು ತಮ್ಮದೇ ಆದ ವೀಕ್ಷಣಾಲಯಗಳನ್ನು ಸ್ಥಾಪಿಸುತ್ತಿದ್ದಾರೆ "ಎಂದು ಅಧಿಕಾರಿ ಹೇಳಿದ್ದಾರೆ.ತಮಿಳುನಾಡು, ಕೇರಳ, ಅಸ್ಸಾಂ, ಆಂಧ್ರಪ್ರದೇಶ ಮತ್ತು ಕರ್ನಾಟಕದಲ್ಲಿ ಹವಾಮಾನ ವೀಕ್ಷಣಾಲಯಗಳನ್ನು ಸ್ಥಾಪಿಸುವ ಬಗ್ಗೆಯೂ ಮಂಡಳಿ ಕೆಲಸ ಮಾಡುತ್ತಿದೆ. "ದೂರದ ಸ್ಥಳಗಳಲ್ಲಿ ಕುಳಿತು ಹವಾಮಾನ ಮತ್ತು ಹವಾಮಾನ ಬದಲಾವಣೆಗಳ ಬಗ್ಗೆ ಮಾಹಿತಿ ಪಡೆಯುವುದು ಇದರ ಉದ್ದೇಶವಾಗಿದೆ" ಎಂದು ಅಧಿಕಾರಿ ತಿಳಿಸಿದ್ದಾರೆ.ಐಐಎಂ–ಬೆಂಗಳೂರಿನಲ್ಲಿರುವ ನಡತೂರ್ ಎಸ್ ರಾಘವನ್ ಸೆಂಟರ್ ಫಾರ್ ಎಂಟರ್‌ಪ್ರೆನ್ಯೂರಿಯಲ್ ಲರ್ನಿಂಗ್(ಎನ್‌ಆರ್‌ಎಸ್‌ಸಿಇಎಲ್)ನಲ್ಲಿ ಇನ್ಕ್ಯುಬೇಟ್ ಮಾಡಲಾದ ಕೃಷಿ ತಂತ್ರಜ್ಞಾನದ ಸಾಪ್ ಡೀಪ್‌ಫ್ಲೋ ಟೆಕ್ನಾಲಜೀಸ್‌ನೊಂದಿಗೆ ಪಾಲುದಾರಿಕೆ ಹೊಂದಿದ್ದು, ಎಸ್ಟೇಟ್‌ಗಳಲ್ಲಿ ವರ್ಧಿತ ಹವಾಮಾನ ಕೇಂದ್ರ ಮತ್ತು ಇಂದ್ರವೆದರ್ ಕೇಂದ್ರವನ್ನು ಸ್ಥಾಪಿಸಲು ಪ್ರಯತ್ನಿಸುತ್ತಿದ್ದೇವೆ ಎಂದು ಚಿಕ್ಕಮಗಳೂರಿನ ಕೇಳಚಂದ್ರ ಕಾಫಿಯ ಸಿಎಸ್‌ಆರ್ ಮತ್ತು ಸುಸ್ಥಿರತೆಯ ಮುಖ್ಯಸ್ಥೆ ರಿಷಿನಾ ಕುರುವಿಲ್ಲಾ ಅವರು ಹೇಳಿದ್ದಾರೆ.

ಶತಮಾನೋತ್ಸವ ಆಚರಣೆ

ಚಿಕ್ಕಮಗಳೂರಿನಲ್ಲಿ ಕಾಫಿ ಮಂಡಳಿ ಸ್ಥಾಪಿಸಿದ ಮೊದಲ ಸಂಶೋಧನಾ ಕೇಂದ್ರವು ಡಿಸೆಂಬರ್ 20 ರಂದು ತನ್ನ ಶತಮಾನೋತ್ಸವವನ್ನು ಆಚರಿಸಲಿದೆ. ಕೇಂದ್ರ ಸಚಿವರಾದ ಪಿಯೂಷ್ ಗೋಯಲ್, ಎಚ್‌ಡಿ ಕುಮಾರಸ್ವಾಮಿ ಮತ್ತು ಪ್ರಹ್ಲಾದ್ ಜೋಶಿ ಡಿಸೆಂಬರ್ 20–22 ರವರೆಗೆ ಈ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

# ವಾಣಿಜ್ಯ ಶಾಸ್ತ್ರದಲ್ಲಿ ಶೋಭಾಗೆ ಪಿಎಚ್‌ಡಿ ಪ್ರದಾನ



**ಗದಗ:** ಗದಗ ನಗರದ ನಿವಾಸಿ ಅಣ್ಣಿಗೇರಿ ಗ್ರಾಮದ ಎಂ. ಬಿ. ಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ವಾಣಿಜ್ಯಶಾಸ್ತ್ರ ವಿಭಾಗದ ಸಹಪ್ರಾಧ್ಯಾಪಕಿ ಶೋಭಾ ಎನ್. ಅವರಿಗೆ ಈಚೆಗೆ ಪಿಎಚ್‌ಡಿ ಪ್ರದಾನ ಮಾಡಲಾಗಿದೆ.

ಆಂದ್ರಪ್ರದೇಶದ ಡ್ರಾವಿಡಿಯನ್ ವಿಶ್ವವಿದ್ಯಾನಿಲಯ ಕುಪ್ಪಂ ನಲ್ಲಿ "ವಿದ್ಯುತ್ ಮಗ್ಗ ಉದ್ಯಮದ ಸಮಸ್ಯೆಗಳು ಮತ್ತು ನಿರೀಕ್ಷೆಗಳು ಗದಗ ಜಿಲ್ಲೆಯ ಒಂದು ಪ್ರಕರಣ ಅಧ್ಯಯನ" ಎನ್ನುವ ವಿಷಯದಲ್ಲಿ ಮಹಾಪ್ರಬಂಧವನ್ನು ಮಂಡಿಸಿದ ಕಾರಣ ಪಿಎಚ್‌ಡಿ ಪದವಿಯನ್ನು 13ನೇ ಅಕ್ಟೋಬರ್ 2025 ರಂದು ನೀಡಿ ಗೌರವಿಸಲಾಗಿದೆ. ಗದಗ ನಗರದ ಆದರ್ಶ ಶಿಕ್ಷಣ ಸಮಿತಿಯ ನಿವೃತ್ತ ಪ್ರಾಧ್ಯಾಪಕ ಡಾ. ಎಂ. ಎಲ್. ಗುಳೇದಗುಡ್ಡ ಇವರ ಮಾರ್ಗದರ್ಶನದಲ್ಲಿ ಗದಗ ಜಿಲ್ಲೆಯ ಮಗ್ಗ ಉದ್ಯಮದ ಕುರಿತು ಸಂಶೋಧನೆ ಕೈಕೊಂಡು ಅವರು ಮಹಾಪ್ರಬಂಧವನ್ನು ಮಂಡಿಸಿದ್ದಾರೆ.



**ಚನ್ನಗಿರಿ:** ತಾಲೂಕಿನ ಹೊನ್ನೇಮರದಹಳ್ಳಿ ಗ್ರಾಮದ ಸರಕಾರಿ ಕಿರಿಯ ಪ್ರಾಥಮಿಕ ಶಾಲಾ ಅವರಣದಲ್ಲಿ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾನೂನು ಅರಿವು ನೆರವು ಕಾರ್ಯಕ್ರಮದಲ್ಲಿ ಗುರುಕುಲ ಶಾಲೆಯ ವಿದ್ಯಾರ್ಥಿಗಳು ನಾಟಕ ಪ್ರದರ್ಶನ ಮಾಡಿದರು.

# ವಿಜಯನಗರ ಶ್ರೀ ಕೃಷ್ಣದೇವರಾಯ ವಿವಿಯಲ್ಲಿ ಎರಡು ದಿನಗಳ ಕಮ್ಮಟ

**ಬಳ್ಳಾರಿ:** ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರಸಾರಾಂಗ ಹಾಗೂ ಕರ್ನಾಟಕ ಪ್ರಕಾಶಕರ ಸಂಘ(ರಿ) ಬೆಂಗಳೂರು ಇವರ ಸಹಯೋಗದಲ್ಲಿ ಪುಸ್ತಕ ಪ್ರಕಾಶನ ಕುರಿತ ಎರಡು ದಿನಗಳ ಕಮ್ಮಟವನ್ನು ಡಿ.17 ಮತ್ತು 18 ರಂದು ವಿವಿ ಯಲ್ಲಿ ಆಯೋಜಿಸಲಾಗಿದೆ.ಕರ್ನಾಟಕ ಪ್ರಕಾಶನ ರಂಗದ ಸ್ಥೂಲ ನೋಟ, ಪುಸ್ತಕ ನಿರ್ಮಾಣದ ವಿವಿಧ ಹಂತಗಳ ಬಗೆ, ಪುಸ್ತಕ ಪ್ರಕಾಶನ ಮತ್ತು ಕಾನೂನುಗಳು, ಕರಡು ತಿದ್ದುವಿಕೆಯ ವಿವಿಧ ಆಯಾಮಗಳು, ಪುಸ್ತಕ ವಿನ್ಯಾಸ ಮತ್ತು ಮುಖಪುಟ ವಿನ್ಯಾಸ, ಮುದ್ರಣ ಶಾಲೆಯ ವಿವಿಧ ಹಂತಗಳು, ಪುಸ್ತಕ ಸಂಸ್ಕೃತಿಯ ಪ್ರಸಾರ ಮತ್ತು ಪ್ರಸಾರಾಂಗಗಳು, ಪತ್ರಿಕಾ ವಿಮರ್ಶೆ ಮತ್ತು ಪ್ರಸಾರ, ಪುಸ್ತಕ ಪ್ರಕಾಶನ ಮತ್ತು ಮಾರಾಟ ಜಾಲ ಮೊದಲಾದ ವಿಷಯಗಳ ರಾಜ್ಯದ ಸಂಪನ್ಮೂಲ ವ್ಯಕ್ತಿಗಳಿಂದ ಗೋಷ್ಠಿಗಳು ನಡೆಯಲಿವೆ.ಎರಡು ದಿನಗಳ ಕಾಲ ನಡೆಯುವ ಈ ಕಾರ್ಯಕ್ರಮಕ್ಕೆ ಉಚಿತ ಪ್ರವೇಶವಿದ್ದು, ವಿದ್ಯಾರ್ಥಿಗಳು, ಅಧ್ಯಾಪಕರಿಗೆ, ಹೊಸ ಪ್ರಕಾಶಕರಿಗೆ ಅನುಕೂಲವಾಗಲಿದೆ. ಕಮ್ಮಟದಲ್ಲಿ ಭಾಗವಹಿಸುವ ಆಸಕ್ತರು ಮಾಹಿತಿಗಾಗಿ ಪ್ರಸಾರಾಂಗದ ನಿರ್ದೇಶಕ ಡಾ.ತಿಪ್ಪೇರುದ್ರ (9448855457) ಗೆ ಸಂಪರ್ಕಿಸಬಹುದು ಎಂದು ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ.ಎನ್.ಎಂ.ಸಾಲಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಗುವ ಉಚಿತ ಸೇವಾ ಸೌಲಭ್ಯಗಳ ಸದುಪಯೋಗ ಪಡೆದುಕೊಳ್ಳಲು ನ್ಯಾ.ರಾಜೇಶ್ ಎನ್.ಹೊಸಮನೆ ಕರೆ

**ಬಳ್ಳಾರಿ:** ಜಿಲ್ಲೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಸಿಗುವಂತಹ ಉಚಿತ ಸೇವಾ ಸೌಲಭ್ಯಗಳನ್ನು ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ನಗರ ಪ್ರಾಥಮಿಕ ಆರೋಗ್ಯ ಕೇಂದ್ರ ಬಂಡಿಹಟ್ಟಿ ಇವರ ಸಹಯೋಗದಲ್ಲಿ ಬಂಡಿಹಟ್ಟಿಯ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶುಕ್ರವಾರ ಏರ್ಪಡಿಸಿದ್ದ "ಯುನಿವರ್ಸ್ಲ್ ಹೆಲ್ತ್ ಕವರೇಜ್ ಡೇ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು. ಆರೋಗ್ಯ ಸಮಸ್ಯೆ ಕಂಡುಬಂದಲ್ಲಿ ಖಾಸಗಿ ಆಸ್ಪತ್ರೆಗಳಿಗೆ ಚಿಕಿತ್ಸೆಗೆ ಹೋಗದೇ ಸರ್ಕಾರಿ ಆಸ್ಪತ್ರೆಗಳಿಗೆ ತೆರಳಿ ಉಚಿತವಾಗಿ ಸಿಗುವಂತಹ ವೈದ್ಯರ ಆರೋಗ್ಯ ತಪಾಸಣೆ, ರಕ್ತ ಪರೀಕ್ಷೆ ಹಾಗೂ ಇತರೆ ಪರೀಕ್ಷೆಗಳ ಸೇವೆ ಪಡೆದುಕೊಳ್ಳಬಹುದಾಗಿದೆ ಎಂದು ಹೇಳಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ,




ನಮ್ಮ ದಿನ ನಿತ್ಯ ಚಟುವಟಿಕೆಗಳಲ್ಲಿ ಜೀವನ ಶೈಲಿಯನ್ನು ಬದಲಾವಣೆ ಮಾಡಿಕೊಂಡು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು. ಅಸಾಂಕ್ರಾಮಿಕ ರೋಗಗಳ ಅರಿವು ಹೊಂದಬೇಕು ಎಂದು ತಿಳಿಸಿದರು.

ಹದಿಹರೆಯದವರ ಆರೋಗ್ಯ, ಸ್ನೇಹ ಕ್ಲಿನಿಕ್, ಗರ್ಭಿಣಿ ತಾಯಂದಿರ ಆರೈಕೆ, ಗರ್ಭಿಣಿಯರ ಆರೋಗ್ಯ ತಪಾಸಣೆ, ಪ್ರಧಾನ ಮಂತ್ರಿ ಸುರಕ್ಷಾ ಮಾತೃತ್ವ ಅಭಿಯಾನ ಹಾಗೂ ಜೆ.ಎಸ್.ವೈ ಮತ್ತು ಜೆ.ಎಸ್.ಎಸ್.ಕೆ, ಆರ್.ಬಿ.ಎಸ್.ಕೆ, ಆರ್.ಕೆ.ಎಸ್.ಕೆ ಮತ್ತು ಸಾರ್ವತ್ರಿಕ ಲಸಿಕಾ ಕಾರ್ಯಕ್ರಮ, ಕುಟುಂಬ ಕಲ್ಯಾಣ ವಿಧಾನಗಳಾದ ತಾತ್ಕಾಲಿಕ ವಿಧಾನ, ಶಾಶ್ವತ ವಿಧಾನಗಳ ಬಗ್ಗೆ ಹಾಗೂ ಅಯೋಡಿನ್ ಉಪ್ಪಿನ ಮಹತ್ವ ಕುರಿತು ಮಾಹಿತಿ ತಿಳಿಸಿದರು.

ಜಿಲ್ಲಾ ಮಾನಸಿಕ ವಿಭಾಗದ ಕ್ಲಿನಿಕಲ್ ಸೈಕಾಲಾಜಿಷ್ಟ್ ಸರ್ಮಸ್‌ವಲಿ, ಮಾನಸಿಕ ಆರೋಗ್ಯ ಕಾರ್ಯಕ್ರಮದ ಕುರಿತು ಮಾಹಿತಿ ನೀಡುತ್ತಾ ಟೆಲಿಮನಸ್ 14416 ಉಚಿತ ಕರೆಯ ಸೇವೆಯ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ನೀಡಿದರು.

ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಸರಸ್ವತಿ ಅವರು ಅಗೆಯುವ ತಂಬಾಕು ಹಾಗೂ ಸೇದುವ ತಂಬಾಕುನಿಂದ ದೇಹದ ಮೇಲೆ ಆಗುವಂತಹ ದುಷ್ಪರಿಣಾಮಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು.

ಎನ್.ಜಿ.ಓ ಹುಮಾನ ಪಿಪುಲ್ ಟು ಪಿಪುಲ್ ಇಂಡಿಯಾ ಸಂಸ್ಥೆಯ ಭೂದೇವಿ ಅವರು ಮಾತನಾಡಿ, ಸ್ತನ ಕ್ಯಾನ್ಸರ್ ಅನ್ನು ಪ್ರಾರಂಭಿಕ ಹಂತದಲ್ಲೇ ಗುರ್ತಿಸಿ ವೈದ್ಯರಲ್ಲಿ ಸೂಕ್ತ ಚಿಕಿತ್ಸೆ ಪಡೆಯಲು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ವೈದ್ಯಾಧಿಕಾರಿಗಳಾದ ಡಾ.ಯಾಸ್ಮೀನ್, ಡಾ.ಸ್ಯಾಮ್ಯುಯೆಲ್, ಪ್ರಭಾರ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ವರ್ಗದವರು, ಆಶಾಕಾರ್ಯಕರ್ತೆಯರು, ಸಾರ್ವಜನಿಕರು ಉಪಸ್ಥಿತರಿದ್ದರು.

## ವಿಠಲ್‌ಗೆ ರಾಷ್ಟ್ರೀಯ ಮಾಧ್ಯಮ ರತ್ನ ಪ್ರಶಸ್ತಿ

**ದಾವಣಗೆರೆ:** ನೆನಪು ಫೌಂಡೇಶನ್ ವತಿಯಿಂದ ನೀಡುವ ರಾಷ್ಟ್ರೀಯ ಮಾಧ್ಯಮ ರತ್ನ ಪ್ರಶಸ್ತಿಗೆ ಖಾಸಗಿ ಸುದ್ದಿ ವಾಹಿನಿಯ ಹಿರಿಯ ವರದಿಗಾರ ವಿಠಲ್ ಕ್ಯಾರವಾಡ್ ಆಯ್ಕೆಯಾಗಿದ್ದಾರೆ. ಗೋವಾದ ಮಡಗಾಂವ್‌ನ ರವೀಂದ್ರ ಕಲಾಭವನದಲ್ಲಿ ಭಾನುವಾರ ನಡೆಯಲಿರುವ, ರಾಷ್ಟ್ರಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಈ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಪತ್ರಿಕೆ ಹಾಗೂ ಸುದ್ದಿವಾಹಿನಿಯಲ್ಲಿನ ಸುದೀರ್ಘ ಸೇವೆ ಪರಿಗಣಿಸಿ ಈ ವಿಠಲ್ ಕ್ಯಾರವಾಡ್ ಪ್ರಶಸ್ತಿ ನೀಡಲಾಗುತ್ತಿದೆ. ವಿಠಲ್ ಮೂಲತಃ ಧಾರವಾಡ ಜಿಲ್ಲೆ ಕಲಘಟಗಿ ತಾಲೂಕಿನ ಗಳಗಿ ಹುಲಕೊಪ್ಪ ಗ್ರಾಮದವರು.

## ನೂಪುರ ಸಂಸ್ಥೆಯಿಂದ ಇಂದು ದಶಾವತಾರ ನೃತ್ಯರೂಪಕ

**ದಾವಣಗೆರೆ:** ನಗರದ ನೂಪುರ ಕಲಾ ಸಂಸ್ಥೆಯ 23ನೇ ವಾರ್ಷಿಕೋತ್ಸವ ಅಂಗವಾಗಿ ಭರತನಾಟ್ಯ ಶೈಲಿಯಲ್ಲಿ ದಶಾವತಾರ ನೃತ್ಯ ರೂಪಕವನ್ನುನಗರದ ಭಂಟರ ಭವನದಲ್ಲಿ ಡಿ. 14ರಂದು ಸಂಜೆ 6 ಗಂಟೆಗೆ ಹಮ್ಮಿಕೊಳ್ಳಲಾಗಿದೆ. ಪ್ರತಿವರ್ಷವೂ ಒಂದು ನೃತ್ಯ ಪರಿಕಲ್ಪನೆಯಡಿ ಕಾರ್ಯಕ್ರಮ ನಡೆಸಲಾಗುತ್ತದೆ. ಈ ಬಾರಿ ಶ್ರೀ ಹರಿಯ ಹತ್ತು ರೂಪಗಳನ್ನು ಪ್ರದರ್ಶಿಸುವ ಕಾರ್ಯಕ್ರಮವಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗ ನೀಡಿದೆ ಎಂದು ಸಂಸ್ಥೆಯ ಸಂಸ್ಥಾಪಕ ನಿರ್ದೇಶಕಿ ಬೃಂದಾ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು. ಸಂಸ್ಥೆಯ 60 ವಿದ್ಯಾರ್ಥಿಗಳು ನಡೆಸಿಕೊಡಲಿದ್ದಾರೆ. ಈ ಪ್ರದರ್ಶನ ಸುಮಾರು ಒಂದೂವರೆ ತಾಸು ಕಾಲ ನಡೆಯಲಿದೆ. ಸಂಜೆ 5-30ಕ್ಕೆ ಸುಗಮಸಂಗೀತ, ರಂಗಗೀತೆಗಳ ಪ್ರದರ್ಶನವಿದೆ ಎಂದು ಮಾಹಿತಿ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಕಾರ್ಯಕ್ರಮ ಉದ್ಘಾಟಿಸುವರು. ಶಾಲಾ ಶಿಕ್ಷಣ ಇಲಾಖೆ ನಿವೃತ್ತ ಉಪನಿರ್ದೇಶಕ ಕೆ.ಎಂ. ಗಂಗಾಧರಸ್ವಾಮಿ, ಬಿಐಇಟಿ ಕಾಲೇಜಿನ ಪ್ಲೇಸ್‌ಮೆಂಟ್ ಅಧಿಕಾರಿ ಡಾ. ಸಿ.ಆರ್. ನಿರ್ಮಲಾ ಅತಿಥಿಗಳಾಗಿ ಭಾಗವಹಿಸುವರು. ಬೆಂಗಳೂರಿನ ರುದ್ರಾಕ್ಷ ನಾಟ್ಯಾಲಯದ ಕಲಾ ನಿರ್ದೇಶಕಿ ಪದ್ಮನಿ ಉಪಾಧ್ಯಾ, ಮಾರ್ತಾಂಡ ಕಲಾ ಸಂಸ್ಥೆಯ ವಿದುಷಿ ಮಮತಾ ಜಿ. ನಾಡಿಗರ್ ಅವರನ್ನು ಸನ್ಮಾನಿಸಲಾಗುವುದು ಎಂದು ಹೇಳಿದರು. ಸುದ್ದಿಗೋಷ್ಠಿಯಲ್ಲಿ ವಿಜಯದುರ್ಗಾ ಮೇಕಾ, ಅಶ್ವಿನಿ ಹಿರೇಮಠ್, ಸುಮಾ ಶ್ರೀನಾಥ್, ಸಮೃದ್ಧಿ, ಪುಷ್ಪಾ ಶ್ರೀನಿವಾಸ್, ಶ್ರುತಿ ಇದ್ದರು.

## ತಿಮ್ಮಪ್ಪಯ್ಯನಹಳ್ಳಿ ಶಾಲೆ ವಿದ್ಯಾರ್ಥಿಗಳು ರಾಜ್ಯಮಟ್ಟಕ್ಕೆ


**ಚಳ್ಳಕೆರೆ:** ತಾಲೂಕಿನ ತಳಕು ಹೋಬಳಿ ತಿಮ್ಮಪ್ಪಯ್ಯನಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲಾ ಮಕ್ಕಳು ಶುಕ್ರವಾರ ಮೈಸೂರಿನಲ್ಲಿ ಆರಂಭವಾಗಿರುವ ಜಾನಪದ ನೃತ್ಯ ಪ್ರದರ್ಶನದಲ್ಲಿ ಭಾಗವಹಿಸಿದ್ದಾರೆ. ರಾಷ್ಟ್ರೀಯ ಜನಸಂಖ್ಯೆ ಶಿಕ್ಷಣ ಯೋಜನೆ ವತಿಯಿಂದ ನಡೆಯುವ ಜಾನಪದ ಚಟುವಟಿಕೆಯಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದಿದ್ದ ಶಾಲಾ ತಂಡ ರಾಜ್ಯ ಮಟ್ಟದ ಕಾರ್ಯಕ್ರಮದಲ್ಲಿ ಪ್ರತಿನಿಧಿಸಿದ್ದಾರೆ. ಶಾಲಾ ಶಿಕ್ಷಕರಾದ ಎನ್. ಶೇಖರಪ್ಪ, ವಿಜಯಕಲಾ, ವಿದ್ಯಾರ್ಥಿಗಳಾದ ಗಗನದೀಪ, ಬಿಂದು, ಶ್ರಾವಂತಿ, ಸೇವಂತಿ, ಸಿರಿಶ್ರೀ, ಶಮಿಕಾ ಇದ್ದಾರೆ.

## ಬಿ.ಇಡಿ ಪ್ರ ಶಿಕ್ಷಣಾರ್ಥಿಗಳಿಗೆ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆ

**ಹಾವೇರಿ:** ಶ್ರೀ ಗಳಗನಾಥ ಮತ್ತು ನಾ.ಶ್ರೀ. ರಾಜಪುರೋಹಿತ ಪ್ರತಿಷ್ಠಾನದ ವತಿಯಿಂದ ಹಾವೇರಿ ಜಿಲ್ಲೆಯ ಬಿ.ಇಡಿ ಪ್ರಶಿಕ್ಷಣಾರ್ಥಿಗಳಿಗೆ ಜಿಲ್ಲಾ ಮಟ್ಟದ ರಸಪ್ರಶ್ನೆ ಸ್ಪರ್ಧೆಯನ್ನು ಜನೇವರಿ 5 ರಂದು ಸೋಮವಾರ ಬೆಳಿಗ್ಗೆ 10 ಗಂಟೆಗೆ ಹಾವೇರಿ ನಗರದ ಟಿ.ಎಂ.ಎ.ಇ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದೆ.
ಐತಿಹಾಸಿಕ, ಪೌರಾಣಿಕ, ಕರ್ನಾಟಕಕ್ಕೆ ಸಂಬಂಧಿಸಿದ ಕಲೆ, ಸಾಹಿತ್ಯ, ಸಂಗೀತ, ಕ್ರೀಡೆ ಬೌಗೋಳಿಕ ಮುಂತಾದ ಸಾಮಾನ್ಯ ಜ್ಞಾನ ಒಳಗೊಂಡಂತೆ ಶೇ80 ರಷ್ಟು ಪ್ರಶ್ನೆಗಳು ಹಾಗೂ ಶ್ರೀ ಗಳಗನಾಥ ಮತ್ತು ನಾ.ಶ್ರೀ. ರಾಜಪುರೋಹಿತರ ಕುರಿತು ಶೇ20 ರಷ್ಟು ಪ್ರಶ್ನೆಗಳನ್ನು ಕೇಳಲಾಗುವುದು. . ಒಂದು ತಂಡದಲ್ಲಿ ಈರ್ವರು ಪ್ರಶಿಕ್ಷಣಾರ್ಥಿಗಳು ಪಾಲ್ಗೊಳ್ಳಬೇಕು. ಸ್ಪರ್ಧೆಯಲ್ಲಿ 5 ಕ್ಕಿಂತ ಹೆಚ್ಚು ತಂಡಗಳು ಭಾಗವಹಿಸಿದಲ್ಲಿ 20 ಅಂಕಗಳ ಲಿಖಿತ ಪರೀಕ್ಷೆ ನಡೆಸಲಾಗುವುದು, ಅತೀ ಹೆಚ್ಚು ಅಂಕಗಳನ್ನು ಪಡೆದ 5 ತಂಡಗಳನ್ನು ಮಾತ್ರ ಅಂತಿಮ ಮೌಖಿಕ ಸ್ಪರ್ಧೆಗೆ ಆಯ್ಕೆ ಮಾಡಲಾಗುವುದು. ವಿಜೇತ ತಂಡಗಳಿಗೆ ಪ್ರಥಮ ರೂ.5000/-, ದ್ವಿತೀಯ ರೂ.4,000/- ಹಾಗೂ ತೃತೀಯ ರೂ.3,000/- ಮತ್ತು ಸಮಾಧಾನಕರ ಎರಡು ತಂಡಗಳಿಗೆ ತಲಾ ರೂ.1000/- ಗಳಂತೆ ನಗದು ಹಾಗೂ ಪ್ರಮಾಣ ಪತ್ರ ನೀಡಲಾಗುವುದು. ಸ್ಪರ್ಧೆಯಲ್ಲಿ ಭಾಗವಹಿಸಿದ ಎಲ್ಲ ತಂಡಗಳಿಗೂ ಪ್ರಮಾಣ ಪತ್ರ ನೀಡಲಾಗುವುದು. ಪ್ರವೇಶ ಉಚಿತವಾಗಿದ್ದು ಡಿಸೆಂಬರ್ 30 ರೊಳಗಾಗಿ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, #32, 'ಬಿ', ಬ್ಲಾಕ್ ಎರಡನೇ ಮಹಡಿ ಜಿಲ್ಲಾಡಳಿತ ಭವನ ಹಾವೇರಿ-581110 ವಿಳಾಸಕ್ಕೆ ಪ್ರಾಚಾರ್ಯರರ ಮುಖಾಂತರ ಹೆಸರನ್ನು ನೋಂದಾಯಿಸಬೇಕು.

# ಕರ್ನಾಟಕದ ಕಾಫಿ ಎಸ್ಟೇಟ್‌ಗಳ ಹರಾಜು ಪ್ರಕ್ರಿಯೆಯಲ್ಲಿ ಮಧ್ಯಪ್ರವೇಶಿಸಲು ಸಾಧ್ಯವಿಲ್ಲ: ಕೇಂದ್ರ ಸರ್ಕಾರ ಸ್ಪಷನೆ

**ಶಿವಮೊಗ್ಗ:** SARFAESI ಕಾಯ್ದೆಯಡಿಯಲ್ಲಿ ಸುಸ್ತಿದಾರ ಕಾಫಿ ಬೆಳೆಗಾರರ ವಿರುದ್ಧ ಬ್ಯಾಂಕುಗಳು ನಡೆಸುವ ವಸೂಲಾತಿ ಕ್ರಮಗಳಲ್ಲಿ ಮಧ್ಯಪ್ರವೇಶಿಸಲು ಸಾಧ್ಯವಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದ್ದು, ಇದನ್ನು ವಾಣಿಜ್ಯಿಕ ನಿರ್ಧಾರ ಎಂದು ಕರೆದಿದೆ. ಸರ್ಫೇಸಿ ಅಡಿಯಲ್ಲಿ ವಿನಾಯಿತಿಗಾಗಿ ಕಾಫಿ ತೋಟಗಳನ್ನು ಕೃಷಿ ಭೂಮಿಯಾಗಿ ಪರಿಗಣಿಸಲು ಆಗುವುದಿಲ್ಲ ಮತ್ತು ಬಾಧಿತ ಸಾಲಗಾರರು ಸಾಲ ವಸೂಲಾತಿ ನ್ಯಾಯಮಂಡಳಿಗಳ ಮೂಲಕ ಮಾತ್ರ ಪರಿಹಾರ ಪಡೆಯಬಹುದು ಎಂದು ಅದು ಪುನರುಚ್ಚರಿಸಿದೆ.



ಕರ್ನಾಟಕದ ಸಾವಿರಾರು ಕಾಫಿ ಬೆಳೆಗಾರರು ತಮ್ಮ ತೋಟಗಳ ಸನ್ನಿಹಿತ ಹರಾಜಿನಿಂದಾಗಿ ಆತಂಕಕ್ಕೀಡಾಗಿರುವ ಸಮಯದಲ್ಲಿ ಕೇಂದ್ರ ಸರ್ಕಾರದ ಈ ಸ್ಪಷ್ಟೀಕರಣ ಬಂದಿದೆ.

ಲೋಕಸಭೆಯಲ್ಲಿ ಔಪಚಾರಿಕ ಪ್ರಶ್ನೆಗೆ ಉತ್ತರಿಸಿದ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ, ಆರ್ಥಿಕ ಸ್ವತ್ತುಗಳ ಭದ್ರತೆ ಮತ್ತು ಪುನರ್‌ರಚನೆ ಹಾಗೂ ಭದ್ರತಾ ಕ್ರಮದ ಜಾರಿ (ಖಂಖಈಂಇಖಙ) ಕಾಯ್ದೆಯಡಿ ವಸೂಲಾತಿ ಕ್ರಮವು ಬ್ಯಾಂಕುಗಳು ಮತ್ತು ಹಣಕಾಸು ಸಂಸ್ಥೆಗಳ ವಾಣಿಜ್ಯಿಕ ನಿರ್ಧಾರವಾಗಿದ್ದು, ಕೇಂದ್ರವು ಅಂತಹ ವಿಚಾರಗಳಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ ಎಂದು ಹೇಳಿದರು.

ಸಾರ್ವಜನಿಕ ವಲಯದ ಬ್ಯಾಂಕುಗಳು ಬಾಕಿ ಉಳಿದಿರುವ ಸಾಲಗಾರರ ಕಾಫಿ ತೋಟಗಳನ್ನು ಹರಾಜು ಮಾಡುತ್ತಿವೆಯೇ ಮತ್ತು ಬೆಳೆಗಾರರು ಎದುರಿಸುತ್ತಿರುವ ಸಂಕಷ್ಟವನ್ನು ಪರಿಗಣಿಸಿ ಸರ್ಕಾರ ಆನ್‌ಲೈನ್ ಹರಾಜನ್ನು ನಿಲ್ಲಿಸಲು ಯೋಜಿಸಿದೆಯೇ ಎಂಬ ಬಗ್ಗೆ ವಿವರ ಕೇಳಿದ ಉಡುಪಿ-ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರ ಪ್ರಶ್ನೆಗೆ ಉತ್ತರಿಸಿದರು.

ಚಿಕ್ಕಮಗಳೂರು ಜಿಲ್ಲೆಯ ಕಾಫಿ ತೋಟಗಳನ್ನು ದುಬೈನ ವ್ಯಾಪಾರಿಗಳು ಆನ್‌ಲೈನ್‌ನಲ್ಲಿ ಪರವಾನಗಿ ಪಡೆಯುವ ಮೂಲಕ ದುರ್ಬಳಕೆ ಮಾಡುತ್ತಿದ್ದಾರೆ ಎಂಬ ಆರೋಪಗಳಿಗೆ ಪ್ರತಿಕ್ರಿಯಿಸಿದ ಸರ್ಕಾರ, ಕಾಫಿ ಮಂಡಳಿಗೆ ಅಂತಹ ಯಾವುದೇ ಮಾಹಿತಿ ಬಂದಿಲ್ಲ ಎಂದು ಹೇಳಿದೆ. ತೊಂದರೆಗೀಡಾದ ಬೆಳೆಗಾರರಿಗೆ ಇರುವ ಏಕೈಕ ಪರಿಹಾರವೆಂದರೆ ಖಂಖಈಂಇಖಙ ಕಾಯ್ದೆಯ ಸೆಕ್ಷನ್ 17ರ ಅಡಿಯಲ್ಲಿ ಸಾಲ ವಸೂಲಾತಿ ನ್ಯಾಯಮಂಡಳಿಯನ್ನು ಸಂಪರ್ಕಿಸುವುದು ಎಂದು ಕೇಂದ್ರವು ಗಮನಸೆಳೆದಿದೆ. ಕಾಫಿ ಬೆಳೆಗಾರರಿಗೆ ಪ್ರತ್ಯೇಕ ನೀತಿ ಪರಿಹಾರ ಅಥವಾ ಹರಾಜು ನಿಷೇಧವನ್ನು ಘೋಷಿಸಲಾಗಿಲ್ಲ.

ಕುಗ್ಗುತ್ತಿರುವ ಕಾಫಿ ಇಳುವರಿ, ಕಾರ್ಮಿಕರ ಕೊರತೆ ಮತ್ತು ಹವಾಮಾನ ಒತ್ತಡಗಳ ಮಧ್ಯೆ ಕರ್ನಾಟಕದ ಕಾಫಿ ಬೆಳೆಗಾರರ ಸಂಘಗಳು ಸರ್ಕಾರದ ತುರ್ತು ಬೆಂಬಲ ಕೋರುತ್ತಿರುವಾಗ ಸಂಸತ್ತಿನ ಉತ್ತರವು ಬಂದಿದೆ. ಕರ್ನಾಟಕವು ಭಾರತದ ಅಗ್ರ ಕಾಫಿ ಉತ್ಪಾದಕನಾಗಿ ಉಳಿದಿದೆ. 2022- 23ರಲ್ಲಿ 248,020 ಮೆಟ್ರಿಕ್ ಟನ್ ಕಾಫಿ ಕೊಡುಗೆ ನೀಡುವ ಮೂಲಕ ಕೇರಳ ಮತ್ತು ತಮಿಳುನಾಡನ್ನು ಹಿಂದಿಕ್ಕಿದೆ.

ಈ ತಿಂಗಳು ಚಿಕ್ಕಮಗಳೂರು ಜಿಲ್ಲೆಗೆ ಭೇಟಿ ನೀಡುತ್ತಿರುವ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರನ್ನು ಕಾಫಿ ಬೆಳೆಗಾರರು ಭೇಟಿ ಮಾಡಲಿದ್ದಾರೆ ಎಂದು ಕರ್ನಾಟಕ ಬೆಳೆಗಾರರ ಒಕ್ಕೂಟದ ಅಧ್ಯಕ್ಷ ಎಚ್. ಶಿವಣ್ಣ ತಿಳಿಸಿದ್ದಾರೆ. 'ನಮ್ಮ ಪ್ರಮುಖ ಬೇಡಿಕೆಗಳನ್ನು ಈಡೇರಿಸಲು ಬೆಳೆಗಾರರ ರಕ್ಷಣೆಗೆ ಬರುವ ಅಗತ್ಯವನ್ನು ನಾವು ಅವರಿಗೆ ತಿಳಿಸುತ್ತೇವೆ' ಎಂದು ಅವರು

# ಮೊಟ್ಟೆಗಳಲ್ಲಿ ಕ್ಯಾನ್ಸರ್ ಕಾರಕ ಅಂಶ ಪತ್ತೆ ಆರೋಪ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್

**ಬೆಂಗಳೂರು:** ಪ್ರೋಟಿನ್ ಮೂಲವಾಗಿರುವ ಮೊಟ್ಟೆ ಅನೇಕರಿಗೆ ಬಹುಪ್ರಿಯ. ಕೇವಲ ನಾನ್ ವೆಜಿಟೇರಿಯನ್ಸ್ ಮಾತ್ರವಲ್ಲದೇ ಕೆಲ ವೆಜಿಟೇರಿಯನ್ಸ್ ಕೂಡ ಮೊಟ್ಟೆಯನ್ನು ಸೇವನೆ ಮಾಡುವುದುಂಟು. ಆದರೆ ಇದೀಗ ಮೊಟ್ಟೆ ಪ್ರಿಯರಿಗೆ ಶಾಕಿಂಗ್ ನ್ಯೂಸ್ ಎದುರಾಗಿದೆ. ಮೊಟ್ಟೆಯಲ್ಲಿ ಕ್ಯಾನ್ಸರ್ ಅಂಶ ಪತ್ತೆಯಾಗಿರುವ ಬಗ್ಗೆ ಸುದ್ದಿ ಬೆಳಕಿಗೆ ಬಂದಿದೆ.

ಜನಪ್ರಿಯ ಬ್ರಾಂಡ್‌ನ ಮೊಟ್ಟೆಗಳಲ್ಲಿ ಕ್ಯಾನ್ಸರ್ ಕಾರಕ ಅಂಶ ಪತ್ತೆಯಾಗಿದೆ. ಮೊಟ್ಟೆಗಳಲ್ಲಿ ನೈಟ್ರೋಫ್ಯೂರಾನ್ ಎಂಬ ಔಷಧದ ಕಣಗಳು ಕಂಡುಬಂದಿದ್ದು, ಇದು ಡಿಎನ್‌ಎಯಿಂದ ಸಂತಾನೋತ್ಪತ್ತಿ ಅಂಗಗಳು ಮತ್ತು ರೋಗನಿರೋಧಕ ವ್ಯವಸ್ಥೆಗೆ ಎಲ್ಲದಕ್ಕೂ ಹಾನಿ ಮಾಡುತ್ತದೆ. ಅಲ್ಲದೇ ಇದು ಕ್ಯಾನ್ಸರ್‌ನಂತಹ ಅಪಾಯಕಾರಿ ಕಾಯಿಲೆಗಳಿಗೂ ಕಾರಣವಾಗಬಹುದು ಎನ್ನುವ ಸುದ್ದಿ ಹರಿದಾಡುತ್ತಿದ್ದು, ಇದು ಮೊಟ್ಟೆ ಪ್ರಿಯರಿಗೆ ಆಘಾತವನ್ನುಂಟು ಮಾಡಿದೆ. ಈ



ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆ ಜೋರಾಗಿ ನಡೆಯುತ್ತಿದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಪ್ರತಿಕ್ರಿಯಿಸಿದ್ದು, ಈ ಹಿಂದೆ ನಡೆಸಿದ ಪರೀಕ್ಷೆಗಳಲ್ಲಿ ಮೊಟ್ಟೆ ಹಾನಿಕಾರಕ ಅಂಶಗಳು ಕಂಡುಬಂದಿಲ್ಲ. ಆದರೆ, ಈ ಹೊಸ ಆರೋಪಗಳ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಮೊಟ್ಟೆಗಳ ಮಾದರಿಗಳನ್ನು ಸಂಗ್ರಹಿಸಿ, ಲ್ಯಾಬ್‌ಗಳಲ್ಲಿ ಕೂಲಂಕುಷ ಪರೀಕ್ಷೆ ನಡೆಸುವಂತೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.ಒಂದು ವೇಳೆ ಪರೀಕ್ಷೆಯಲ್ಲಿ ಕ್ಯಾನ್ಸರ್ ಕಾರಕ ಅಂಶಗಳು ಪತ್ತೆಯಾದರೆ, ಮೊಟ್ಟೆ ಉತ್ಪಾದಕರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಆರು ತಿಂಗಳ ಹಿಂದೆ ಆಹಾರ ಸುರಕ್ಷತಾ ಇಲಾಖೆ ನಡೆಸಿದ ಪರೀಕ್ಷೆಗಳಲ್ಲಿ ಮೊಟ್ಟೆಗಳಲ್ಲಿ ಯಾವುದೇ ಹಾನಿಕಾರಕ ವಸ್ತುಗಳು ಕಂಡುಬಂದಿಲ್ಲ. ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಆಯುಕ್ತ ಶ್ರೀನಿವಾಸ್ ಅವರು ಆ ಸಮಯದಲ್ಲಿ ಪ್ರಯೋಗಾಲಯ ವರದಿಗಳು ಮೊಟ್ಟೆಗಳು ಸೇವನೆಗೆ ಸುರಕ್ಷಿತವೆಂದು ಸ್ಪಷ್ಟವಾಗಿ ಹೇಳಿದ್ದಾರೆ.ಹಿಂದಿನ ವರದಿಗಳ ಆಧಾರದ ಮೇಲೆ ಆಹಾರ ಸುರಕ್ಷತಾ ಇಲಾಖೆಯು ಮೊಟ್ಟೆಗಳು ಸುರಕ್ಷಿತವೆಂದು ಹೇಳಿದೆ. ಇದೀಗ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಹೊಸ ಪರೀಕ್ಷೆಗಳಿಗೆ ಆದೇಶಿಸಲಾಗಿದೆ ಎಂದು ಹೇಳಿದ್ದಾರೆ.

## 90 ಸರ್ಕಾರಿ ಐ.ಟಿ.ಐ. ಗಳಿಗೆ ಯಂತ್ರೋಪಕರಣ ಒದಗಿಸಲು 50 ಕೋಟಿ ರೂ. ಅನುದಾನ-

**ಬೆಳಗಾವಿ :** ರಾಜ್ಯದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಿಗೆ ಪರಿಷ್ಕೃತ ಪಠ್ಯಕ್ರಮದ ಅನುಸಾರ ಯಂತ್ರೋಪಕರಣಗಳನ್ನು ಖರೀದಿಸಿ ಒದಗಿಸಲು 50 ಕೋಟಿ ರೂ. ಅನುದಾನ ಒದಗಿಸಿದ್ದು, ಈಗಾಗಲೆ ಟೆಂಡರ್ ಪ್ರಕ್ರಿಯೆ ನಡೆದಿದೆ ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಹೇಳಿದರು.ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನಮಂಡಲದ ಅಧಿವೇಶನದಲ್ಲಿ ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಗುರುವಾರ ಅವರು ಮಾತನಾಡಿದರು.ಸಿರಗುಪ್ಪ ಶಾಸಕ ನಾಗರಾಜ್ ಬಿ.ಎಂ. ಅವರ ಚುಕ್ಕೆ ಗುರುತಿನ ಪ್ರಶ್ನೆಯಲ್ಲಿ ಸಿರಗುಪ್ಪ ಕ್ಷೇತ್ರ ವ್ಯಾಪ್ತಿಯಲ್ಲಿ ಸರ್ಕಾರಿ ಐಟಿಐ ಅನ್ನು 2014-15 ರಲ್ಲಿ ಮಂಜೂರು ಮಾಡಿದ್ದು, ಈ ಸಂಸ್ಥೆಯಲ್ಲಿ ವಿದ್ಯಾರ್ಥಿಗಳ ಕಲಿಕೆಗೆ ಬೇಕಾಗಿರುವ ಉಪಕರಣಗಳು ಲಭ್ಯವಿಲ್ಲದೆ ತೊಂದರೆಯಾಗಿದೆ ಎಂಬುದಾಗಿ ಸರ್ಕಾರದ ಗಮನ ಸೆಳೆದರು.ಇದಕ್ಕೆ ಪ್ರತಿಕ್ರಿಯಿಸಿದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡ ಬಳಿಕ, ಸಿರಗುಪ್ಪದ ಸರ್ಕಾರಿ ಐಟಿಐ ಸಂಸ್ಥೆಗೂ ಕೂಡ ಹೊಸದಾಗಿ ಅಗತ್ಯ ಯಂತ್ರೋಪಕರಣಗಳನ್ನು ಖರೀದಿಸಿ, ಒದಗಿಸಲಾಗುವುದು ಎಂದು ಸಚಿವ ಶರಣ ಪ್ರಕಾಶ್ ಪಾಟೀಲ್ ಹೇಳಿದರು.

## ಕುರ್ಚಿ ಕದನ ನಡುವಲ್ಲೇ ವರಿಷ್ಠರಿಂದ ಭೋಜನಕೂಟ

# ಹಲವರ ಹುಬ್ಬೇರಿಸಿದ ಸಿದ್ದು ಅನುಪಸ್ಥಿತಿ..!

**ಬೆಂಗಳೂರು:** ಅಧಿಕಾರ ಹಂಚಿಕೆಯ ಕುರಿತು ಗಂಭೀರ ಚರ್ಚೆ ನಡೆಯುತ್ತಿರುವ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೈಕಮಾಂಡ್ ನಾಯಕರು ಆಯೋಜಿಸಿದ್ದ ಭೋಜನಕೂಟದಲ್ಲಿ ಭಾಗಿಯಾಗಿದ್ದು, ಹಲವರ ಹುಬ್ಬೇರುವಂತೆ ಮಾಡಿದೆ.

ದೆಹಲಿಯಲ್ಲಿ ಭಾನುವಾರ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಲು ಆಗಮಿಸಿದ್ದ ಪ್ರಮುಖರಿಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭೋಜನ ವ್ಯವಸ್ಥೆ ಮಾಡಿದ್ದರು. ಅದರಲ್ಲಿ ಆಯ್ದ ನಾಯಕರಿಗೆ ಮಾತ್ರ ಬೋಜನ ಕೂಟಕ್ಕೆ ಆಹ್ವಾನ ನೀಡಲಾಗಿತ್ತು. ಭೋಜನಕೂಟದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಭಾಗಿಯಾಗಿದ್ದರು.

ಸಿದ್ದರಾಮಯ್ಯ ಅವರ ಅನುಪಸ್ಥಿತಿಯಲ್ಲಿ ಈ ಭೋಜನಕೂಟ ನಡೆದಿದ್ದು, ಹೈಕಮಾಂಡ್ ನಾಯಕರು ಹಾಗೂ ಡಿಕೆ.ಶಿವಕುಮಾರ್ ನಡುವಿನ ಮಾತುಕತೆ ಕುರಿತು ಕುತೂಹಲಗಳು



ಶುರುವಾಗಿದೆ.ಕರ್ನಾಟಕ ಭವನದಲ್ಲಿ ಹಲವಾರು ಶಾಸಕರು, ಸಚಿವರು ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು. ಬಳಿಕ ಔತಣ ಕೂಟದಲ್ಲಿ ಭಾಗವಹಿಸಿದ್ದ ಡಿ.ಕೆ.ಶಿವಕುಮಾರ್ ಅಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಸಂಸದೀಯ ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿ ಸೇರಿದಂತೆ ಪ್ರಮುಖ ನಾಯಕರನ್ನು ಭೇಟಿ ಮಾಡಿದ್ದರು. ಈ ವೇಳೆ ಡಿಕೆ ಶಿವಕುಮಾರ್ ತಮ್ಮ ಪರವಾದ ವಾದವನ್ನು ವರಿಷ್ಠರಿಗೆ ತಲುಪಿಸಿದ್ದಾರೆ ಎಂದು ಮೂಲಗಳು ತಿಳಿಸುವೆ.ಕಳೆದ ತಿಂಗಳು ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ಅವರ ನಡುವೆ ಅಧಿಕಾರ ಹಂಚಿಕೆಯ ಸಂಬಂಧಪಟ್ಟಂತೆ ಬಾರಿ ಚರ್ಚೆಗಳು ನಡೆಯುತ್ತಿದ್ದವು. ಪರಿಸ್ಥಿತಿ ವಿಪರೀತಕ್ಕೆ ತಲುಪಿದರಿಂದಾಗಿ ಹೈಕಮಾಂಡ್ ನಾಯಕರು ಮಧ್ಯ ಪ್ರವೇಶ ಮಾಡಿ ಸೂಚನೆ ನೀಡಿದ್ದರು. ಅದರಂತೆ ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ್ ನಡುವೆ ಎರಡು ಉಪಹಾರ ಕೂಟಗಳು ನಡೆದವು. ಇದರೊಂದಿಗೆ ನಾಯಕರ ನಡುವೆ ಮನಸ್ತಾಪಕ್ಕೆ ತಾತ್ಕಾಲಿಕ ಕದನ ವಿರಾಮ ಘೋಷಣೆಯಾಗಿತ್ತು.

ಆದರೆ, ನಾಯಕರು ಮತ್ತು ಶಾಸಕರ ನಡುವೆ ಅಧಿಕಾರ ಹಂಚಿಕೆ ವಿವಾದ ತೀವ್ರ ಸ್ವರೂಪದಲ್ಲಿ ನಡೆಯುತ್ತಲೇ ಇತ್ತು. ಇದೀಗ ಕಾಂಗ್ರೆಸ್ ಹೈಕಮಾಂಡ್ ಆಯೋಜಿಸಿದ್ದ ಭೋಜನಕೂಟದಲ್ಲಿ ಡಿಕೆ.ಶಿವಕುಮಾರ್ ಅವರು ಏಕಾಂಗಿಯಾಗಿ ಭಾಗಿಯಾಗಿರುವುದು ಭಿನ್ನಾಭಿಪ್ರಾಯಕ್ಕೆ ಎಡೆ ಮಾಡಿಕೊಡುತ್ತದೆಯೇ ಎಂಬ ಅನುಮಾನಗಳನ್ನು ಹುಟ್ಟು ಹಾಕಿದೆ.

2023ರಲ್ಲಿ ರಾಜ್ಯದಲ್ಲಿ ಪಕ್ಷ ಅಧಿಕಾರಕ್ಕೆ ಬಂದಾಗ ಅಧಿಕಾರ ಹಂಚಿಕೆ ಒಪ್ಪಂದ ನಡೆದಿದ್ದರಿಂದ ಸಿಎಂ ಹುದ್ದೆ ಬದಲಾವಣೆಯ ಬಗ್ಗೆ ಹೈಕಮಾಂಡ್ ಇದೀಗ ಅಂತಿಮ ನಿರ್ಧಾರ ತೆಗೆದುಕೊಳ್ಳಬೇಕಾಗಿದೆ. ಆದರೆ, ಸಿದ್ದರಾಮಯ್ಯ ಮತ್ತು ಶಿವಕುಮಾರ್ ಇಬ್ಬರಿಗೂ ಒಂದೇ ಬಾರಿಗೆ ಔತಣಕೂಟಲ್ಲಿ ಅವಕಾಶ ನೀಡದಿರುವುದು ಊಹಾಪೋಹಗಳಿಗೆ ಕಾರಣವಾಗಿದೆ.

ಏತನ್ಮಧ್ಯೆ ದೆಹಲಿಯಲ್ಲಿ ನಡೆದ ರ್ಯಾಲಿ ಹೆಸರಿಗೆ ಮತಗಳ್ಳತನದ ವಿರುದ್ಧ ನಡೆಯುತ್ತಿರುವ ಪ್ರತಿಭಟನೆಯೇ ಆಗಿದ್ದರೂ, ಒಂದು ರೀತಿ ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ್ ಅವರು ತಮ್ಮ ಬಲ ಪ್ರದರ್ಶಿಸುವ ವೇದಿಕೆಯಂತೆ ಕಂಡು ಬಂದಿತ್ತು.

ಡಿಕೆ.ಶಿವಕುಮಾರ್ ಅವರ ಸಹಾಯಕ ಮತ್ತು ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಅವರು 2026 ಜನವರಿ.6ರಂದು ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಾರೆಂದು ಹೇಳಿದ್ದರು. ಈ ಹೇಳಿಕೆಯನ್ನಿಟ್ಟುಕೊಂಡು ಡಿಕೆ.ಶಿವಕುಮಾರ್ ಅವರ ಬಂಬಲಿಕರು ಘೋಷಣೆಗಳನ್ನು ಕೂಗಿದ್ದರು. ಇದಕ್ಕೆ ಪ್ರತಿಯಾಗಿ ಸಿದ್ದರಾಮಯ್ಯ ಬೆಂಬಲಿಗರು ಕೂಡ ಐದು ವರ್ಷ ಅಧಿಕಾರ ಪೂರ್ಣಗೊಳಿಸುತ್ತಾರೆ ಎಂದು ಘೋಷಣೆ ಕೂಗಿದ್ದರು.ಈ ನಡುವೆ ಇಕ್ಬಾಲ್ ಹುಸೇನ್ ಮತ್ತು ಸಿಎಂ ಪುತ್ರ ಡಾ. ಯತೀಂದ್ರ ಹೇಳಿಕೆಗಳು ಅಪ್ರಸ್ತುತ ಪಕ್ಷದ ಹೈಕಮಾಂಡ್ ನಾಯಕತ್ವ ಬದಲಾವಣೆಯ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ಹೇಳಿದ್ದಾರೆ.

## ಶಾಮನೂರು ಶಿವಶಂಕರಪ್ಪ ನಿಧನಕ್ಕೆ ಮಡಿವಾಳ ಸಮಾಜ ಸಂತಾಪ



**ದಾವಣಗೆರೆ:** ದಾವಣಗೆರೆಹಿರಿಯ ಶಾಸಕರು, ರಾಜಕೀಯ ಮುತ್ಸದ್ದಿ, ವೀರಶೈವ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷರಾದ ಶಾಮನೂರ ಶಿವಶಂಕರಪ್ಪ ನಿಧನದ ಹಿನ್ನೆಲೆಯಲ್ಲಿ ವಿನೋಬಾ ನಗರದ ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಮಾಜ ಸಂತಾಪ ಸೂಚಿಸಿದೆ.

ದಾವಣಗೆರೆ ನಗರವನ್ನು ರಾಜಕೀಯ, ಶೈಕ್ಷಣಿಕ ಔದ್ಯೋಗಿಕ ಕ್ಷೇತ್ರಗಳಲ್ಲಿ ರಾಷ್ಟ್ರಮಟ್ಟಕ್ಕೆ ಕೊಂಡೊಯ್ದ ಶ್ರೇಷ್ಠ ಉದ್ಯಮಿ, ರಾಜಕಾರಣಿ ಇವರಾಗಿದ್ದು, ಅವರ ನಿಧನದಿಂದ ರಾಜ್ಯಕ್ಕೆ ಮತ್ತು ವಿಶೇಷವಾಗಿ ದಾವಣಗೆರೆ ಜಿಲ್ಲೆಗೆ ತುಂಬಲಾರದ ಹಾನಿಯಾಗಿದೆ. ಅವರ ಅಗಲಿಕೆಯ ದುಖ ಭರಿಸುವ ಶಕ್ತಿಯನ್ನು ಭಗವಂತ ಅವರ ಕುಟುಂಬ ಮತ್ತು ಅಭಿಮಾನಿಗಳಿಗೆ ನೀಡಲಿ ಹಾಗೂ ಮೃತರ ಆತ್ಮಕ್ಕೆ ಚಿರ ಶಾಂತಿ ದೊರೆಯಲೆಂದು ಪ್ರಾರ್ಥಿಸುತ್ತೇನೆ ಎಂದು ಸಂತಾಪದಲ್ಲಿ ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಮಾಜದ ಅಧ್ಯಕ್ಷರು, ಕಾರ್ಯದರ್ಶಿ ಸೇರಿದಂತೆ ಸಮಸ್ತ ಪದಾಧಿಕಾರಿಗಳು ಕಂಬನಿ ಮಿಡಿದಿದ್ದಾರೆ.

## ಡಿ.17 ರಂದು ವಿಕಲಚೇತನರ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಸುವರ್ಣಸೌಧದ ಎದುರು ಪ್ರತಿಭಟನೆ



**ದಾವಣಗೆರೆ:** ವಿಕಲಚೇತನರಿಗೆ ಪ್ರಸ್ತುತ ನೀಡುತ್ತಿರುವ ಮಾಸಾಶನವನ್ನು ಕನಿಷ್ಠ 5 ಸಾವಿರ ರೂ, ಗಳಿಗೆ ಹೆಚ್ಚಿಸುವುದು, ವಿಕಲಚೇತನರಿಗೆ ರಾಜಕೀಯ ಪ್ರಾತಿನಿಧ್ಯ, ಹಾಗೂ ವಿಕಲಚೇತನರ ಪ್ರತ್ಯೇಕ ನಿಗಮ ಮಂಡಳಿ ಸ್ಥಾಪನೆ ಮಾಡಬೇಕು ಎಂಬುದು ಸೇರಿದಂತೆ ಇತರೆ ಬೇಡಿಕೆಗಳಿಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ವಿಕಲಚೇತನರ ಆರ್ ಪಿಡಿ ಟಾಸ್ಕ್ ಫೋರ್ಸ್ ಸಂಘಟನೆಯು ಡಿ.17 ರಂದು ಬೆಳಗಾವಿಯ ಸುವರ್ಣ ಸೌಧದ ಎದುರು ಪ್ರತಿಭಟನೆ ಹಮ್ಮಿಕೊಂಡಿದೆ.

ಕೇಂದ್ರ ಸರ್ಕಾರ ವಿಕಲಚೇತನರ ಹಕ್ಕುಗಳ ಕಾಯಿದೆ ಜಾರಿಗೊಳಿಸಿ 9 ವರ್ಷಗಳು ಕಳೆದರು ಕರ್ನಾಟಕ ರಾಜ್ಯ ಸರ್ಕಾರದ ಇಚ್ಛಾಶಕ್ತಿ ಕೊರತೆಯಿಂದ ಕಾಯಿದೆ ಸಂಪೂರ್ಣವಾಗಿ ಜಾರಿಗೆ ಬರದ ಕಾರಣ ವಿಕಲಚೇತನರು ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಮುಖ್ಯವಾಹಿನಿಗೆ ಬರುವಲ್ಲಿ ಸಾಧ್ಯವಾಗಿಲ್ಲ ಎಂದು ಸಂಘಟನೆಯ ರಾಜ್ಯ ಗೌರವಾಧ್ಯಕ್ಷರಾದ ಎಂ. ವಿಜಯಲಕ್ಷ್ಮಿ ಪತ್ರಿಕಾ ಹೇಳಿಕೆಯಲ್ಲಿ ಬೇಸರ ಹೊರಹಾಕಿದ್ದಾರೆ.

ರಾಜ್ಯ ಸರ್ಕಾರ ಕಳೆದ 2 ಬಜೆಟ್ನಲ್ಲಿ ವಿಕಲಚೇತನರ ಯಾವುದೇ ಪ್ರಮುಖ ಬೇಡಿಕೆಗಳನ್ನು ಈಡೇರಿಸದೇ ವಿಕಲಚೇತನರನ್ನು ಸಂಪೂರ್ಣವಾಗಿ ಕಡೆಗಣಿಸಿದೆ. ಕೂಡಲೇ ಸರ್ಕಾರ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನದಲ್ಲಿ ವಿಕಲಚೇತನರಿಗೆ ಶೇ.5 ರಷ್ಟು ಅನುದಾನವನ್ನು ಮೀಸಲಿಡಬೇಕು, ವಿಕಲಚೇತನರ ರಿಯಾಯಿತಿ ದರದ ಬಸ್ ಪಾಸಿನ ಪ್ರಯಾಣದ ಮಿತಿಯನ್ನು ಹೆಚ್ಚಿಸುವುದು ಸೇರಿದಂತೆ ಹಲವು ಪ್ರಮುಖ ಹಕ್ಕೊತ್ತಾಯಗಳ ಈಡೇರಿಕೆಗಾಗಿ ಒತ್ತಾಯಿಸಿ ಈ ಪ್ರತಿಭಟನೆ ಹಮ್ಮಿಕೊಂಡಿರುವುದಾಗಿ ತಿಳಿಸಿದರು.

## ಎಂಸಿಇ ನೆಟ್‌ಬಾಲ್ ತಂಡ ವಿಟಿಯು ಚಾಂಪಿಯನ್ಸ್



**ಹಾಸನ:** ನಗರದ ಮಲೆನಾಡು ತಾಂತ್ರಿಕ ಮಹಾವಿದ್ಯಾಲಯದ ವಿದ್ಯಾರ್ಥಿಗಳ ನೆಟ್‌ಬಾಲ್ ತಂಡ ಬೆಂಗಳೂರಿನ ರಾಜರಾಜೇಶ್ವರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ವಿಟಿಯು ರಾಜ್ಯ ಮಟ್ಟದ ನೆಟ್‌ಬಾಲ್ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಗಳಿಸುವ ಮೂಲಕ ಚಾಂಪಿಯನ್ ಆಗಿ ಹೊರಹೊಮ್ಮಿದೆ. ಕಾಲೇಜಿನ ವಿದ್ಯಾರ್ಥಿಗಳಾದ ಕರಣ್ ಪಿ ಗೌಡ, ನಿರಂಜನ್ ಡಿ ಎಲ್, ಪವನ್ ಎಸ್ ವಿ, ಆಕಾಶ್ ಗೌಡ ಎಸ್ ವಿ, ಚಿರಂತ್ ಎ, ಯಶ್ವಂತ್ ಎ ಎಸ್, ಭರತ್ ಎಚ್ ಕೆ, ಭುವನ್ ಜೆ ಎಚ್, ವಿನಯ್ ಕೆ ಎಂ ಮತ್ತು ರೋಹಿತ್ ಎನ್ ವಿ ವಿಜೇತ ತಂಡದ ಭಾಗವಾಗಿದ್ದರು.

# ಪರಿಸರದ ಮಾಲಿನ್ಯ ಉಂಟು ಮಾಡುವಂತಹ ಹಬ್ಬಗಳನ್ನ ಸ್ವಯಂ ನಿಯಂತ್ರಿಸಿಕೊಳ್ಳಬೇಕು.

**ಚಿತ್ರದುರ್ಗ:** ಬರುವ ದೀಪಾವಳಿ ಹಬ್ಬದ ಸಮಯದಲ್ಲಿ ಸಾರ್ವಜನಿಕರು ಹಸಿರು ಪಟಾಕಿಗಳನ್ನೇ ಸಿಡಿಸಿ, ಮಾಲಿನ್ಯವನ್ನು ತಡೆದು ಪರಿಸರದ ಬಗ್ಗೆ ಕಾಳಜಿ ವಹಿಸಬೇಕು ಪ್ರತಿಯೊಬ್ಬರಲ್ಲೂ ಸಹ ಪರಿಸರ ಸ್ನೇಹಿ ಚಿಂತನೆಗಳನ್ನು ಅಳವಡಿಸಿಕೊಂಡು, ಮುಂದಿನ ಜನಾಂಗಕ್ಕೆ ಉತ್ತಮ ವಾತಾವರಣವನ್ನು ಬಿಟ್ಟು ಹೋಗಬೇಕಾಗಿದ್ದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಉಪ ಪರಿಸರ ಅಧಿಕಾರಿಗಳಾದ ರಾಜೇಶ್ ರವರು ಮಾತನಾಡಿದರು.

ಅವರು ಚಿತ್ರದುರ್ಗ ನಗರದ ಐಯುಡಿಪಿ ಲೇಔಟ್ ನಲ್ಲಿರುವ ಪ್ರಶಾಂತಿ ವಿದ್ಯಾಲಯದಲ್ಲಿ ಆರ್ ಪ್ರವೀಣ್ ಚಂದ್ರ ರವರ ಜಾನ್ ಮೈನ್ಸ್ ಆಯೋಜಿಸಿದ್ದ ಸ್ವಚ್ಛತಾ ಪಕ್ವಾಡ ಯೋಜನೆಯಲ್ಲಿ, ಕಾರ್ಯಕ್ರಮದಲ್ಲಿ ಉದ್ಘಾಟಿಸುತ್ತಾ ಮಾತನಾಡುತ್ತಿದ್ದರು.

ಮಾಲಿನ್ಯ ಉಂಟು ಮಾಡುವಂತಹ ಹಬ್ಬಗಳ ಬಗ್ಗೆ ನಾವು ಗಮನ ಹರಿಸಬೇಕು, ಬರುವ ದೀಪಾವಳಿಯಂದು ಹೆಚ್ಚು ಪಟಾಕಿ ಸಿಡಿಸದೆ ಶಬ್ದ ಮಾಲಿನ್ಯ, ವಾಯು ಮಾಲಿನ್ಯ, ಜಲ ಮಾಲಿನ್ಯವನ್ನು ನಿಯಂತ್ರಿಸಲು, ಸ್ವಲ್ಪ ಮಟ್ಟಿಗೆ ಹಸಿರು ಪಟಾಕಿಗಳನ್ನೇ ಸಿಡಿಸಿ, ಸ್ವಯಂ ನಿಯಂತ್ರಣ ಸಾಧಿಸಿ ಕೊಳ್ಳಬೇಕೆಂದು ವಿನಂತಿಸಿಕೊಂಡರು.

ಜಾನ್ ಮೈನ್ಸ್‌ನ ಜಿಯಾಲಜಿ ಮ್ಯಾನೇಜರ್ ಶರತ್ ಕುಮಾರ್ ಅವರು ಮಾತನಾಡಿ ಮಕ್ಕಳು ಸಿಹಿ ತಿಂಡಿಗಳನ್ನು ತಿಂದಾಗ, ಅವುಗಳ ಕವರ್ ಗಳನ್ನು ಜೋಬಿನಲ್ಲಿಟ್ಟುಕೊಂಡು, ನಂತರ ಕಸದ ಬುಟ್ಟಿಗೆ ಹಾಕುವಂತಹ ಅಭ್ಯಾಸವನ್ನು ರೂಡಿಸಿಕೊಳ್ಳಬೇಕು, ಎಲ್ಲೆಂದರಲ್ಲಿ ಕಸ ಚೆಲ್ಲುವ ಹವ್ಯಾಸವನ್ನು ತೊರೆಯಬೇಕು ಎಂದರು.

ಜಾನ್ ಮೈನ್ಸ್ ನ ಮ್ಯಾನೇಜರ್ ಆದ ಗುರುರಾಜ್ ಹಿರೇಮಠ್ ರವರು ಮಾತನಾಡಿ ಸ್ವಚ್ಛತೆ ಬಗ್ಗೆ ಹೆಚ್ಚು ಆದ್ಯತೆ ನೀಡುವಂತಹ



ವಿಚಾರಗಳನ್ನು, ಸಣ್ಣವಯಸ್ಸಿನಲ್ಲಿ ಮಕ್ಕಳಿಗೆ ಬೋಧಿಸಬೇಕು, ಪ್ಲಾಸ್ಟಿಕ್ ಅನ್ನು ಮರುಬಳಕೆ ಮಾಡಿ ಪರಿಸರವನ್ನ ಉಳಿಸಿಕೊಳ್ಳಬೇಕು ಎಂದರು.

ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷರ ಡಾ. ಎಚ್ .ಕೆ. ಎಸ್, ಸ್ವಾಮಿಯವರು ಮಾತನಾಡುತ್ತಾ ಮಕ್ಕಳಿಗೆ ಮಾದರಿಗಳ ಮುಖಾಂತರ ಕಸದಿಂದ ರಸ ಮಾಡುವ ವಿಚಾರಗಳನ್ನ ತಿಳಿಸಿಕೊಡಬೇಕು, ಪರಿಸರ ಮಾಲಿನ್ಯದಿಂದ ನಿಯಂತ್ರಣ ಮಾಡುವಂತಹ ವಿಚಾರಗಳನ್ನ ಜನಸಾಮಾನ್ಯರಲ್ಲಿ ಹೆಚ್ಚು ಪ್ರಚಾರ ಪಡಿಸಬೇಕು. ಗಾಂಧೀಜಿಯವರ ಚಿಂತನೆಗಳನ್ನ ಅಳವಡಿಸಿಕೊಂಡು ಸರಳ ಜೀವನವನ್ನು ಅಳವಡಿಸಿಕೊಂಡು, ಹತ್ತಿರದಲ್ಲಿ ತಯಾರಾಗುವ ವಸ್ತುಗಳನ್ನ ಬಳಕೆ ಮಾಡಿ ಪರಿಸರವನ್ನ ಕಾಪಾಡಿಕೊಳ್ಳಬೇಕು ಎಂದು ಪ್ರಾತ್ಯಕ್ಷಿಕೆ ಮುಖಾಂತರ ತೋರಿಸಿ ಕೊಟ್ಟರು.

ಕಾರ್ಯಕ್ರಮದಲ್ಲಿ ಅಧ್ಯಕ್ಷ ವಹಿಸಿದ್ದ ಪ್ರಶಾಂತಿ ವಿದ್ಯಾಲಯದ ಅಧ್ಯಕ್ಷರಾದ ಶ್ರೀ ರಮೇಶ್ ಇಟಗಿ ಅವರು ಮಾತನಾಡಿ ಮಕ್ಕಳಲ್ಲಿರುವ ಮುಗ್ಧತೆಯನ್ನು ಪರಿಸರ ರಕ್ಷಣೆ ಗೋಸ್ಕರ ಜಾಗೃತಿಗೊಳಿಸಬೇಕು, ದೊಡ್ಡವರು ಪರಿಸರದ ಚಿಂತನೆ ಅಳವಡಿಸಿಕೊಂಡಷ್ಟು ಮಕ್ಕಳು ಸಹ ಅವುಗಳನ್ನು ಅಳವಡಿಸಿಕೊಳ್ಳಲು ಅನುಕೂಲಕರವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಪ್ರಶಾಂತಿ ವಿದ್ಯಾಲಯದ ಮುಖ್ಯೋಪಾಧ್ಯಾಯರಾದ ಶ್ರೀಮತಿ ಮೌನ, ಶಿಕ್ಷಕರಾದ ಅಶ್ವಿನಿ, ಪವಿತ್ರ, ನಿವೇದಿತ, ಜ್ಯೋತಿ, ಲತಾ, ಜಾನ್ ಮೈನ್ಸ್ ನಾ ಮಹೇಶ್, ಪರಿಸರ ಅಧಿಕಾರಿಗಳಾದ ಅಜಿತ್ ಕುಮಾರ್, ಸರ್ವೆಯರ್ ಮ್ಯಾನೇಜರ್ ಆದ ಉಲ್ಲಾಸ್ ಕುಮಾರ್, ಜೆ ಟಿ ಎಂಜಿನಿಯರಾದ ಅಮರೇಶ್ ಜಿ, ಪರಿಸರ ಅಧಿಕಾರಿಗಳಾದ ಆಸಿಫ್ ಖಾನ್ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಚಿತ್ರ ಬರೆದಂತಹ ಯಶಸ್, ರಾಘವೇಂದ್ರ, ಶ್ರೇಯಸ್, ಚಂದು, ವಿಶ್ವಾಸ ರವರಿಗೆ ಬಹುಮಾನ ವಿತರಿಸಲಾಯಿತು.

ಶಾಲೆಗೆ ಸ್ವಚ್ಛತೆಗೆ ಅನುಕೂಲಕರವಾಗುವಂತಹ ಕಸದ ಬುಟ್ಟಿ, ಪೊರಕೆ, ಶೌಚಾಲಯ ಸ್ವಚ್ಛಗೊಳಿಸುವ ದ್ರಾವಣಗಳು, ಕೈಗವಚಗಳು, ಮಕ್ಕಳಿಗೆ ಸೋಪು, ಪೇಸ್ಟು, ಉಗುರು ಕತ್ತರಿಸುವ ಸಾಧನ ಮುಂತಾದವುಗಳನ್ನು ವಿತರಿಸಿ, ಸ್ವಚ್ಛತಾ ಪಕ್ವಾಡದ ಬಗ್ಗೆ ಜಾಗೃತಿ ಮೂಡಿಸಲಾಯಿತು.

# ಪಂಚಾಯತ್‌ಗಳ ಅಭಿವೃದ್ಧಿಯಿಂದ ದೇಶದ ಅಭಿವೃದ್ಧಿಯು ಸಾಧ್ಯ



**ಗದಗ:** ದೇಶದ ಅಭಿವೃದ್ಧಿಯಲ್ಲಿ ಪಂಚಾಯತ್‌ಗಳ ಪಾತ್ರ ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಗ್ರಾ.ಪಂ. ಅಧ್ಯಕ್ಷರು, ಉಪಾಧ್ಯಕ್ಷರು, ಪಿಡಿಓಗಳು ಕ್ರಿಯಾತ್ಮಕವಾಗಿ ಕೆಲಸ ನಿರ್ವಹಿಸಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್. ಕೆ.ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಶನಿವಾರ ಮಾನವ ಅಭಿವೃದ್ಧಿ ಸೂಚ್ಯಂಕ ಹಾಗೂ ಸುಸ್ಥಿತ ಅಭಿವೃದ್ಧಿ ಗುರಿಗಳ ಕುರಿತು ಜರುಗಿದ ಉಪನ್ಯಾಸ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆಯು ಹಲವಾರು ಮಹತ್ವದ ಯೋಜನೆ ಹಾಗೂ ಯೋಚನೆಗಳಿಗೆ ಸರ್ಕಾರಕ್ಕೆ ಮಾರ್ಗದರ್ಶಿಯಾಗಿದೆ. ಗ್ರಾಮದ ಕಟ್ಟಕಡೆಯ ವ್ಯಕ್ತಿ ಶುದ್ಧ ಕುಡಿಯುವ ನೀರು ಸಿಗಬೇಕೆಂದು ಸರ್ಕಾರದ ಆಶಯವಾಗಿತ್ತು. ಈ ಯೋಜನೆಯನ್ನು ಪಂಚಾಯತಿ, ಗ್ರಾಮಗಳಲ್ಲಿ ಯಶಸ್ವಿಯಾಗಿ ಅನುಷ್ಠಾನ ಮಾಡಲಾಯಿತು. ಸದ್ಯ ಕರ್ನಾಟಕದಲ್ಲಿ 20,000 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪಿಸಲು ಸಾಧ್ಯವಾಗಿದೆ. ಇದು ಗದಗ ಜಿಲ್ಲೆಯಿಂದ ಆರಂಭವಾದ ಯೋಜನೆ ಅಭೂತಪೂರ್ವ ಯಶಸ್ವಿಯಾಗಿದ್ದು ನಮ್ಮ ಹೆಮ್ಮೆ ಎಂದರು.

ಕರ್ಮಯೋಗಿ ಮಿಷನ್‌ದ ಡಾ. ಬಾಲಸುಬ್ರಹ್ಮಣ್ಯಂ ಅವರು ಮಾನವ ಅಭಿವೃದ್ಧಿ ಸೂಚ್ಯಂಕ ಹಾಗೂ ಸುಸ್ಥಿತ ಅಭಿವೃದ್ಧಿ ಗುರಿಗಳ ಕುರಿತು ಉಪನ್ಯಾಸ ನೀಡಿದರು.

ದೇಶದ ಪ್ರಜೆಗಳ ಆರೋಗ್ಯ ವ್ಯವಸ್ಥೆ, ಶಿಕ್ಷಣ ವ್ಯವಸ್ಥೆ ಅಭಿವೃದ್ಧಿ ಪಡಿಸುವುದು ಮಾನವ ಅಭಿವೃದ್ಧಿ ಸೂಚ್ಯಂಕದ ಪ್ರಮುಖ ಅಂಶಗಳಾಗಿವೆ. ಮಗು ಹುಟ್ಟಿದಾಗ ಆರೋಗ್ಯಕರವಾಗಿ, ಪ್ರಜ್ಞಾವಂತನಾಗಿ, ಕೌಶಲ್ಯತೆಯಿಂದ ವಿಕಸನ ಹೊಂದಿದರೆ ನಿಜವಾದ ಅಭಿವೃದ್ಧಿಯಾದಂತೆಯೇ. ವಿಕಸಿತ ಪಂಚಾಯತ್ ಕ್ರೋಢೀಕರಿಸಿದರೆ ವಿಕಸಿತ ಭಾರತವಾಗುತ್ತದೆ. ಮಹಾತ್ಮಾ ಗಾಂಧೀಜಿಯವರು ಕಂಡ ಗ್ರಾಮೀಣಾಭಿವೃದ್ಧಿಯ ಕನಸು ನನಸಾಗಬೇಕು. ಸಂಪನ್ಮೂಲಗಳ ಕ್ರೋಢೀಕರಣ ವ್ಯವಸ್ಥೆ, ಆಡಳಿತದ ವ್ಯವಸ್ಥೆಯಲ್ಲಿ ಎದುರಾಗುವ ತೊಂದರೆಗಳು, ಸಮಸ್ಯೆಗಳು ಹಾಗೂ ತೀರ್ಮಾನ ಕೈಗೊಳ್ಳುವುದರ ಕುರಿತು ವಿವರವಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾದಿಕಾರದ ಅಧ್ಯಕ್ಷ ಅಕ್ಬರಸಾಬ

ಬಬರ್ಜಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ, ರಾಜೂರ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಶಕುಂತಲಾ ಅಕ್ಕಿ, ಜೆ.ಕೆ.ಜಮಾದಾರ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷರು, ಪಿಡಿಓಗಳು, ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು

## ಅರಿವು ವಿದ್ಯಾಭ್ಯಾಸ ಸಾಲ ಯೋಜನೆಗೆ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

**ಹಾಸನ :** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ(ನಿ) ಹಾಸನ ಇವರ ವತಿಯಿಂದ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಜೈನ್, ಬೌದ್ಧ, ಸಿಖ್, ಹಾಗೂ ಪಾರ್ಸಿ ಜನಾಂಗದವರಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿ ಸಿಇಟಿ/ಡಿ.ಸಿಇಟಿ/ಪಿಜಿ–ಸಿಇಟಿ/ನೀಟ್ ಮೂಲಕ ಪ್ರವೇಶ ಪಡೆದು ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2025–26ನೇ ಸಾಲಿನ ಅರಿವು ವಿದ್ಯಾಭ್ಯಾಸ ಸಾಲ ಯೋಜನೆ (ರಿನ್ಯೂವಲ್) ಯೋಜನೆಯಡಿಯಲ್ಲಿ ಸೌಲಭ್ಯ ನೀಡಲು Website : www.kmdconline.karnataka.gov.in ಮೂಲಕ ಆನ್‌ಲೈನ್ ಅಲ್ಲಿ ಅರ್ಜಿ ಸಲ್ಲಿಸಲು ದಿನಾಂಕ: 03–01–2026 ರವರೆಗೆ ಅವಧಿ ವಿಸ್ತರಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವ್ಯವಸ್ಥಾಪಕರ ಕಚೇರಿ, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಮೌಲಾನಾ ಆಜಾದ್ ಭವನ, 1ನೇ ಮಹಡಿ, ಆಕಾಶವಾಣಿ ಕ್ವಾಟ್ರಸ್ ಹಿಂಭಾಗ, ಸಾಲಗಾಮೆ ಮುಖ್ಯ ರಸ್ತೆ, ಶ್ರೀ ವಿದ್ಯಾ ಗಣಪತಿ ಅಡ್ಡರಸ್ತೆ, ಮಲ್ನಾಡ್ ಇಂಜಿನಿಯರಿಂಗ್ ಕಾಲೇಜ್ ಹತ್ತಿರ, ಹಾಸನ–573202 ದೂರವಾಣಿ ಸಂಖ್ಯೆ: 08172–246333 ಇವರನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ.

## ಪಶುಪಾಲನೆಯಲ್ಲಿ ಉದ್ಯಮಶೀಲತೆ, ವಿನೂತನ ತಂತ್ರಜ್ಞಾನಗಳ ತರಬೇತಿ

**ಗದಗ:** ಪಶುವೈದ್ಯಕೀಯ ಮಹಾವಿದ್ಯಾಲಯ, ಗದಗನಲ್ಲಿ ಪಶುಪಾಲಕ ರೈತರಿಗೆ ಮತ್ತು ಆಸಕ್ತ ಯುವಕ–ಯುವತಿಯರಿಗೆ ಪಶುಪಾಲನೆಯಲ್ಲಿ ಉದ್ಯಮಶೀಲತೆ ಮತ್ತು ವಿನೂತನ ತಂತ್ರಜ್ಞಾನಗಳು ಎಂಬ ವಿಷಯದ ಕುರಿತು ಡಿ. 22 ರಿಂದ ಡಿ. 23ರ ವರೆಗೆ ಎರಡು ದಿನಗಳ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ತರಬೇತಿಯು ಉಚಿತವಾಗಿರುತ್ತದೆ, ತರಬೇತಿಗೆ ಮುಂಚಿತವಾಗಿಯೇ ನೊಂದಾಯಿಸುವುದು ಕಡ್ಡಾಯ,

ಆಸಕ್ತ ರೈತರು ಸದರಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಲು, ಮೊಬೈಲ್, ವಾಟ್ಸಪ್ ಅಥವಾ ಈ–ಮೇಲ್ ಮೂಲಕ ತಮ್ಮ ವಿವರಗಳನ್ನು ಕಳುಹಿಸಿ ನೊಂದಣಿ ಮಾಡಿಸಬೇಕು. ತರಬೇತಿಯ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಪಶುವೈದ್ಯಕೀಯ ವಿಸ್ತರಣ ಶಿಕ್ಷಣ ವಿಭಾಗ, ಪಶುವೈದ್ಯಕೀಯ ಮಹಾವಿದ್ಯಾಲಯದ ಮುಖ್ಯಸ್ಥರು ಡಾ.ಶಿವಕುಮಾರ ಕ ರಡ್ಡೇರ, ಸಂಪರ್ಕಿಸಬಹುದಾಗಿದೆ ಮೊಬೈಲ್ ಸಂಖ್ಯೆ 8197983914, 9900115524, ಈ–ಮೇಲ್ hodvahevcg@gmail.com ಕೋರಿದೆ.

### ಮಾಸ್ತಮ್ಮ ಕಾಲೋನಿಯಲ್ಲಿ ಕನ್ನಡ ರಾಜ್ಯೋತ್ಸವ ಆಚರಣೆ.

## ಕನ್ನಡ ಬಾವುಟವನ್ನು ಸಹ ಖಾದಿಯಲ್ಲಿ ತಯಾರು ಮಾಡಬಹುದು

**ಚಿತ್ರದುರ್ಗ:** ಕರ್ನಾಟಕದಲ್ಲಿ ಹಾರಾಟ ಮಾಡುವ ಕನ್ನಡ ಬಾವುಟವನ್ನು ಸಹ ಖಾದಿಯಲ್ಲಿ ತಯಾರು ಮಾಡಿ ರಾಷ್ಟ್ರದ ಗಮನವನ್ನು ಸೆಳೆದು, ಇತರ ರಾಜ್ಯಗಳಿಗೆ ಮಾದರಿಯಾಗಬಹುದು ಹಾಗೂ ರಾಷ್ಟ್ರದ ಮನ್ನಣೆಯನ್ನು ಸಹ ಗಳಿಸಬಹುದು ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದರು.

ಅವರು ಚಿತ್ರದುರ್ಗ ನಗರದ ಮಾಸ್ತಮ್ಮ ಬಡಾವಣೆಯಲ್ಲಿ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಸಂದರ್ಭದಲ್ಲಿ ಗಾಂಧೀಜಿ ಸಿದ್ಧಾಂತಗಳು ಮತ್ತು ಪರಿಸರ ವಿಚಾರವಾಗಿ ಮಾತನಾಡುತ್ತಿದ್ದರು.

ಕನ್ನಡ ಬಾವುಟದ ಇತಿಹಾಸವು ಹಳದಿ ಮತ್ತು ಕೆಂಪು ಬಣ್ಣಗಳೊಂದಿಗೆ ಕನ್ನಡಿಗರ ಭಾವನಾತ್ಮಕ ಸಂಬಂಧವನ್ನು ಹೊಂದಿದೆ, ಇದು ಅರಿಶಿಣ ಮತ್ತು ಕುಂಕುಮವನ್ನು ಸೂಚಿಸುತ್ತದೆ ಮತ್ತು ಯೋಗಕ್ಷೇಮ, ಮಂಗಳ ಮತ್ತು ಶೌರ್ಯದ ಸಂಕೇತವಾಗಿದೆ. ಇದನ್ನು 1960ರ ದಶಕದಲ್ಲಿ ಕನ್ನಡ ಚಳವಳಿಗಳ



ಸಂದರ್ಭದಲ್ಲಿ ಕನ್ನಡಿಗರ ಏಕತೆಗಾಗಿ ಬಳಸಲು ಪ್ರಾರಂಭಿಸಲಾಯಿತು ಎಂದರು.ಮಕ್ಕಳಿಗೆ ಚರಕವನ್ನ ಪರೀಕ್ಷಿಸುವ ಕೆಲಸವಾಗಬೇಕು, ಕನ್ನಡ ರಾಜ್ಯೋತ್ಸವದಲ್ಲಿ ಮಕ್ಕಳನ್ನು, ಮಕ್ಕಳ ಆಟಿಕೆ ಸಾಮಾನುಗಳ ಮುಖಾಂತರ ಖಾದಿ, ಗ್ರಾಮೀಣ ಅಭಿವೃದ್ಧಿಯನ್ನು ಪರಿಚಯ ಮಾಡಿಕೊಡಬಹುದು ಎಂದರು.

ಕನ್ನಡ ಶಾಲೆಗಳ ಅಭಿವೃದ್ಧಿಗೋಸ್ಕರ ಕನ್ನಡ ರಾಜ್ಯೋತ್ಸವದಲ್ಲಿ ಕೆಲಸಗಳಾಗಬೇಕು, ಪರಿಸರ ನಿರ್ವಹಣೆಯನ್ನು ಸಹ ಇದರಲ್ಲಿ ಅಳವಡಿಸಿಕೊಳ್ಳಬಹುದು ಎಂದರು.

ಕಾರ್ಯಕ್ರಮದಲ್ಲಿ ಹಿರಿಯೂರಿನ ಬಿ ಇ ಓ ಆರ್ ತಿಪ್ಪೇಸ್ವಾಮಿ, ಖಗೋಳ ಶಾಸ್ತ್ರಜ್ಞರಾದ ಎಸ್ ಟಿ ಸ್ವಾಮಿ ಅವರನ್ನು ಸನ್ಮಾನಿಸಲಾಯಿತು.

ಆದಿಶೇಷ ನಾಗದೇವತಾ ಸೇವಾ ಟ್ರಸ್ಟ್ ನ ಅಧ್ಯಕ್ಷರಾದ ಶ್ರೀ ನಿಂಜಪ್ಪ, ಕಾರ್ಯದರ್ಶಿಗಳಾದ ಭಗತ್ ಠಾಕೂರ್, ಖಜಾಂಜಿ ಮಂಜುನಾಥ್, ಇನ್ನಿತರ ಸದಸ್ಯರುಗಳು ಹಾಜರಿದ್ದರು.

## ಎಸ್.ಎಸ್.ಎಲ್.ಸಿ. ಶಿಕ್ಷಣ ಕ್ಷೇತ್ರ ಮಕ್ಕಳ ಜೀವನದ ಒಂದು ತಿರುವು– ಪ್ರಶಾಂತ್ ಕೆ.ಎಸ್.

**ದಾವಣಗೆರೆ:** ವಿದ್ಯಾರ್ಥಿ, ವಿದ್ಯಾರ್ಥಿನಿಯರು ಮೊಬೈಲ್ ಬಿಟ್ಟು ಶಿಕ್ಷಣದ ಕಡೆ ಹೆಚ್ಚು ಗಮನ ಹರಿಸಬೇಕಾಗಿದೆ ಎಸ್.ಎಸ್.ಎಲ್.ಸಿ. ಶಿಕ್ಷಣ ಕ್ಷೇತ್ರ ಮಕ್ಕಳ ಜೀವನದ ಒಂದು ತಿರುವು ಮಕ್ಕಳು ಮುಂದಿನ ಜೀವನದ ಬಗ್ಗೆ ಈಗಲೇ ಮಾನಸಿಕವಾಗಿ ಬದ್ಧತೆಯಿಂದ, ಕರ್ತವ್ಯನಿಷ್ಠೆಯಿಂದ, ಸಮಯಪ್ರಜ್ಞೆಯೊಂದಿಗೆ ತೊಡಗಿಸಿಕೊಂಡರೆ ಬದುಕು ಸಾರ್ಥಕತೆ ಆಗುತ್ತದೆ. ಉತ್ತಮ ಫಲಿತಾಂಶದೊಂದಿಗೆ ಹೆತ್ತ ತಂದೆ–ತಾಯಿಗಳಿಗೆ ವ್ಯಾಸಂಗ ಮಾಡಿದ ವಿದ್ಯಾಸಂಸ್ಥೆಗೆ ಹುಟ್ಟಿದ ಊರಿಗೆ ಒಳ್ಳೆಯ ಹೆಸರು ತರಬೇಕಾಗಿದೆ ಎಂದು ದಾವಣಗೆರೆ ಪೊಲೀಸ್ ನಿರೀಕ್ಷಕರಾದ ಪ್ರಶಾಂತ್ ಕೆ.ಎಸ್. ತಮ್ಮ ಮನದಾಳದ ಮಾತು ಹಂಚಿಕೊಂಡರು.

ದಾವಣಗೆರೆ ಜಿಲ್ಲಾ ಪೊಲೀಸ್ ಇಲಾಖೆ ಮತ್ತು ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಇತ್ತೀಚೆಗೆ ಪಿ.ಜೆ. ಬಡಾವಣೆಯ ಪೊಲೀಸ್ ಸಮುದಾಯ ಭವನದಲ್ಲಿ ಎಸ್.ಎಸ್.ಎಲ್.ಸಿ. ಮಕ್ಕಳಿಗೆ ಪರೀಕ್ಷಾ ಪೂರ್ವಭಾವಿ



ತಯಾರಿ ಉಚಿತ ಕಾರ್ಯಾಗಾರವನ್ನು ಗಿಡಕ್ಕೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಪೊಲೀಸ್ ಅಧಿಕಾರಿ ರವೀಂದ್ರ ಕಾಳಭೈರವ ಮಾತನಾಡಿ, ಮಕ್ಕಳು ಪರೀಕ್ಷೆಗೆ ಅಷ್ಟೆ ಸೀಮಿತವಾಗದೆ ಮುಂದಿನ ಸಾಧನೆಗಳಿಗೆ ಜಾಗೃತೆಯೊಂದಿಗೆ ಹೆತ್ತ ತಂದೆ–ತಾಯಿಗಳ ಕನಸು ನನಸು ಮಾಡಬೇಕಾಗಿದೆ ಎಂದರು.

ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರು ಪರೀಕ್ಷೆ ಎದುರಿಸುವ ಧೈರ್ಯ ತುಂಬಿ ಶಿಕ್ಷಣದ ಬಗ್ಗೆ ಮಾರ್ಗದರ್ಶನ ನೀಡಿ, ತಂದೆ–ತಾಯಿಗಳ ಪೊಲೀಸ್ ಅಧಿಕಾರಿಗಳ ಅನುಮತಿ ಪಡೆದು ಉತ್ತಮ ಫಲಿತಾಂಶಕ್ಕೆ ಪ್ರತಿಜ್ಞಾವಿಧಿ ಬೋಧಿಸಿದರು.

## ಸಾರ್ವಜನಿಕರ ಗಮನಕ್ಕೆ

**ಗದಗ :** ಸಮುದಾಯ ಮಾನಸಿಕ ಆರೋಗ್ಯ ಹಗಲು ಆರೋಗ್ಯ ಕೇಂದ್ರ (ಮಾನಸಧಾರ) ಮಾನಸಿಕ ರೋಗಿಗಳ ಪುನಶ್ಚೇತನಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಗದಗ ವತಿಯಿಂದ ಡೇಕೇರ್ ಸೆಂಟರ್ (ಮಾನಸದಾರ) ಕೇಂದ್ರವನ್ನು ಸ್ಥಾಪಿಸಲು ಆಸಕ್ತಿಯ ಅಭಿವ್ಯಕ್ತಿ ಆಹ್ವಾನಿಸಿದ್ದು, ಜಿಲ್ಲೆಯ ಅರ್ಹ ಮತ್ತು ಅನುಭವ ಸರ್ಕಾರೇತರ ಸ್ವಯಂ ಸೇವಾ ಸಂಸ್ಥೆಗಳಿಂದ ಕೆ.ಟಿ.ಟಿ.ಪಿ ನಿಯಾಮನುಸಾರ ಆಸಕ್ತಿಯ ಅಭಿವ್ಯಕ್ತಿ ಆಹ್ವಾನಿಸಲಾಗಿದೆ.ಆಸಕ್ತ ಸ್ವಯಂಸೇವಾ ಸಂಸ್ಥೆಗಳ ಅಧಿಸೂಚನೆ ಮತ್ತು ಅರ್ಜಿ ಸಲ್ಲಿಸಲು ವಿವರಗಳನ್ನು www.kppp.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದು ದಿನಾಂಕ: 11/12/2025 ರಿಂದ 19/12/2025ರ ಸಂಜೆ 4:00 ಗಂಟೆಯೊಳಗೆ ಅಗತ್ಯ ಮಾಹಿತಿಯೊಂದಿಗೆ ಅಪ್‌ಲೋಡ್ ಮಾಡತಕ್ಕದ್ದು. ಹಾಗೂ ಸಂಬಂಧಿಸಿದ ಎನ್.ಜಿ.ಓ ಸಂಸ್ಥೆಯವರು ಅಧಿಸೂಚನೆಯಲ್ಲಿ ತಿಳಿಸಿರುವಂತೆ ದಿನಾಂಕ: 22/12/2025, ರಂದು ಬೆಳಗ್ಗೆ 11:00ಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಛೇರಿಯಲ್ಲಿ ಮೂಲ ದಾಖಲೆಗಳೊಂದಿಗೆ ಪರಿಶೀಲನೆಗಾಗಿ ಖುದ್ದಾಗಿ ಹಾಜರಾಗತಕ್ಕದ್ದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

## ಸ್ವಯಂ ಸೇವಕ ಗೃಹರಕ್ಷಕ ಸ್ಥಾನಗಳಿಗೆ ಅರ್ಜಿ ಆಹ್ವಾನ

**ಹಾಸನ :** ಜಿಲ್ಲೆಯ ಗೃಹರಕ್ಷಕದಳದ ಎಲ್ಲಾ ತಾಲ್ಲೂಕು ಹಾಗೂ ಉಪ ಘಟಕದಳದಲ್ಲಿ ಖಾಲಿ ಇರುವ ಸ್ವಯಂ ಸೇವಕ ಗೃಹರಕ್ಷಕ ಗೌರವ ಸದಸ್ಯ ಸ್ಥಾನಗಳಿಗೆ ಅರ್ಹರಿರುವ ಹಾಗೂ ಸೇವಾ ಮನೋಭಾವ ಹೊಂದಿರುವ ಹಾಸನ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇಚ್ಛೆಯುಳ್ಳ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ., ಉತ್ತೀರ್ಣತೆಯ ಅಂಕ ಪಟ್ಟಿಯ ದೃಢೀಕರಣ ಪ್ರತಿ, ಆಧಾರ್ ಕಾರ್ಡ್ ಪ್ರತಿ ಮತ್ತು ಬ್ಯಾಂಕ್ ಪಾಸ್ ಪುಸ್ತಕದ ದೃಢೀಕೃತ ಪ್ರತಿಯನ್ನು ಹಾಸನ ಜಿಲ್ಲಾ ಗೃಹರಕ್ಷಕದಳದ ಕಚೇರಿಗೆ ಸರ್ಕಾರಿ ರಜಾ ದಿನಗಳನ್ನು ಹೊರತುಪಡಿಸಿ ಕಚೇರಿ ವೇಳೆಯಲ್ಲಿ ಖುದ್ದಾಗಿ ಸಲ್ಲಿಸಿ ಕಚೇರಿಯಿಂದ ದಿನಾಂಕ: 01/12/2025 ರಿಂದ ಉಚಿತವಾಗಿ ಅರ್ಜಿಗಳನ್ನು ಪಡೆಯಬಹುದಾಗಿದೆ.ಪೂರ್ಣ ಭರ್ತಿ ಮಾಡಿದ ಅರ್ಜಿಗಳನ್ನು ಕೆಳಗೆ ನಮೂದಿಸಿದ ಅಗತ್ಯ ಅಡಕಗೊಳೊಂದಿಗೆ ದಿನಾಂಕ:31/12/2025 ರ ಒಳಗಾಗಿ ಜಿಲ್ಲಾ ಗೃಹರಕ್ಷಕದಳದ ಕಚೇರಿಗೆ ಸಲ್ಲಿಸುವಂತೆ ಸೂಚಿಸಲಾಗಿದೆ. ಹಾಸನ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಅಭ್ಯರ್ಥಿಗಳು ಮಾತ್ರ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. .ಅರ್ಜಿ ಸಲ್ಲಿಸಲು ಅರ್ಹತೆಗಳು: ಕನಿಷ್ಟ 19 ರಿಂದ 50 ವರ್ಷದ ಒಳಗಿರಬೇಕು. ಎಸ್.ಎಸ್.ಎಲ್.ಸಿ., ಉತ್ತೀರ್ಣರಾಗಿರಬೇಕು. ಅಭ್ಯರ್ಥಿಗಳು ತಮ್ಮ ವಾಸಸ್ಥಳದಿಂದ ಘಟಕಗಳಿಗೆ 6 ಕಿ.ಮೀ.ವ್ಯಾಪ್ತಿಯೊಳಗಿರಬೇಕು. ಅಭ್ಯರ್ಥಿಗಳು ಧೃಡಕಾಯರಾಗಿದ್ದು, ಆರೋಗ್ಯವಂತರಾಗಿರಬೇಕು.ಅರ್ಜಿಯೊಂದಿಗೆ ಸಲ್ಲಿಸಬೇಕಾದ ದೃಢೀಕೃತ ಪ್ರಮಾಣ ಪತ್ರಗಳು: ಎಸ್.ಎಸ್.ಎಲ್.ಸಿ., ಉತ್ತೀರ್ಣತೆಯ ಅಂಕ ಪಟ್ಟಿ, ಜನ್ಮ ದಿನಾಂಕದ ದೃಢೀಕರಣದ ಪ್ರತಿ, ಇತ್ತೀಚಿನ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ, ಬ್ಯಾಂಕ್ ಪಾಸ್ ಬುಕ್‌ನ ಪ್ರತಿ (ಎಸ್.ಬಿ.ಐ.,ಬ್ಯಾಂಕ್) ಕಡ್ಡಾಯ, ಪೋಲಿಸ್ ವೆರಿಫಿಕೇಶನ್(online).



**ಚನ್ನಗಿರಿ :** ತಾಲೂಕಿನ ಹೊನ್ನೇಮರದಹಳ್ಳಿ ಗ್ರಾಮಕ್ಕೆ ಚನ್ನಗಿರಿಯಿಂದ ದಾವಣಗೆರೆ ಮಾರ್ಗವಾಗಿ ನೂತನ ಬಸ್ ಸಂಚಾರಕ್ಕೆ ಪ್ರಧಾನ ಜಿಲ್ಲಾ ಸತ್ರ ನ್ಯಾಯಾದೀಶರಾದ ವೇಲಾ ಡಿ.ಕೆ. ಚಾಲನೆ ನೀಡಿದರು.

#### ಕೆಳದಿ ಶಿವಪ್ಪನಾಯಕ ವಿವಿಯಿಂದ ಹೊಸ ಭತ್ತ ತಳಿ ಅಭಿವೃದ್ಧಿ । ಅಧಿಕೃತ ಬಿಡುಗಡೆ

# ಸಣ್ಣ ಕೆಂಪಕ್ಕಿ ಸಹ್ಯಾದ್ರಿ ಸಿಂಧೂರ

**ಶಿವಮೊಗ್ಗ:** ದಕ್ಷಿಣ ಭಾರತದಲ್ಲಿ ಮೊತ್ತ ಮೊದಲ ಬಾರಿಗೆ ಸಣ್ಣ ಕೆಂಪಕ್ಕಿ ಭತ್ತದ ತಳಿ 'ಸಹ್ಯಾದ್ರಿ ಸಿಂಧೂರ'ವನ್ನು ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ ಅಭಿವೃದ್ಧಿಪಡಿಸಿದೆ.

ಕೆಂಪಕ್ಕಿಯಲ್ಲಿ ಜ್ಯೋತಿ, ವಾಳ್ಯ, ರತ್ನಚೂಡಿ, ಕಾರ್ಕಳ ಜಯ, ಇತ್ತೀಚೆಗೆ ಸಹ್ಯಾದ್ರಿ ಕೆಂಪು ಮುಕ್ತಿ ಸೇರಿ ಹಲವು ತಳಿಗಳಿದ್ದರೂ ಇವೆಲ್ಲವೂ ದಪ್ಪ ಅಕ್ಕಿ. ದಕ್ಷಿಣ ಭಾರತದಲ್ಲಿ ಸ್ಥಳೀಯ ಹವಾಗುಣಕ್ಕೆ ಹೊಂದಿಕೆಯಾಗುವಂತಹ, ಪೌಷ್ಟಿಕಾಂಶಗಳಿಂದ ಕೂಡಿದ ಸಣ್ಣ ಕೆಂಪಕ್ಕಿ ಇರಲಿಲ್ಲ. ಹೀಗಾಗಿ ದಪ್ಪ ಕೆಂಪಕ್ಕಿಯನ್ನು ಮಕ್ಕಳು ಊಟ ಮಾಡುವುದಿಲ್ಲ ಎಂದು ಕೆಲವರು ಸೋನಾ ಮಸೂರಿಯಂತಹ ಬಿಳಿ ಸಣ್ಣಕ್ಕಿಯನ್ನೇ ಬಳಸುತ್ತಿದ್ದಾರೆ. ರೈತರು ಮತ್ತು ಗ್ರಾಹಕರ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿವಿ ಸಂಶೋಧನಾ ನಿರ್ದೇಶಕ ಡಾ.

ಬಿ.ಎಂ.ದುಷ್ಯಂತ್ ಕುಮಾರ್ ನೇತೃತ್ವದ ವಿಜ್ಞಾನಿಗಳ ತಂಡ ಪ್ರಯೋಗಾಲಯ ಮತ್ತು ರೈತರ ತಾಕುಗಳಲ್ಲಿ ಹಲವು ವರ್ಷಗಳ ಕಾಲ ಪ್ರಯೋಗ ನಡೆಸಿ ದಕ್ಷಿಣ ಭಾರತದ ಮೊತ್ತ ಮೊದಲ ಸಣ್ಣ ಕೆಂಪಕ್ಕಿ 'ಸಹ್ಯಾದ್ರಿ ಸಿಂಧೂರ' ತಳಿಯನ್ನು ಅಭಿವೃದ್ಧಿಪಡಿಸಿದೆ.

ಈ ತಳಿ ಅಧಿಕ ಕಬ್ಬಿಣ, ಸತು, ಪ್ರೋಟೀನ್, ವಿಟಮಿನ್ ಸಿ ಮತ್ತು ರೋಗ ನಿರೋಧಕ ಶಕ್ತಿ ಹೆಚ್ಚಿಸುವಂತಹ ಅಂಶಗಳನ್ನು

ಸಹ್ಯಾದ್ರಿ ಸಿಂಧೂರ ಸಣ್ಣ ಕೆಂಪಕ್ಕಿ.



ಒಳಗೊಂಡಿದೆ. ಕಡಿಮೆ ಗ್ಲೈಸೆಮಿಕ್ ಸೂಚ್ಯಂಕ ಅಲ್ಲದೆ ಬೆಂಕಿ ರೋಗಕ್ಕೆ ಮಧ್ಯಮ ಪ್ರತಿರೋಧಕತೆ ಹೊಂದಿದೆ. "120 ದಿನಗಳಲ್ಲಿ ಕಟಾವಿಗೆ ಬರುವ ಈ ತಳಿಯು ಹೆಕ್ಟೇರ್‌ಗೆ 53ರಿಂದ 55 ಕ್ವಿಂಟಾಲ್ ಇಳುವರಿ ನೀಡುತ್ತದೆ. ಅತ್ಯಧಿಕವಾಗಿ ಹುಲ್ಲೂ ದೊರೆಯುತ್ತದೆ. ಅತಿಹೆಚ್ಚು ತೆಂಡೆ ಒಡೆಯುವುದಲ್ಲದೆ ದಿಂಡು ದಪ್ಪ ಇರುತ್ತದೆ. ಹೀಗಾಗಿ ಭತ್ತ ನೆಲಕ್ಕೆ ಒರಗುವ ಸಾಧ್ಯತೆ ಕಡಿಮೆ. ಕಾಂಡ ಕೊರಕ, ಬಿಳಿ ಹೇನು ಕೀಟಗಳ ಬಾಧೆಯನ್ನೂ ತಡೆಯುವ ಶಕ್ತಿ ಇದಕ್ಕಿದೆ ಎನ್ನುತ್ತಾರೆ ಈ ತಳಿಯ ಬಿತ್ತನೆ ಬೀಜವನ್ನು ಇತರ ರೈತರಿಗೆ ವಿತರಣೆ ಮಾಡುತ್ತಿರುವ ದಾವಣಗೆರೆ ತಾಲೂಕು ಚಂದನಹಳ್ಳಿ ಗ್ರಾಮದ ರೈತ ಮಲ್ಲಿಕಾರ್ಜುನ.

10 ಕ್ವಿಂಟಾಲ್ ಬಿತ್ತನೆ ಬೀಜ ವಿತರಣೆ: ತಳಿಯನ್ನು ಎನ್‌ಡಿಪಿಸಿಆರ್‌ನಲ್ಲಿ ನೋಂದಣಿ ಮಾಡಿದ್ದು ವಿಶ್ವವಿದ್ಯಾಲಯದ ಆವರಣದಲ್ಲಿ ನ.7ರಂದು ಆರಂಭವಾಗುವ ಕೃಷಿ ಮತ್ತು

**ಸಣ್ಣ ಕೆಂಪಕ್ಕಿಗೆ ಇರುವ ಭಾರಿ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು ಸಹ್ಯಾದ್ರಿ ಸಿಂಧೂರ ಸಣ್ಣ ಕೆಂಪಕ್ಕಿ ಭತ್ತದ ತಳಿಯನ್ನು ಅಭಿವೃದ್ಧಿಪಡಿಸಃಲಾಗಿದೆ. ಅಧಿಕೃತ ಉದ್ಘಾಟನೆಗೆ ಮುನ್ನವೆ ಬಿತ್ತನೆ ಬೀಜಕ್ಕೆ ಹೆಚ್ಚು ಬೇಡಿಕೆ ಸೃಷ್ಟಿಯಾಗಿದೆ.**

**–ಡಾ. ಬಿ.ಎಂ.ದುಷ್ಯಂತ್‌ಕುಮಾರ್ ನಂಶೋಧನಾ ನಿರ್ದೇಶಕ ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿವಿ**

ತೋಟಗಾರಿಕೆ ಮೇಳದಲ್ಲಿ ಅಧಿಕೃತವಾಗಿ ಬಿಡುಗಡೆ ಆಗುತ್ತದೆ.

ಮಾಡಿಕೊಳ್ಳುತ್ತಿದ್ದಾರೆ.

ವಿಶ್ವವಿದ್ಯಾಲಯವು ಈ ವರ್ಷ ಇದೇ ತಳಿಯ 10 ಕ್ವಿಂಟಾಲ್ ಬಿತ್ತನೆ ಬೀಜವನ್ನು ರೈತರಿಗೆ ಒದಗಿಸಿದೆ. ಅಚ್ಚರಿ ಎಂದರೆ ಉದ್ಘಾಟನೆಗೂ ಮುನ್ನವೇ ಬೆಂಗಳೂರು, ಮಂಗಳೂರು ಮತ್ತು ಕೇರಳದಲ್ಲಿ ಸಣ್ಣ ಕೆಂಪಕ್ಕಿ ಭತ್ತಕ್ಕೆ ಭಾರಿ ಬೇಡಿಕೆ ಸೃಷ್ಟಿಯಾಗಿದೆ. ಕೆಲ ರೈತರು ಸಾವಯವ ಪದ್ಧತಿಯಲ್ಲಿ ಈ ಭತ್ತವನ್ನು ಬೆಳೆದು ಅಕ್ಕಿ ಮಾಡಿಸಿ 5, 10 ಕೆ.ಜಿ. ಪ್ಯಾಕೆಟ್ ಮಾಡಿ ಮಾರಾಟ ಮಾಡುತ್ತಿದ್ದಾರೆ. ಬೇಡಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ರೈತರು ವಿಶ್ವವಿದ್ಯಾಲಯ ಮತ್ತು ಪ್ರಯೋಗಾರ್ಥವಾಗಿ ಬೆಳೆದ ರೈತರಿಂದ ಬಿತ್ತನೆ ಬೀಜವನ್ನು ಪಡೆದು ಅಧಿಕ ಬೀಜೋತ್ಪಾದನೆ

## ಎಂಎಲ್‌ಸಿ ಡಿ.ಟಿ.ಶ್ರೀನಿವಾಸ್ ಗೆ ಸಚಿವ ಸ್ಥಾನ ನೀಡಿ ರಾಜ್ಯ ಪ್ರವರ್ಗ–1ರ ಜಾತಿಗಳ ಒಕ್ಕೂಟದ ಆಗ್ರಹ

**ದಾವಣಗೆರೆ:** ರಾಜ್ಯದ ಅತ್ಯಂತ ಹಿಂದುಳಿದ ಸಮುದಾಯದ ನಾಯಕರಾದ ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸರಿಗೆ ಸಚಿವ ಸ್ಥಾನ ನೀಡಬೇಕೆಂದು ಕರ್ನಾಟಕ ರಾಜ್ಯ ಪ್ರವರ್ಗ–1ರ ಜಾತಿಗಳ ಒಕ್ಕೂಟ ಆಗ್ರಹಿಸಿದೆ.ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಂಜುನಾಥ ಬಿ.ಗುತ್ತೂರು ಮಾತನಾಡಿ, 2023ರ ವಿಧಾನಸಭಾ ಚುನಾವಣೆಯಲ್ಲಿ ಹಿಂದುಳಿದ ವರ್ಗದವರು ಒಗ್ಗಟ್ಟಾಗಿ ಮತ ಹಾಕಿದ್ದರಿಂದಲೇ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿದೆ. ಹೀಗಿರುವಾರ ಪ್ರವರ್ಗ–1ರ ಒಕ್ಕೂಟದ ರಾಜ್ಯಾಧ್ಯಕ್ಷರಾದ ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸರನ್ನು ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗಗಳ ಅಧ್ಯಕ್ಷರಾಗಿ ನೇಮಿಸಿ, ನಂತರ ರದ್ದುಪಡಿಸಿದ್ದು ಸರಿಯಲ್ಲ ಎಂದರು.ಇದು ಅತೀ ಹಿಂದುಳಿದ ಎಲ್ಲಾ ಸಮಾಜಗಳಿಗೆ ಮಾಡಿದ ಅವಮಾನವಾಗಿದೆ. ಕಾಂಗ್ರೆಸ್ಸಿಗೆ ಅಸಾಧ್ಯವಾಗಿದ್ದ ಆಗ್ನೇಯ ಶಿಕ್ಷಕರ ಕ್ಷೇತ್ರವನ್ನು ಕಾಂಗ್ರೆಸ್ಸಿಗೆ ಗೆದ್ದುಕೊಟ್ಟಿರುವ ಡಿ.ಟಿ.ಶ್ರೀನಿವಾಸರಿಗೆ ಸಚಿವ ಸ್ಥಾನ ನೀಡಿದರೆ ಅತೀ ಹಿಂದುಳಿದ ಸಮಾಜಗಳಿಗೆ ಅನುಕೂಲವಾಗುತ್ತದೆ. ಹೀಗಾಗಿ ಸಚಿವ ಸಂಪುಟ ಪುನಾರಚನೆ ವೇಳೆ ಇವರನ್ನು ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯದ ಪ್ರವರ್ಗ–1 ಹಿಂದುಳಿದ ಜಾತಿಗಳಲ್ಲಿ 95 ಜಾತಿ, 376 ಉಪ ಜಾತಿಗಳು ಬರಲಿದ್ದು, ಈ ಸಮಾಜಗಳ ಒಟ್ಟು ಜನಸಂಖ್ಯೆ ಸುಮಾರು 75 ಲಕ್ಷದಷ್ಟು ಇದೆ. ಆರ್ಥಿಕ, ಸಾಮಾಜಿಕ, ಔದ್ಯೋಗಿಕವಾಗಿ ಅತ್ಯಂತ ಹಿಂದುಳಿದ ಈ ಜಾತಿಗಳಲ್ಲಿ ಸಾಕ್ಷರತೆ ಪ್ರಮಾಣ ಅತ್ಯಂತ ಕಡಿಮೆ ಇದೆ. ರಾಜಕೀಯ ಪ್ರಾತಿನಿಧ್ಯವಂತೂ ಇಲ್ಲವೇ ಇಲ್ಲ ಎಂಬಂತಾಗಿದೆ. ಸ್ಥಳೀಯ ಸಂಸ್ಥೆ, ತಾಲೂಕು ಮತ್ತು ಜಿಲ್ಲಾ ಪಂಚಾಯಿತಿಗಳಲ್ಲೂ ಪ್ರಾತಿನಿಧ್ಯ ಇಲ್ಲವಾಗಿದೆ. ಹೀಗಾಗಿ ಅತ್ಯಂತ ಹಿಂದುಳಿದ ಸ್ಥಿತಿಗೆ ಈ ಸಮಾಜಗಳು ತಲುಪಿವೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

#### ತೆಲುಗು ಭಾಷಿಕರ ಅಸಮಾಧಾನ ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆ


# ಮಂತ್ರಾಲಯದಲ್ಲಿ ಕನ್ನಡ ಬಳಕೆಗೆ ಆಕ್ಷೇಪ

ರಾಯಚೂರು: ಕರ್ನಾಟಕದಲ್ಲಿ ಅನ್ಯ ಭಾಷಿಕರು ಕನ್ನಡ ಕಲಿಯದೆ, ಹಿಂದಿ, ತೆಲುಗು ಮತ್ತಿತರ ಭಾಷೆಗಳಲ್ಲಿ ವ್ಯವಹರಿಸುವುದರ ವಿರುದ್ಧ ಆಗಾಗ ಅಸಮಾಧಾನ ವ್ಯಕ್ತವಾಗುತ್ತಿರುವ ನಡುವೆಯೇ, ಪ್ರಸಿದ್ಧ ಧಾರ್ಮಿಕ ಕೇಂದ್ರ ಮಂತ್ರಾಲಯದಲ್ಲಿ ಕನ್ನಡ ಬಳಕೆ ಹೆಚ್ಚಳಕ್ಕೆ ತೆಲುಗು ಭಾಷಿಕರಿಂದ ಆಕ್ಷೇಪ ವ್ಯಕ್ತವಾಗಿದೆ.

ಮಂತ್ರಾಲಯವೂ ಸೇರಿ ಆಂಧ್ರದ ಎಲ್ಲೆಡೆ ತೆಲುಗು ಭಾಷೆಯನ್ನೇ ಬಳಸಬೇಕು. ಅಲ್ಲಿ ಕನ್ನಡಕ್ಕೆ ಏತಕ್ಕಾಗಿ ಸ್ಥಾನ ನೀಡಲಾಗಿದೆ ಎಂಬ ಚರ್ಚೆ ಸಾಮಾಜಿಕ ಜಾಲತಾಣಗಳಲ್ಲಿ ಕಿಡಿ ಹೊತ್ತಿಸಿದೆ. ಭಾಷೆ ವಿಚಾರವಾಗಿ ಈವರೆಗೂ ನೆರೆಯ ಅಂಧ್ರದ ಜತೆ ಕರ್ನಾಟಕ ಎಂದಿಗೂ ಸಂಘರ್ಷಕ್ಕೆ ಇಳಿದಿಲ್ಲ. ತುಂಗಭದ್ರಾ, ಕೃಷ್ಣಾ ನದಿ ನೀರಿನ ಬಳಕೆ ವಿಚಾರವಾಗಿ ಸಣ್ಣಪುಟ್ಟ ತಗಾದೆಗಳಿದ್ದವು. ಆದರೆ ಈಗ ರಾಯಚೂರಿನ ಗಡಿಯಲ್ಲಿರುವ ಮಂತ್ರಾಲಯದ ರಾಘವೇಂದ್ರಸ್ವಾಮಿಗಳ ಮಠವನ್ನು ಭಾಷೆಯ ವಿಚಾರಕ್ಕೆ ಎಳೆದು ತರಲಾಗಿದೆ. ಮಠದ ಮುಂಭಾಗದಲ್ಲಿ ರಾಯರ ಸ್ತೋತ್ರದ ಶ್ಲೋಕ 'ಪೂಜ್ಯಾಯ ರಾಘವೇಂದ್ರಾಯ ಸತ್ಯಧರ್ಮರತಾಯಚ ಸೇರಿ ಮಠದೊಳಗೆ ಕನ್ನಡ ಭಾಷೆ ಫಲಕ ಅಳವಡಿಸಿರುವುದು ಮತ್ತು ಆಡಳಿತದಲ್ಲಿ ಬಹುತೇಕ ಕನ್ನಡವನ್ನೇ ಬಳಸುತ್ತಿರುವುದು ತೆಲುಗು ಜನರ ಆಕ್ಷೇಪಕ್ಕೆ ಕಾರಣವ

ಕರ್ನಾಟಕದವರೇ ಹೆಚ್ಚು

ಆಂಧ್ರಪ್ರದೇಶದವರ ಆಕ್ಷೇಪಕ್ಕೆ ಕಾರಣವಾಗಿರುವ ಮಂತ್ರಾಲಯ ದೇಗುಲದ



ಕನ್ನಡ ನಾಮಫಲಕ

ಆಂಧ್ರದವರ ವಿರೋಧ ಏಕೆ?

ಮಠವು ಅಂಧ್ರದಲ್ಲಿದ್ದರೂ ಕನ್ನಡ ಬಳಕೆಯೇ ಹೆಚ್ಚಾಗಿದೆ. ಬ್ಯಾಂಕುಗಳಲ್ಲಿ ತೆಲುಗು ಭಾಷಿಕರು ನೇಮಕ ಗೊಂಡರೆ ಕರ್ನಾಟಕದಲ್ಲಿ ವಿರೋಧ ವ್ಯಕ್ತವಾಗುತ್ತಿದೆ. ಹಾಗಿರುವಾಗ ಆಂಧ್ರದಲ್ಲಿ ಕನ್ನಡವನ್ನೇಕೆ ಬಳಸಬೇಕು ಎಂಬ ವಾದ ಮಂಡಿಸಲಾಗುತ್ತಿದೆ. ಮಠದ ಆಡಳಿತ ತೆಲುಗನ್ನು ಪ್ರಾದೇಶಿಕ ಭಾಷೆಯನ್ನಾಗಿ ಅಳವಡಿಸಿ ಕೊಳ್ಳಬೇಕೆಂದು ಆಗ್ರಹ ಕೇಳಿ ಬರತೊಡಗಿದೆ. ಇದರಿಂದ ಸ್ಥಳೀಯರಿಗೆ ಉದ್ಯೋಗಾವಕಾಶ ದೊರೆಯುತ್ತಿಲ್ಲ ಎಂಬ ಚರ್ಚೆ ಶುರುವಾಗಿದೆ.

ವಾಸ್ತವದಲ್ಲಿ ಮಂತ್ರಾಲಯದ ರಾಯರ ಮಠಕ್ಕೆ ಭೇಟಿ ನೀಡುವವರಲ್ಲಿ ಕರ್ನಾಟಕದ ಭಕ್ತರೇ ಹೆಚ್ಚು. ಅಂಧ್ರದ ಸರ್ಕಾರ ಕ್ಷೇತ್ರದ ಪ್ರಗತಿಗೆ ಹೆಚ್ಚು ಗಮನ ಹರಿಸಿಲ್ಲ. ಶುದ್ಧ ಕುಡಿಯುವ ನೀರು, ಆರೋಗ್ಯ ಸೇವೆ, ಸಮರ್ಪಕ ವಿದ್ಯುತ್ ಸಹ ಗಡಿಯಲ್ಲಿರುವ ಮಂತ್ರಾಲಯಕ್ಕೆ ಅಲ್ಲಿನ ಸರ್ಕಾರ ಒದಗಿಸಲು ಆಸಕ್ತಿ ಒಚಿಡಿ 2009 ಛಿಡುಜಿಂ ನಡಿಗೆ ಪ್ರವಾಹ ಬಂದಾಗ ನದಿಗೆ ನಿರ್ಮಿಸಿದ್ದ ಸೇತುವೆ ಕೊಚ್ಚಿ ಹೋಗಿ ಸಂಚಾರ ಸ್ಥಗಿತಗೊಂಡಿತ್ತು.

# ಅನ್ನದ ಬಟ್ಟಲಿಗೆ ಮೀಥೇನ್ ಗ್ರಹಣ!

#### ಜಾನುವಾರು ಆಹಾರ ಪದ್ಧತಿ ಭತ್ತಕ್ಕೆ ಕಂಟಕ । ಅಧ್ಯಯನ ವರದಿ ಆತಂಕ


**ದಾವಣಗೆರೆ:** ರಾಜ್ಯದ ಹಲವು ಜಿಲ್ಲೆಗಳಲ್ಲಿ ಭತ್ತದ ಕೃಷಿಯಿಂದಲೇ ರೈತರ ಬದುಕು ಹಸನಾಗಿದೆ. ಆದರೆ ಹಸಿರಿನಿಂದ ತುಂಬಿದ ಇದೇ 'ಅನ್ನದ ಬಟ್ಟಲಿನಲ್ಲಿ' ಜನರ ಆರೋಗ್ಯಕ್ಕೆ ಕಂಟಕವಾದ ಮೀಥೇನ್ ಪ್ರಮಾಣ ಹೆಚ್ಚುತ್ತಿರುವುದನ್ನು ಅಧ್ಯಯನ ವರದಿ ಬಯಲಿಗೆಳೆದಿದೆ. ಅಷ್ಟೇ ಅಲ್ಲ ರೈತರ ಒಡನಾಡಿಯಾಗಿರುವ ಜಾನುವಾರುಗಳಿಂದಲೇ ಮೀಥೇನ್ ಪ್ರಮಾಣ ಹೆಚ್ಚುತ್ತಿರುವ ವಿಚಾರವೂ ಬೆಳಕಿಗೆ ಬಂದಿದೆ.

ರಾಜ್ಯ ಸರ್ಕಾರದ ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆಯ (ಇ.ಎಂ.ಪಿ.ಆರ್ ಐ) ತಜ್ಞರು 3–4 ವರ್ಷಗಳಿಂದ ಕೈಗೊಂಡ ಅಧ್ಯಯನ ವರದಿ ಅನ್ವಯ ಮೀಥೇನ್ ದುಷ್ಪರಿಣಾಮಗಳ ಚಿತ್ರಣ ಕಟ್ಟಿಕೊಟ್ಟಿದ್ದಾರೆ.

ಕೃಷಿ ಪದ್ಧತಿಯಲ್ಲಿ ಮತ್ತು ಜಾನುವಾರುಗಳ ಆಹಾರ ಕ್ರಮದಲ್ಲಿ ಬದಲಾವಣೆ ಮಾಡಿಕೊಳ್ಳುವ ಮೂಲಕ ಮೀಥೇನ್ ಅಪಾಯದ ಪ್ರಮಾಣವನ್ನು ತಗ್ಗಿಸಲು ಸಾಧ್ಯವಿದೆ ಎಂಬ ಸಲಹೆಯನ್ನೂ ನೀಡಿದ್ದಾರೆ. ಈ ನಿಟ್ಟಿನಲ್ಲಿ

ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳ ಜತೆಗೆ ಹೆಚ್ಚಿನ ಸಂಶೋಧನೆ ಮಾಡುವ ಪ್ರಯತ್ನವೂ ನಡೆದಿದೆ.

'ಹಸಿರುಮನೆ ಅನಿಲ'ವಾದ ಮೀಥೇನ್ ವಾತಾ ವರಣದಲ್ಲಿರುವ ಪ್ರಮಾಣ ಜಾಗತಿಕ



ತಾಪಮಾನ ಏರಿಕೆಯ ಕಾರಣಗಳಲ್ಲಿ ಒಂದಾಗಿದೆ. ಕರ್ನಾಟಕದ ಕೃಷಿ ವಲಯವು 664.06 ಗಿಗಾಗ್ರಾಂ ಮೀಥೇನ್ (ಸಿಎಚ್4) ಅನ್ನು ಹೊರಸೂಸಿದೆ. ಇದರಲ್ಲಿ ಶಪುಟ 5 ಜಾನುವಾರು ಮತ್ತು ಭತ್ತದ ಕೃಷಿಯನ್ನು ಪ್ರಾಥಮಿಕ ಮೂಲಗಳಾಗಿ ಗುರುತಿಸಲಾಗಿದೆ.

### ಮೀಥೇನ್ ಜಿಲ್ಲೆಗಳು

**ಜಾನುವಾರು ವಲಯದಲ್ಲಿ ಬೆಳಗಾವಿ, ತುಮಕೂರು, ಹಾಸನ, ಮಂಡ್ಯ, ಮೈಸೂರು, ಬಾಗಲಕೋಟೆ ಅತಿ ಹೆಚ್ಚು ಮೀಥೇನ್ ಹೊರಸೂಸುವ ಜಿಲ್ಲೆಗಳೆಂದು ಗುರುತಿ ಸಲಾಗಿದೆ. ಭತ್ತದ ಕೃಷಿಯಿಂದ ಮೀಥೇನ್ ರಾಯಚೂರು, ಹೊರಸೂಸುವಿಕೆಗೆ ಯಾದಗಿರಿ, ದಾವಣಗೆರೆ, ಬಳ್ಳಾರಿ, ಕೊಪ್ಪಳ ಪ್ರಮುಖ ಕೊಡುಗೆ ನೀಡಿವೆ.**

## ಅಪಾಯ ತಗ್ಗಿಸುವ ತಂತ್ರ

* ಜಾನುವಾರುಗಳ ಆಹಾರ ಪದ್ಧತಿ ಬದಲಾಗಲಿ
* ಸುಧಾರಿತ ಗೊಬ್ಬರ ನಿರ್ವಹಣೆಗೆ ಆದ್ಯತೆ ಸಿಗಲಿ
*ಜೈವಿನ ಅನಿಲ ತಂತ್ರಜ್ಞಾನದ ಪ್ರಚಾರ ಅಗತ್ಯವಿದೆ
* ಪರಾಯ ತೇವಗೊಳಿಸುವಿಕೆ, ಒಣಗಿಸುವಿಕೆ ಆಗಲಿ
* ಅಲ್ಪಾವಧಿಯ ಭತ್ತದ ಪ್ರಭೇದಗಳ ಕೃಷಿ ಅನುಷ್ಠಾನ
*ಸಾಮರ್ಥ್ಯವರ್ಧನೆ ಕಾರ್ಯಕ್ರಮ ನಡೆಯಬೇಕು
*ಹವಾಮಾನ ಕ್ರಿಯಾ ಯೋಜನೆಗಳು ಅತ್ಯಗತ್ಯ



## ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ಗದಗ :** 2025–26ನೇ ಸಾಲಿನಲ್ಲಿ ವಿವಿಧ ಕ್ರೀಡಾಕೂಟದಲ್ಲಿ ರಾಷ್ಟ್ರಮಟ್ಟ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ವಿಜೇತರಾದ ಗದಗ ಜಿಲ್ಲೆಯ ಕ್ರೀಡಾಪಟುಗಳಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪ್ರೋತ್ಸಾಹಧನವನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿರುತ್ತದೆ.

ಜ. 1–2025 ರಿಂದ ಡಿ. 31–2025 ರವರೆಗೆ ವಿವಿಧ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ರಾಷ್ಟ್ರ ವಿಶ್ವವಿದ್ಯಾಲಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ವಿಜೇತರಾದ ಗದಗ ಜಿಲ್ಲೆಯ ಕ್ರೀಡಾಪಟುಗಳು ಈ ಕೆಳಕಾಣಿಸಿದ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಬಹುದು. ಕ್ರೀಡಾಕೂಟದಲ್ಲಿ ಭಾಗವಹಿಸಿದ ಬಗ್ಗೆ ಪ್ರಮಾಣಪತ್ರ, ಕ್ರೀಡಾಪಟುಗಳ ಆಧಾರ ಕಾರ್ಡ, ಕ್ರೀಡಾಪಟುಗಳ ಬ್ಯಾಂಕ ಪಾಸ್ ಬುಕ್, ಪಾಸ್ ಪೂರ್ಟ ಅಳತೆಯ ಪೋಟೋ–01, ದಾಖಲಾತಿಗಳೊಂದಿಗೆ ಅರ್ಜಿಯನ್ನು ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ಗದಗ ಇಲ್ಲಿ ಲಭ್ಯವಿದ್ದು, ಡಿ. 31 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08372–238345ಗೆ ಸಂಪರ್ಕಿಸಲು ಕೋರಲಾಗಿದೆ ಎಂದು ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಲರು ಇವರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

#### ಡಿಸೆಂಬರ್ 21 ರಂದು ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ

# 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ : ಸಿ ಎನ್ ಶ್ರೀಧರ

**ಗದಗ :** ಡಿಸೆಂಬರ್ 21 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ, 5 ವರ್ಷದೊಳಗಿನ ಪ್ರತಿ ಮಗುವಿಗೆ ತಪ್ಪದೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧರ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಡಿಸೆಂಬರ್ 21 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್ ಎಸ್



ನೀಲಗುಂದ ಮಾತನಾಡಿ ಡಿಸೆಂಬರ್ 21 ಕ್ಕೆ 5 ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೆ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಲು ಕ್ರಮ ವಹಿಸಲಾಗಿದೆ ಎಂದರು, ಪಲ್ಸ್ ಪೋಲಿಯೋ ಲಸಿಕೆ ನೀಡಲು ಅಗತ್ಯವಿರುವ ಸಿಬ್ಬಂದಿಗಳಿಗೆ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳನ್ನು ಬಳಸಿಕೊಳ್ಳಲು ಹಾಗೂ ರೂಟ್ ಮ್ಯಾಪ್ ಗಳನ್ನು ಮಾಡಿಕೊಳ್ಳಲಾಗಿದೆ. ವಲಸೆ ಹೋಗಿರುವ ಮತ್ತು ವಲಸೆ ಬಂದಿರುವ ಕುಟುಂಬದ ಮಕ್ಕಳನ್ನು ಗುರುತಿಸಿ ಲಸಿಕೆ ನೀಡಲು ಕ್ರಮ ವಹಿಸಲಾಗಿದೆ. ಜಿಲ್ಲೆಯಲ್ಲಿ 0–5 ವರ್ಷದೊಳಗಿನ 1,15,653 ಮಕ್ಕಳಿಗೆ ಪಲ್ಸ್ ಪೊಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ಸಭೆಗೆ ತಿಳಿಸಿದರು.

WHO (ಡಬ್ಲೂಎಚ್‌ಒ) ಬಿಜಾಪುರ ಯುನಿಟ್‌ನ, ಎಸ್‌ಎಮ್‌ಒ ಡಾ. ಮುಕುಂದ ಗಲಗಲಿ ಇವರು ಮಾತನಾಡಿ ಡಿಸೆಂಬರ್ 21 ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಬೆಳಗ್ಗೆ 8 ರಿಂದ ಸಂಜೆ 5 ಗಂಟೆಯವರೆಗೆ ಬೂತ್ ಮಟ್ಟದಲ್ಲಿ ಲಸಿಕೆ ನೀಡಲಾಗುತ್ತದೆ. ಡಿಸೆಂಬರ್ 22 ರಿಂದ ಡಿಸೆಂಬರ್ 24 ರವರೆಗೆ

ಮನೆ ಮನೆಗೆ ಭೇಟಿ ನೀಡಿ ಲಸಿಕೆ ನೀಡುವ ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ. ಡಿಸೆಂಬರ್ 21 ರಿಂದ 24 ರವರೆಗೆ 4 ದಿನಗಳು ಸಂಚಾರ ಕೇಂದ್ರಗಳು ಹಾಗೂ ಹೆಚ್ಚಿನ ಅಪಾಯ ಪ್ರದೇಶಗಳಲ್ಲಿ ವಿಶೇಷ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ..ಮಿನಾಕ್ಷಿ ಕೆ ಎಸ್ ಮಾತನಾಡಿ 0 ದಿಂದ 5 ವರ್ಷದೊಳಗಿನ ಮಕ್ಕಳಿಗೆ ಶೇಕಡ 100 ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದರು

ಈ ಸಂದರ್ಬದಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಕರಿಗೌಡರ, ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ, ಗದಗ ಬೆಟಗೇರಿ ನಗರಸಭೆ ಪೌರಾಯುಕ್ತ ರಾಜರಾಮ ಪವಾರ, ತಾಲೂಕಾ ವೈದ್ಯಾಧಿಕಾರಿಗಳು, ಸಿಪಿಐ, ಪಲ್ಸ ಪೋಲಿಯೋ ಜಿಲ್ಲಾ ಟಾಸ್ಕ ಫೋರ್ಸ್ ಸಮಿತಿಯ ಸದಸ್ಯರು ಹಾಜರಿದ್ದರು

# ನಗರದ ಸ್ವಚ್ಛತೆ ಹಾಗೂ ಸೌಂದರ್ಯ ಕಾಪಾಡಿ ಪರಿಸರ ರಕ್ಷಿಸಿ

**ಗದಗ :** ನಗರದ ಸ್ವಚ್ಛತೆ ಹಾಗೂ ಸೌಂದರ್ಯ ಕಾಪಾಡಿದರೆ ಪರಿಸರ ರಕ್ಷಣೆಯೊಂದಿಗೆ ಆರೋಗ್ಯಕರ ವಾತಾವರಣ ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಸ್ವಚ್ಛಭಾರತ ಅಭಿಯಾನದಡಿ ಘನ ತ್ಯಾಜ್ಯ ನಿರ್ವಹಣೆ ಕುರಿತು ಒಂದು ದಿನದ ಸಾಮರ್ಥ್ಯಾಭಿವೃದ್ಧಿ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದರು.

ನಗರದಲ್ಲಿ ಉದ್ಯಾನವನಗಳು ಸ್ವಚ್ಛವಾಗಿದ್ದರೆ ಅಲ್ಲಿನ ಸುತ್ತಮುತ್ತಲಿನ ಪರಿಸರ ಚೆನ್ನಾಗಿರುತ್ತದೆ. ಈ ನಿಟ್ಟಿನಲ್ಲಿ ಘನ ತ್ಯಾಜ್ಯ ಸಂಗ್ರಹಣೆ, ವಿಲೇವಾರಿ ಕಾರ್ಯ ಅತೀ ಮುಖ್ಯವಾಗಿದೆ. ನಮ್ಮ ಮನೆಯ ಒಳಗಡೆ ಹೇಗೆ ನಾವು ಸ್ವಚ್ಛತೆ ಕಾಯ್ದುಕೊಳ್ಳುತ್ತೇವೆಯೋ ಹಾಗೆಯೇ ಸಾರ್ವಜನಿಕ ಸ್ಥಳಗಳನ್ನು ಸಹ ಸ್ವಚ್ಛವಾಗಿಟ್ಟುಕೊಳ್ಳಲು ಶ್ರಮಿಸಬೇಕು. ಸ್ವಚ್ಛತೆಗೆ ಆದ್ಯತೆ ಕೊಟ್ಟು ಪರಿಸರ ಮಾಲಿನ್ಯವನ್ನು ತಡೆಗಟ್ಟಿ ನಗರವನ್ನು ಅಭಿವೃದ್ಧಿಪಡಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರಸಭೆ ಸದಸ್ಯರಾದ ಎಲ್.ಡಿ.ಚಂದಾವರಿ ಅವರು ಮಾತನಾಡುತ್ತಾ ಘನ ತ್ಯಾಜ್ಯ ನಿರ್ವಹಣೆಯಲ್ಲಿ ಸಾರ್ವಜನಿಕರ ಪಾತ್ರವೂ ಮಹತ್ವದ್ದಾಗಿದೆ. ನಗರದ ಸ್ವಚ್ಛತೆ ಕಾಪಾಡುವುದು ( sanitary staff) ಸ್ವಚ್ಛತಾ ಸಿಬ್ಬಂದಿಯವರೊಂದಿಗೆ ಸಾರ್ವಜನಿಕರ ಜವಾಬ್ದಾರಿಯೂ ಆಗಿರುತ್ತದೆ. ಕಾಲೇಜುಗಳಲ್ಲಿ ತ್ಯಾಜ್ಯ ವಸ್ತುಗಳ ನಿರ್ವಹಣೆ ಹಾಗೂ ವಿಲೇವಾರಿ ಕುರಿತು ತಿಳುವಳಿಕೆ ಕಾರ್ಯಕ್ರಮ ಆಯೋಜಿಸಬೇಕು ಎಂದು ತಿಳಿಸಿದರು.

ಗದಗ ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ ಅವರು ಮಾತನಾಡಿ ಘನತ್ಯಾಜ್ಯ ನಿರ್ವಹಣಾ ಕಾರ್ಯಾಗಾರದ ಸದುಪಯೋಗ ಪಡಿಸಿಕೊಳ್ಳಬೇಕು. ಕಮ್ಯುನಿಟಿ ಮೊಬೈಲೈಜರ್‌ಗಳು ವಾರ್ಡವಾರು ಮಾಹಿತಿಯನ್ನು ಅಪ್‌ಡೇಟ್ ಮಾಡುತ್ತಾರೆ. ಅವರ ಸಲಹೆಗಳೊಂದಿಗೆ ಸ್ಯಾನಿಟರಿ ಸುಪರ್‌ವೈಜರ್ಸ ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು. ಗದಗ ನಗರವನ್ನು ಮೂಲಭೂತ ಸೌಕರ್ಯಗಳೊಂದಿಗೆ ಸ್ವಚ್ಛ ನಗರವನ್ನಾಗಿಸಲು ಎಲ್ಲರೂ ಸಹಕರಿಸಬೇಕೆಂದರು.

ಕಾರ್ಯಾಗಾರದಲ್ಲಿ ನಗರಸಭೆ ಸದಸ್ಯರಾದ ಮಹಾಂತೇಶ ನಲವಡಿ, ಸುನಂದಾ ಬಾಕಳೆ, ಶಕುಂತಲಾ ಅಕ್ಕಿ, ಲಕ್ಷ್ಮಿ [illegible] ಶಂಕರ ಖಾಕಿ, ಮೆಹಬೂಬಸಾಬ ನದಾಫ್, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ನಗರಸಭೆ ಸದಸ್ಯರು, ಸ್ಯಾನಿಟರಿ ಸುಪರ್ ವೈ ಸರ್ಸ್ , ಕಮ್ಯುನಿಟಿ ಮೊಬೆಲೈಜರ್ಸ ಹಾಜರಿದ್ದರು.

## ಅಂಚೆ ಇಲಾಖೆಯ ಡಾಕ್ ಅದಾಲತ್ತ

**ಹಾವೇರಿ:** ಹಾವೇರಿ ಅಂಚೆ ವಿಭಾಗದ ಅಂಚೆ ಇಲಾಖೆಯ ಡಾಕ್ ಅದಾಲತ್ತ ಡಿಸೆಂಬರ್ 23 ರಂದು ಬೆಳಿಗ್ಗೆ 10 ಗಂಟೆಗೆ ಹಾವೇರಿ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಆಯೋಜಿಸಲಾಗಿದೆ.

ಅದಾಲತ್ತನಲ್ಲಿ ತೀರ್ಮಾನಿಸುವ ಅಹವಾಲುಗಳಿದ್ದಲ್ಲಿ, ದಿನಾಂಕ 19–12–2025ರೊಳಗಾಗಿ ಅಹವಾಲುಗಳನ್ನು ಲಿಖಿತವಾಗಿ ಅಂಚೆ ಅಧೀಕ್ಷಕರು, ಹಾವೇರಿ ಅಂಚೆ ವಿಭಾಗ, ಹಾವೇರಿ–581110 ಈ ವಿಳಾಸಕ್ಕೆ ಅಥವಾ ಇ–ಅಂಚೆ(dohaveri.ka@indiapost.gov.in ) ಗೆ ಕಳಿಹಿಸಬಹುದು. ಡಾಕ್ ಅದಾಲತ್ತನಲ್ಲಿ ಹಾಜರಾಗುವವರಿಗೆ ಯಾವುದೇ ತರಹದ ಭತ್ಯೆ ನೀಡಲಾಗುವುದಿಲ್ಲ ಎಂದು ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಗರದ ಎಲ್ಲಾ ರಸ್ತೆಗಳು ಗುಣಮಟ್ಟದ ಡಾಂಬರೀಕರಣ ಕೈಗೊಳ್ಳಬೇಕು : ಶೀಲಾದಿನೇಶ್

**ಚಿಕ್ಕಮಗಳೂರು**–ನಗರದ ಎಲ್ಲಾ ವಾರ್ಡ್‌ಗಳಲ್ಲಿಯೂ ರಸ್ತೆ ಡಾಂಬರೀಕರಣ ಕಾಮಗಾರಿ ಬರದಿಂದ ನಡೆಯುತ್ತಿದ್ದು, ಗುಣಮಟ್ಟದ ಕಾಮಗಾರಿ ಕೈಗೊಳ್ಳಬೇಕೆಂದು ನಗರಸಭಾಧ್ಯಕ್ಷೆ ಶೀಲಾದಿನೇಶ್ ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಅವರು ಇಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಮೀಪ ನಡೆಯುತ್ತಿರುವ ಡಾಂಬರೀಕರಣ ಕಾಮಗಾರಿಯನ್ನು ಪರಿಶೀಲಿಸಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದರು.

ಎಸ್‌ಎಫ್‌ಸಿ ಅನುದಾನದಲ್ಲಿ ಸುಮಾರು 10 ಕೋಟಿ ರೂಗಳನ್ನು ತಂದು ಶಾಸಕ ಹೆಚ್.ಡಿ. ತಮ್ಮಯ್ಯ ಅವರು ನಗರದ ನಾಗರಿಕರಿಗೆ ಉತ್ತಮ ರಸ್ತೆ ನಿರ್ಮಾಣ ಮಾಡಬೇಕೆಂದು ಗುರಿ ಹೊಂದಿದ್ದಾರೆಂದು ಹೇಳಿದರು.

ನಗರಸಭೆಯಿಂದ ಜನತೆ ಪರವಾಗಿ ಶಾಸಕರಿಗೆ ಧನ್ಯವಾದಗಳನ್ನು ಸಲ್ಲಿಸಬಯಸುತ್ತೇನೆ, ಶಾಸಕರು ಇನ್ನಷ್ಟು ಉತ್ತಮ ಸೇವೆ ಮೂಲಕ ಜನಪ್ರಿಯತೆ ಗಳಿಸಲಿ ಎಂದು ಹಾರೈಸಿದರು.

ನಗರದಲ್ಲಿ ಈಗ ಯಾವುದೇ ರೀತಿಯ ಕುಡಿಯುವ ನೀರಿನ ಸಮಸ್ಯೆ ತಲೆದೋರಿಲ್ಲ, ಸಮಸ್ಯೆ ಇದೆ ಎಂದು ನಾಗರಿಕರು ದೂರು ನೀಡಿದರೆ ಖಂಡಿತ ಬಗೆಹರಿಸುವುದಾಗಿ ಭರವಸೆ ನೀಡಿದರು.

ಪೌರಾಯುಕ್ತ ಬಿ.ಸಿ. ಬಸವರಾಜ್ ಮಾತನಾಡಿ, ಕಳೆದ ತಿಂಗಳು ಶಾಸಕ ಹೆಚ್.ಡಿ ತಮ್ಮಯ್ಯನವರ ನೇತೃತ್ವದಲ್ಲಿ



ನಗರದ ಎಲ್ಲಾ ವಾರ್ಡ್‌ಗಳಲ್ಲಿ "ಸೈಕಲ್ ತುಳಿ ಸಮಸ್ಯೆ ತಿಳಿ" ಘೋಷಣೆಯೊಂದಿಗೆ ರಸ್ತೆ ಅಭಿವೃದ್ಧಿಗೆ ಗುದ್ದಲಿ ಪೂಜೆ ನೆರವೇರಿಸಲಾಗಿತ್ತು ಎಂದು ಹೇಳಿದರು.

ವಿಶೇಷ ಅನುದಾನದಲ್ಲಿ 10 ಕೋಟಿ ರೂ, ನಗರಸಭೆ ಅನುದಾನದಲ್ಲಿ 3 ಕೋಟಿ ರೂ, ರಾಜ್ಯಸಭಾ ಸದಸ್ಯ ಜಯರಾಂ ರಮೇಶ್‌ರವರ ಅನುದಾನದಲ್ಲಿ 2 ಕೋಟಿ ಸೇರಿ ಒಟ್ಟು ಸುಮಾರು 17 ಕೋಟಿ ರೂ ವೆಚ್ಚದಲ್ಲಿ ನಗರದ ಎಲ್ಲಾ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.

ಯುಜಿಡಿ ಅಮೃತ್ ಯೋಜನೆಯಿಂದ ಹಾನಿಯಾಗಿದ್ದ ರಸ್ತೆಗಳನ್ನು ಈಗ ಸುಸ್ಥಿತಿಯಲ್ಲಿ ಡಾಂಬರೀಕರಣ ಮಾಡುವ ಮೂಲಕ ಗುಣಮಟ್ಟದ ಕಾಮಗಾರಿಗೆ ಸೂಚನೆ ನೀಡಲಾಗಿದೆ. ಡಾಂಬರಿಕರಣದ ಬಳಿಕ ರಸ್ತೆ ಸಮರ್ಪಕವಾಗಲು ಸುಮಾರು 15 ದಿನಗಳು ಬೇಕಾಗುತ್ತದೆ. ಈ ಮಧ್ಯೆ ಕಳಪೆ ಕಾಮಗಾರಿಯಾಗಿದ್ದರೆ ಸಾರ್ವಜನಿಕರು ನೇರವಾಗಿ ನಗರಸಭಾಧ್ಯಕ್ಷರು, ಪೌರಾಯುಕ್ತರಾದ ನನಗೆ ಹಾಗೂ ನಗರಸಭೆ ಇಂಜಿನಿಯರ್‌ಗೆ ದೂರು ಸಲ್ಲಿಸಿದರೆ ಸೂಕ್ತ ಕ್ರಮ ವಹಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ಎ.ಸಿ.ಕುಮಾರ್‌ಗೌಡ, ಮಾಜಿ ಸದಸ್ಯ ದಿನೇಶ್, ಇಂಜಿನಿಯರ್‌ಗಳಾದ ಲೋಕೇಶ್, ಸೌಜನ್ಯ ಮತ್ತಿತರರು ಉಪಸ್ಥಿತರಿದ್ದರು.

# ಅಭಿವೃದ್ಧಿಶೀಲ ರಾಷ್ಟ್ರಗಳ ಸಾಮರ್ಥ್ಯ ವೃದ್ಧಿಗೆ ಭಾರತ ಕರೆ





**ನವದೆಹಲಿ :** ಜಾಗತಿಕ ಪರಿಸರ ಪರಿಹಾರಗಳು ಜನ–ಕೇಂದ್ರಿತ ಮತ್ತು ಸಮಾನತೆಯಲ್ಲಿ ಬೇರೂರಿರಬೇಕು, ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಪ್ರವೇಶಿಸಬಹುದಾದ ಹಣಕಾಸು, ತಂತ್ರಜ್ಞಾನ ವರ್ಗಾವಣೆ ಮತ್ತು ಸಾಮರ್ಥ್ಯ ವೃದ್ಧಿಗೆ ಕರೆ ನೀಡಬೇಕು ಎಂದು ಭಾರತ ನೈರೋಬಿಯಲ್ಲಿ ನಡೆದ ಯುಎನ್ ಪರಿಸರ ಸಭೆಗೆ (ಯುಎನ್‌ಇಎ–7) ತಿಳಿಸಿದೆ.

ಕೇಂದ್ರ ಪರಿಸರ ಖಾತೆ ರಾಜ್ಯ ಸಚಿವ ಕೀರ್ತಿ ವರ್ಧನ್ ಸಿಂಗ್ ಅವರು, ಯುಎನ್‌ಇಎ–7 ರ ವಿಷಯ–ಸ್ಥಿತಿಸ್ಥಾಪಕ ಗ್ರಹಕ್ಕಾಗಿ ಸುಸ್ಥಿರ ಪರಿಹಾರಗಳನ್ನು ಮುಂದುವರಿಸುವುದು. ಪ್ರಕೃತಿಯೊಂದಿಗೆ ಸಾಮರಸ್ಯದಿಂದ ಬದುಕಲು ಮತ್ತು ಸಮಗ್ರ, ಹವಾಮಾನ–ಸ್ಥಿತಿಸ್ಥಾಪಕ ಅಭಿವೃದ್ಧಿಯನ್ನು ಅನುಸರಿಸಲು ಭಾರತದ ದೀರ್ಘಕಾಲದ ಬದ್ಧತೆಗೆ ಹೊಂದಿಕೆಯಾಗುತ್ತದೆ ಎಂದು ಹೇಳಿದರು.

ಪರಿಸರ ಪರಿಹಾರಗಳು ಜನರ ಮೇಲೆ ಕೇಂದ್ರೀಕೃತವಾಗಿರಬೇಕು ಮತ್ತು ಜಾಗತಿಕ ಕ್ರಿಯೆಯು ಸಮಾನತೆ, ಸಾಮಾನ್ಯ ಆದರೆ ವಿಭಿನ್ನ ಜವಾಬ್ದಾರಿಗಳು ಮತ್ತು ಸಂಬಂಧಿತ ಸಾಮರ್ಥ್ಯಗಳು ಮತ್ತು ರಾಷ್ಟ್ರೀಯ ಸಂದರ್ಭಗಳಿಗೆ ಗೌರವದ ತತ್ವಗಳಿಂದ ಮಾರ್ಗದರ್ಶಿಸಲ್ಪಡಬೇಕು ಎಂಬ ದೃಢನಿಶ್ಚಯದೊಂದಿಗೆ ಭಾರತ ಯುಎನ್‌ಇಎ 7 ಅನ್ನು ಸಮೀಪಿಸುತ್ತದೆ ಎಂದು ಸಿಂಗ್ ಹೇಳಿದರು.

ಈ ತತ್ವಗಳು ಮಹತ್ವಾಕಾಂಕ್ಷೆಯನ್ನು ಸಕ್ರಿಯಗೊಳಿಸುತ್ತವೆ, ವಿಶ್ವಾಸವನ್ನು ಬೆಳೆಸುತ್ತವೆ ಮತ್ತು ಬಹುಪಕ್ಷೀಯ ಸಹಕಾರವನ್ನು ಬಲಪಡಿಸುತ್ತವೆ ಎಂದು ಅವರು ಹೇಳಿದರು.ಕಳೆದ ದಶಕದಲ್ಲಿ ಭಾರತದ ದೇಶೀಯ ಕ್ರಮಗಳು ನಿರ್ಧರಿತ ರಾಷ್ಟ್ರೀಯ ಪ್ರಯತ್ನಗಳು ಏನನ್ನು ಸಾಧಿಸಬಹುದು ಎಂಬುದನ್ನು ತೋರಿಸುತ್ತವೆ ಎಂದು ಸಚಿವರು ಎತ್ತಿ ತೋರಿಸಿದರು.

ಭಾರತವು ಈಗಾಗಲೇ 235 ಗಿಗಾವ್ಯಾಟ್‌ಗಳಷ್ಟು ಪಳೆಯುಳಿಕೆಯೇತರ ಇಂಧನ ಸ್ಥಾಪಿತ ವಿದ್ಯುತ್ ಸಾಮರ್ಥ್ಯವನ್ನು ಸಾಧಿಸಿದೆ, ಇದು ಗುರಿಗಿಂತ ಗಮನಾರ್ಹವಾಗಿ ಮುಂದಿದೆ ಎಂದು ಅವರು ಹೇಳಿದರು.ಭಾರತದ ಜೀವನಶೈಲಿ ಆಂದೋಲನವಾದ ಮಿಷನ್ ಲೈಫ್ ಅನ್ನು ಅವರು ಒತ್ತಿ ಹೇಳಿದರು, ಇದು ಗಮನವಿಟ್ಟುಕೊಂಡ ಬಳಕೆ ಮತ್ತು ಸುಸ್ಥಿರ ಜೀವನಶೈಲಿಯನ್ನು ಉತ್ತೇಜಿಸುತ್ತದೆ.

## ಮುಖ್ಯಮಂತ್ರಿಗಳ ಜಿಲ್ಲಾ ಪ್ರವಾಸ ಕಾರ್ಯಕ್ರಮದ ಪೂರ್ವಸಿದ್ಧತಾ ಸಭೆ

# ಶಿಷ್ಟಾಚಾರ ಪಾಲನೆಯೊಂದಿಗೆ ಕಾರ್ಯಕ್ರಮದ ಸುವ್ಯವಸ್ಥೆಗೆ ಕ್ರಮ ವಹಿಸಿ

**ಗದಗ :** ರಾಜ್ಯದ ಮಾನ್ಯಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಗದಗ ಜಿಲ್ಲೆಯ ಲಕ್ಷ್ಮೇಶ್ವರ ಪಟ್ಟಣಕ್ಕೆ ಆಗಮಿಸುತ್ತಿದ್ದು ಸೂಕ್ತ ರೀತಿಯ ಶಿಷ್ಟಾಚಾರ ಪಾಲನೆಯಾಗುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಈ ಕುರಿತು ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಡಿಸೆಂಬರ್ 13 ರಂದು ಬೆಳಿಗ್ಗೆ 10.20 ಗಂಟೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದ ಹೆಲಿಪ್ಯಾಡ್‌ದಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11.15 ಗಂಟೆಗೆ ಜಿಲ್ಲೆಯ ಲಕ್ಷ್ಮೇಶ್ವರದ ಶ್ರೀ ಉಮಾ ಪಿ.ಯು.ಕಾಲೇಜ್ ಮೈದಾನದ ಹೆಲಿಪ್ಯಾಡ್‌ಗೆ ಆಗಮಿಸುವರು. ಲಕ್ಷ್ಮೇಶ್ವರದ ಚಂದನ ಎಜ್ಯುಕೇಶನ್ ಸೊಸೈಟಿ ವತಿಯಿಂದ ಆಯೋಜಿಸಿರುವ ಭಾರತರತ್ನ ಪ್ರೊ.ಸಿ.ಎನ್. ಆರ್.ರಾವ್ 10 ನೇ ವರ್ಷದ ವಿಜ್ಞಾನ



ವಿಸ್ತ್ರತ ಕಾರ್ಯಕ್ರಮ–2025 ಹಾಗೂ ಬಿ.ಎಸ್.ಪಾಟೀಲ, ಭಾ.ಆ.ಸೇ (ನಿ) ಇವರಿಗೆ 2025 ನೇ ಸಾಲಿನ ಪ್ರತಿಷ್ಠಿತ ಚಂದನ ಶ್ರೀ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳುವರು. ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ಜರುಗಿಸುವರು. ಮಧ್ಯಾಹ್ನ 3 ಗಂಟೆಗೆ ಲಕ್ಷ್ಮೇಶ್ವರ ಶ್ರೀ ಉಮಾ ಪಿ.ಯು.ಕಾಲೇಜ್ ಮೈದಾನ ಹೆಲಿಪ್ಯಾಡ್‌ದಿಂದ ಹೆಲಿಕಾಪ್ಟರ್ ಮೂಲಕ ಹುಬ್ಬಳ್ಳಿಗೆ ತೆರಳಲಿದ್ದು ಜಿಲ್ಲೆಗೆ ಆಗಮಿಸಿ ನಿರ್ಗಮಿಸುವವರೆಗೆ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ವಹಿಸಿದ ಜವಾಬ್ದಾರಿಯನ್ನು ಸರಿಯಾಗಿ ನಿಭಾಯಿಸುವಂತೆ ಸೂಚಿಸಿದರು.

ಎಲ್ಲಾ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮ ಪ್ರಾರಂಭವಾಗುವುದಕ್ಕಿಂತ ಮುಂಚೆಯೇ ಕಡ್ಡಾಯವಾಗಿ ಹಾಜರಾಗಬೇಕು. ಮುಖ್ಯಮಂತ್ರಿಗಳ ಕಾರ್ಯಕ್ರಮದ ಸ್ಥಳದ ಸ್ವಚ್ಛತೆಗೆ ಹಾಗೂ ಸೂಕ್ತ ಬಂದೋಬಸ್ತ್‌ಗಾಗಿ ಕ್ರಮ ವಹಿಸಬೇಕು. ಕಾರ್ಯಕ್ರಮದ ಸ್ಥಳದಲ್ಲಿ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಅಧಿಕಾರಿಗಳು ನಿಗಾ ವಹಿಸಬೇಕು. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಆಸನದ ವ್ಯವಸ್ಥೆ ಅಚ್ಚುಕಟ್ಟಾಗಿರುವಂತೆ ನೋಡಿಕೊಳ್ಳಬೇಕು.ಒಟ್ಟಾರೆಯಾಗಿ ಮಾನ್ಯ ಮುಖ್ಯಮಂತ್ರಿಗಳ ಜಿಲ್ಲಾ ಪ್ರವಾಸ ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಾಗದಂತೆ ಇಲಾಖಾಧಿಕಾರಿಗಳು ಆಸಕ್ತಿಯಿಂದ ಕಾರ್ಯನಿರ್ವಹಿಸಬೇಕು.

ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾತನಾಡಿ ಮುಖ್ಯಮಂತ್ರಿಗಳು ಸಂಚರಿಸುವ ಮಾರ್ಗಗಳು ಸುವ್ಯವಸ್ಥಿತವಾಗಿ ಇರುವಂತೆ ಹಾಗೂ ವಾಹನ ನಿಲುಗಡೆಗೆ ಸಾಕಷ್ಟು ಸ್ಥಳಾವಕಾಶ ಇರುವಂತೆ ಸೂಕ್ತ ವ್ಯವಸ್ಥೆ ಮಾಡಬೇಕು. ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಸುಸಜ್ಜಿತ ವೈದ್ಯರ ತಂಡ ಇರುವಂತೆ ನೋಡಿಕೊಳ್ಳಬೇಕು ಎಂದರು. ಸಭೆಯಲ್ಲಿ ವೇದಿಕೆ, ಊಟ ಮತ್ತು ವಸತಿ ವ್ಯವಸ್ಥೆ, ಅಗ್ನಿಶಾಮಕ ವ್ಯವಸ್ಥೆ ಕುರಿತು ಚರ್ಚಿಸಿ ಸಂಬಂಧಿತ ಇಲಾಖಾಧಿಕಾರಿಗಳಿಗೆ ಹೊಣೆಗಾರಿಕೆಯನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಉಪವಿಭಾಗಾಧಿಕಾರಿ ಗಂಗಪ್ಪ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್.ಬುರುಡಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಸನಾಯಕ, ಜಿ.ಪಂ.ಅಧಿಕಾರಿ ಎಂ.ವಿ.ಚಳಗೇರಿ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್. ಎಸ್.ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ನಂದಾ ಹಣಬರಟ್ಟಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಕೊಟ್ರೇಶ ವಿಭೂತಿ, ಡಾ.ಬಸವರಾಜ ಮಲ್ಲೂರ, ಎಂ.ಎಂ. ತುಂಬರಮಟ್ಟಿ, ಡಾ.ಬಸವರಾಜ ಬಳ್ಳಾರಿ, ಶ್ರೀನಿವಾಸ ಮೂರ್ತಿ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

# ಪುಟಿನ್ ಭಾರತ ಪ್ರವಾಸದ ಬಳಿಕ ಇದೇ ಮೊದಲ ಬಾರಿಗೆ ಮೋದಿ ಕರೆ ಮಾಡಿದ ಟ್ರಂಪ್, ಸುದೀರ್ಘ ಸಂಭಾಷಣೆ

**ನವದೆಹಲಿ :** ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಭಾರತ ಪ್ರವಾಸದ ಬಳಿಕ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇದೇ ಮೊದಲ ಬಾರಿಗೆ ಪ್ರಧಾನಿ ನರೇಂದ್ರಮೋದಿ ಅವರೊಂದಿಗೆ ಸುದೀರ್ಘ ದೂರವಾಣಿ ಸಂಭಾಷಣೆ ನಡೆಸಿದ್ದಾರೆ.

ಮಾತುಕತೆ ವೇಳೆ ಉಭಯ ನಾಯಕರು ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯಲ್ಲಿ ಭಾರತ–ಅಮೆರಿಕದ ಪ್ರಗತಿ ಕುರಿತು ಚರ್ಚಿಸಿದರು ಎಂದು ವರದಿಯಾಗಿದೆ. ಜೊತೆಗೆ ಎರಡೂ ರಾಷ್ಟ್ರಗಳ ದ್ವಿಪಕ್ಷೀಯ ಸಹಕಾರಗಳ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು ಎಂದು ತಿಳಿದುಬಂದಿದೆ.

ಪುಟಿನ್ ಭಾರತದ ಭೇಟಿ ಬಳಿಕ ಟ್ರಂಪ್ ಅವರೊಂದಿಗೆ ನಡೆಸಿದ ಮೊದಲ ದೂರವಾಣಿ ಸಂಭಾಷಣೆ ಇದಾಗಿದೆ



ಎಂದು ಮೋದಿ ಎಕ್ಸ್ ಮಾಡಿದ್ದಾರೆ.

ನಾನು ಅಮೆರಿಕ ಅಧ್ಯಕ್ಷ ಟ್ರಂಪ್ ಅವರೊಂದಿಗೆ ಬಹಳ ಆತ್ಮೀಯ ಮತ್ತು ಅದ್ಭುತ ಸಂಭಾಷಣೆ ನಡೆಸಿದೆ. ನಾವು ದ್ವಿಪಕ್ಷೀಯ ಸಂಬಂಧಗಳಲ್ಲಿನ ಪ್ರಗತಿಯನ್ನೂ ಪರಿಶೀಲಿಸಿದ್ದೇವೆ. ಇದರೊಂದಿಗೆ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ಬೆಳವಣಿಗೆಗಳ ಬಗ್ಗೆ ಚರ್ಚಿಸಿದ್ದೇವೆ. ಜಾಗತಿಕ ಶಾಂತಿ, ಸ್ಥಿರತೆ ಮತ್ತು ಸಮೃದ್ಧಿಗಾಗಿ ಭಾರತ ಮತ್ತು ಅಮೆರಿಕ ಒಟ್ಟಾಗಿ ಕೆಲಸ ಮಾಡುವುದನ್ನ ಮುಂದುವರಿಸುತ್ತವೆ ಎಂದು ತಿಳಿಸಿದ್ದಾರೆ.

ಇನ್ನೂ ಸಂಭಾಷಣೆ ಸಮಯದಲ್ಲಿ ಉಭಯ ನಾಯಕರು ದ್ವಿಪಕ್ಷೀಯ ವ್ಯಾಪಾರ ಹೆಚ್ಚಿಸುವ ಬಗ್ಗೆ ಒತ್ತಿ ಹೇಳಿದ್ದಾರೆ. ಅಲ್ಲದೇ ಮಿಲಿಟರಿ ಪಾಲುದಾರಿಕೆಯ ಅವಕಾಶಗಳನ್ನು ಹೆಚ್ಚಿಸುವುದು, ವಾಣಿಜ್ಯ ಮತ್ತು ತಂತ್ರಜ್ಞಾನ, ಇಂಧನ, ರಕ್ಷಣೆ ಮತ್ತು ಭದ್ರತೆ ಸೇರಿದಂತೆ ಆದ್ಯತೆಯ ಕ್ಷೇತ್ರಗಳಲ್ಲಿ ಪರಸ್ಪರ ಸಹಕಾರ ಹೆಚ್ಚಿಸುವ ಬಗ್ಗೆ ಚರ್ಚಿಸಿದರು.

ಬಳಿಕ ಎಲ್ಲಾ ಕ್ಷೇತ್ರಗಳಲ್ಲಿ ನಿರಂತರ ಸಹಕಾರ ಬಲಗೊಳ್ಳುತ್ತಿದ್ದೆ ಎಂದು ಉಭಯ ನಾಯಕರು ತೃಪ್ತಿಪಟ್ಟುಕೊಂಡರು ಎಂದು ವರದಿಗಳು ತಿಳಿಸಿವೆ.

# ಮಾಜಿ ಕೇಂದ್ರ ಸಚಿವ ಶಿವರಾಜ್ ಪಾಟೀಲ್ ನಿಧನ

**ಲಾತೂರ್,ಡಿ.12–** ಹಿರಿಯ ಕಾಂಗ್ರೆಸ್ ನಾಯಕ ಮತ್ತು ಮಾಜಿ ಕೇಂದ್ರ ಗೃಹಸಚಿವ ಶಿವರಾಜ್ ಪಾಟೀಲ್(90) ಅವರು ಇಂದು ಬೆಳಿಗ್ಗೆ ನಿಧನರಾಗಿದ್ದಾರೆ.ಅಲ್ಪಕಾಲದ ಅನಾರೋಗ್ಯದ ನಂತರ ಪಾಟೀಲ್ ಅವರು ತಮ ತವರೂರಾದ ಮಹಾರಾಷ್ಟ್ರದ ಲಾತೂರ್‌ನಲ್ಲಿರುವ ದೇವ್‌ಘರ್‌ನಲ್ಲಿ ನಿವಾಸದಲ್ಲಿ ನಿಧನರಾಗಿದ್ದಾರೆ ಎಂದು ಕುಟುಂಬ ಮೂಲಗಳು ತಿಳಿಸಿವೆ.



ಮೃತರು ಪುತ್ರ ಶೈಲೇಶ್ ಪಾಟೀಲ್, ಸೊಸೆ ಬಿಜೆಪಿ ನಾಯಕಿ ಅರ್ಚನಾ ಮತ್ತು ಇಬ್ಬರು ಮೊಮಕ್ಕಳನ್ನು ಅಗಲಿದ್ದಾರೆ.1991ರಿಂದ 1996ರವರೆಗೆ ಲೋಕಸಭೆಯ ಸ್ಪೀಕರ್ ಆಗಿದ್ದ ಅವರು 2004ರಿಂದ 2008ರವರೆಗೆ ಯುಪಿಎ ಸರ್ಕಾರದಲ್ಲಿ ಗೃಹಸಚಿವರಾಗಿದ್ದರು. 2010ರಿಂದ 2015ರವರೆಗೆ ಪಂಜಾಬ್ –ಚಂಡೀಗಢ ಕೇಂದ್ರ ಪ್ರದೇಶದ ಆಡಳಿತಾಧಿಕಾರಿಯಾಗಿಯೂ ಸೇವೆ ಸಲ್ಲಿಸಿದ್ದರು.

1935ರ ಅ.12ರಂದು ಜನಿಸಿದ ಪಾಟೀಲ್, ಲಾತೂರ್‌ನ ಪುರಸಭೆಯ ಮುಖ್ಯಸ್ಥರಾಗಿ ತಮ ರಾಜಕೀಯ ಪ್ರಯಾಣ ಪ್ರಾರಂಭಿಸಿದರು ಮತ್ತು 70ರ ದಶಕದ ಆರಂಭದಲ್ಲಿ ಶಾಸಕರಾಗಿ ಆಯ್ಕೆಯಾದರು. ನಂತರ ಲಾತೂರ್ ಲೋಕಸಭಾ ಕ್ಷೇತ್ರವನ್ನು ಏಳು ಬಾರಿ ಗೆದ್ದರು. 2004ರ ಲೋಕಸಭಾ ಚುನಾವಣೆಯಲ್ಲಿ ಅವರು ಬಿಜೆಪಿಯ ರೂಪತ್ಯೆ ಪಾಟೀಲ್ ನೀಲಂಗೇಕರ್ ವಿರುದ್ಧ ಪರಾಜಯಗೊಂಡಿದ್ದರು.


# ಆಸ್ಪತ್ರೆ ಮೇಲೆ ಮ್ಯಾನ್ಮಾರ್ ಸೇನೆ ನಡೆಸಿದ ವೈಮಾನಿಕ ದಾಳಿಗೆ 34 ಮಂದಿ ಬಲಿ

**ಬ್ಯಾಂಕಾಕ್ :** ನಿನ್ನೆ ನಡೆದ ಮ್ಯಾನ್ಮಾರ್ ಸೇನೆಯ ವೈಮಾನಿಕ ದಾಳಿಯಲ್ಲಿ ಪ್ರಮುಖ ಬಂಡುಕೋರ ಸಶಸ್ತ್ರ ಪಡೆ ನಿಯಂತ್ರಿಸುವ ಪ್ರದೇಶದಲ್ಲಿ ಆಸ್ಪತ್ರೆ ನಾಶವಾಗಿದ್ದು, 34 ರೋಗಿಗಳು ಮತ್ತು ವೈದ್ಯಕೀಯ ಸಿಬ್ಬಂದಿ ಸಾವನ್ನಪ್ಪಿದ್ದಾರೆ ಎಂದು ರಕ್ಷಣಾ ಕಾರ್ಯಕರ್ತ ಮತ್ತು ಸ್ವತಂತ್ರ ಮಾಧ್ಯಮ ವರದಿಗಳು ತಿಳಿಸಿವೆ.

ಪಶ್ಚಿಮ ರಾಜ್ಯವಾದ ರಾಖೈನ್‌ನಲ್ಲಿ ಜನಾಂಗೀಯ ಅರಕನ್ ಸೈನ್ಯದ ನಿಯಂತ್ರಣದಲ್ಲಿರುವ ಪ್ರದೇಶವಾದ ಮ್ರೌಕ್–ಯು ಪಟ್ಟಣದಲ್ಲಿರುವ ಜನರಲ್ ಆಸ್ಪತ್ರೆಯ ಮೇಲೆ ನಡೆದ ದಾಳಿಯಲ್ಲಿ ಸುಮಾರು 80 ಜನರು ಗಾಯಗೊಂಡಿದ್ದಾರೆ.2021 ರಲ್ಲಿ ಮ್ಯಾನ್ಮಾರ್ ಸರ್ಕಾರವನ್ನು ವಶಪಡಿಸಿಕೊಂಡ ಮತ್ತು ಅಂದಿನಿಂದ ಜನಾಂಗೀಯ ಸೇನಾಪಡೆಗಳು ಮತ್ತು ಸಶಸ್ತ್ರ ಪ್ರತಿ–ರೋಧ ಪಡೆಗಳ ವಿರುದ್ಧ ಹೋರಾಡುತ್ತಿರುವ ಮಿಲಿಟರಿ, ಈ ಪ್ರದೇಶದಲ್ಲಿ ಯಾವುದೇ ದಾಳಿಯ ಬಗ್ಗೆ ಉಲ್ಲೇಖಿಸಿಲ್ಲ.

ರಾಖೈನ್‌ನಲ್ಲಿನ ರಕ್ಷಣಾ ಸೇವೆಗಳ ಹಿರಿಯ ಅಧಿಕಾರಿ ವಾಯ್ ಹುನ್ ಆಂಗ್, ರಾತ್ರಿ 9.13 ಕ್ಕೆ ಜೆಟ್ ಫೈಟರ್ ಎರಡು ಬಾಂಬ್‌ಗಳನ್ನು ಬೀಳಿಸಿತು, ಒಂದು ಆಸ್ಪತ್ರೆಯ ಚೇತರಿಕೆ ವಾರ್ಡ್‌ಗೆ ಬಡಿದು ಇನ್ನೊಂದು ಆಸ್ಪತ್ರೆಯ ಮುಖ್ಯ ಕಟ್ಟಡದ ಬಳಿ ಇಳಿಯಿತು ಎಂದು ಅಸೋಸಿಯೇಟೆಡ್ ಪ್ರೆಸ್‌ಗೆ ತಿಳಿಸಿದರು.

ಆಸ್ಪತ್ರೆಗೆ ನೆರವು ನೀಡಲು ಆಗಮಿಸಿದ್ದಾಗಿ ಮತ್ತು 17 ಮಹಿಳೆಯರು ಮತ್ತು 17 ಪುರುಷರ ಸಾವುಗಳನ್ನು ದಾಖಲಿಸಿರುವುದಾಗಿ ಅವರು ಹೇಳಿದರು. ಬಾಂಬ್ ದಾಳಿಯಿಂದ ಆಸ್ಪತ್ರೆಯ ಬಹುತೇಕ ಕಟ್ಟಡ ನಾಶವಾಗಿದೆ ಮತ್ತು ಆಸ್ಪತ್ರೆಯ ಬಳಿಯಿರುವ ಟ್ರಾಕ್ಸಿಗಳು ಮತ್ತು ಮೋಟಾರ್ ಬೈಕ್‌ಗಳು ಸಹ ಹಾನಿಗೊಳಗಾಗಿವೆ ಎಂದು ಅವರು ಹೇಳಿದರು.



ರಖೈನ್ ಮೂಲದ ಆನ್‌ಲೈನ್ ಮಾಧ್ಯಮವು ಹಾನಿಗೊಳಗಾದ ಕಟ್ಟಡಗಳು ಮತ್ತು ವೈದ್ಯಕೀಯ ಉಪಕರಣಗಳು ಸೇರಿದಂತೆ ಭಗ್ನಾವಶೇಷಗಳನ್ನು ತೋರಿಸುವ ಫೋಟೋಗಳು ಮತ್ತು ವೀಡಿಯೊಗಳನ್ನು ಪೋಸ್ಟ್ ಮಾಡಿದೆ.ರಖೈನ್‌ನಲ್ಲಿನ ಜನರಿಗೆ ಆಸ್ಪತ್ರೆಯು ಆರೋಗ್ಯ ರಕ್ಷಣೆಯ ಪ್ರಮುಖ ಮೂಲವಾಗಿದೆ, ಅಲ್ಲಿ ಮ್ಯಾನ್ಮಾರ್‌ನ ಅಂತರ್ಯುದ್ಧದಿಂದಾಗಿ ಹೆಚ್ಚಿನ ಆಸ್ಪತ್ರೆಗಳು ಮುಚ್ಚಲ್ಪಟ್ಟಿವೆ ಎಂದು ವಾಯ್ ಹುನ್ ಆಂಗ್ ಹೇಳಿದರು.

ಹೆಚ್ಚು ಅಗತ್ಯವಿರುವ ವೈದ್ಯಕೀಯ ಸೇವೆಗಳನ್ನು ಒದಗಿಸಲು ವೈದ್ಯರು ಮ್ರೌಕ್–ಯುನಲ್ಲಿ ಒಟ್ಟುಗೂಡಿ–ದ ನಂತರ ಅದನ್ನು ಮತ್ತೆ ತೆರೆಯಲಾಯಿತು.ದೇಶದ ಅತಿದೊಡ್ಡ ನಗರವಾದ ಯಾಂಗೋನ್‌ನಿಂದ ವಾಯುವ್ಯಕ್ಕೆ 530 ಕಿಲೋಮೀಟರ್ ದೂರದಲ್ಲಿರುವ ಮ್ರೌಕ್–ಯು ಅನ್ನು ಫೆಬ್ರವರಿ 2024 ರಲ್ಲಿ ಅರಕನ್ ಸೈನ್ಯವು ವಶಪಡಿಸಿಕೊಂಡಿತು.ರಖೈನ್ ಸೈನ್ಯವು ಮ್ಯಾನ್ಮಾರ್‌ನ ಕೇಂದ್ರ ಸರ್ಕಾರದಿಂದ ಸ್ವಾಯತ್ತತೆಯನ್ನು ಬಯಸುವ ರಖೈನ್ ಜನಾಂಗೀಯ ಅಲ್ಪಸಂಖ್ಯಾತ ಚಳವಳಿಯ ಉತ್ತಮ ತರಬೇತಿ ಪಡೆದ ಮತ್ತು ಸುಸಜ್ಜಿತ ಮಿಲಿಟರಿ ವಿಭಾಗವಾಗಿದೆ.

ಡಿಸೆಂಬರ್ 28 ರಂದು ರಾಷ್ಟ್ರೀಯ ಏಕತಾ ಸರ್ಕಾರದೊಂದಿಗೆ ನಿಕಟ ಸಂಬಂಧ ಹೊಂದಿರುವ ಸಶಸ್ತ್ರ ಪ್ರಜಾಪ್ರಭುತ್ವ ಪರ ಪೀಪಲ್?ಸ ಡಿಫೆನ್ಸ್ ಫೋರ್ಸ್ ವಿರುದ್ಧ ಮಿಲಿಟರಿ ಸರ್ಕಾರವು ವಾಯುದಾಳಿಗಳನ್ನು ಹೆಚ್ಚಿಸಿದೆ. ಮಿಲಿಟರಿ ಆಡಳಿತದ ವಿರೋಧಿಗಳು ಚುನಾವಣೆಗಳು ಮುಕ್ತವಾಗಿರುವುದಿಲ್ಲ ಮತ್ತು ನ್ಯಾಯಯುತವಾಗಿರುವುದಿಲ್ಲ ಎಂದು ಆರೋಪಿಸುತ್ತಾರೆ ಮತ್ತು ಮುಖ್ಯವಾಗಿ ಸೈನ್ಯವು ಅಧಿಕಾರವನ್ನು ಉಳಿಸಿಕೊಳ್ಳುವುದನ್ನು ಕಾನೂನುಬದ್ಧಗೊಳಿಸುವ ಪ್ರಯತ್ನವಾಗಿದೆ.

# ಜನವಸತಿ ಪ್ರದೇಶದಲ್ಲಿ ಗ್ಯಾಸ್ ಬಂಕ್ ವಿರೋಧಿಸಿ ಚಿಕ್ಕಮಗಳೂರಲ್ಲಿ ಪ್ರತಿಭಟನೆ

**ಚಿಕ್ಕಮಗಳೂರು:** ನಗರ ಹೊರವಲಯದ ಗವನಹಳ್ಳಿ ಬಳಿ ನಿರ್ಮಿಸುತ್ತಿರುವ ಸಿಎನ್‌ಜಿ ಗ್ಯಾಸ್ ಸ್ಟೇಷನ್‌ಗೆ ಅನುಮತಿ ನೀಡಬಾರದು ಎಂದು ಆಗ್ರಹಿಸಿ ಬಿಜೆಪಿ ಮುಖಂಡರ ನೇತೃತ್ವದಲ್ಲಿ ಸ್ಥಳೀಯ ನಿವಾಸಿಗಳು ಪ್ರತಿಭಟನೆ ನಡೆಸಿದರು.

ಗ್ಯಾಸ್ ಸ್ಟೇಷನ್ ಕಾಮಗಾರಿ ನಡೆಯುತ್ತಿರುವ ಸ್ಥಳಕ್ಕೆ ಆಗಮಿಸಿದ ಹಲವಾರು ಬಿಜೆಪಿ ಮುಖಂಡರು, ಸ್ಥಳೀಯ ನಿವಾಸಿಗಳು ಗ್ಯಾಸ್‌ಬಂಕ್ ಬೇಡ ಎಂಬ ಫ್ಲೆಕ್ಸ್ ಪ್ರದರ್ಶಿಸಿದರು. ಕಾಮಗಾರಿ ಸ್ಥಗಿತಕ್ಕೆ ಆಗ್ರಹಿಸಿ ಘೋಷಣೆ ಕೂಗಿದರು.

ಸ್ಥಳೀಯ ನಿವಾಸಿ ಕೇಶವ್ ಈ ವೇಳೆ ಮಾತನಾಡಿ, ಗ್ಯಾಸ್ ಸ್ಟೇಷನ್ ನಿರ್ಮಿಸುತ್ತಿರುವ ಪಕ್ಕದಲ್ಲಿ ನನ್ನ ಮನೆ, ಸುತ್ತಮುತ್ತ ಸಾರ್ವಜನಿಕರ ಮನೆಗಳಿವೆ. ಹಿಂಭಾಗದಲ್ಲಿ ಎಸ್ಸಿ ಸ್ಮಶಾನವಿದೆ. ಪಕ್ಕದಲ್ಲಿ ಸಾಮಿಲ್ ಇದ್ದು ಒಣಕಟ್ಟಿಗೆಗಳ ರಾಶಿಯೇ ಇದೆ. ಬೆಂಕಿ ಅವಘಡ ಉಂಟಾದಲ್ಲಿ ಇಡೀ ಊರೇ ಭಸ್ಮವಾಗುವ ಅಪಾಯವಿದೆ ಎಂದು ದೂರಿದರು.

ಸಿಎನ್‌ಜಿ ಕಂಪನಿಯವರು ಗ್ಯಾಸ್ ಬಂಕ್ ನಿರ್ಮಿಸುವುದರ ವಿರುದ್ಧ ಜಿಲ್ಲಾಧಿಕಾರಿಗಳಿಗೆ ತಕರಾರು ಅರ್ಜಿಸಲ್ಲಿಸಿದ್ದೆ, ಅವರು ಒಂದು ವರ್ಷ ಕಳೆದರೂ



ನಮಗೆ ಸಮಜಾಯಿಷಿ ನೀಡಲಿಲ್ಲ. ಇದೀಗ ಮಾಲೀಕರಿಗೆ ಗ್ಯಾಸ್ ಬಂಕ್ ನಿರ್ಮಿಸಲು ಅನುಮತಿ ನೀಡಿ–ದ್ದಾರೆ, ಇದು ಕಾನೂನುಬಾಹಿರ ಎಂದು ಆರೋಪಿಸಿದರು.

ಪಕ್ಕದಲ್ಲಿ ಯೋಗ ತರಗತಿ ಕೊಠಡಿ, ಸ್ಮಶಾನ, ಸಾಮಿಲ್ ಸಾರ್ವಜನಿಕ ಹಿತದೃಷ್ಟಿ ಹಿನ್ನೆಲೆಯಲ್ಲಿ ಗ್ಯಾಸ್ ಸ್ಟೇಷನ್‌ಗೆ ಅನುಮತಿ ನೀಡಬಾರದು ಎಂದು ಆಗ್ರಹಿಸಿದರು.

ಬಿಜೆಪಿ ಮುಖಂಡ ಕುರುವಂಗಿ ವೆಂಕಟೇಶ್ ಮಾತನಾಡಿ, ಗ್ಯಾಸ್ ಸ್ಟೇಷನ್ ನಿರ್ಮಿಸುತ್ತಿರುವ ಹಿಂಭಾಗದಲ್ಲಿ ಪರಿಶಿಷ್ಟ ಸಮುದಾಯದ ಸ್ಮಶಾನವಿದೆ. ಅಲ್ಲಿ ಕಳೆಬರ ದಹಿಸುವಾಗ ಬೆಂಕಿ ಅವಘಡ ಉಂಟಾಗುವ ಸಾಧ್ಯತೆ ಇದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಗೆ ಅನಾನುಕೂಲವಾಗಿರುವ ಗ್ಯಾಸ್ ಸ್ಟೇಷನ್‌ಗೆ ಅನುಮತಿ ನೀಡಬಾರದು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮುಖಂಡರಾದ ಶ್ರೀನಿವಾಸ್, ಕವಿತಾಶೇಖರ್, ಮುತ್ತಯ್ಯ, ಸಂತೋಷ್ ಕೊಟ್ಯಾನ್, ಆಲ್ದೂರು ಶಶಿ, ಅಮೃತೇಶ ಚನ್ನಕೇಶವ. ಶ್ಯಾಮ್ ವಿ ಗೌಡ, ರೂಪಕುಮಾರ್, ರವಿಕುಮಾರ್ ಮತ್ತಿತರಿದ್ದರು.

# ಸಾಹೇ ವಿವಿ ಅಂತರ್‌ಕಾಲೇಜು ವಾಲಿಬಾಲ್ ಪಂದ್ಯಾವಳಿ: ಎಸ್‌ಎಸ್‌ಐಟಿ ತಂಡಕ್ಕೆ ಟ್ರೋಫಿ

**ತುಮಕೂರು:** ಕ್ರೀಡಾಕೂಟಗಳು ವಿದ್ಯಾರ್ಥಿಗಳ ಮನಸ್ಸಿಗೆ ಮತ್ತು ದೇಹಕ್ಕೆ ಹೊಸ ಚೈತನ್ಯವನ್ನು ನೀಡುತ್ತದೆ ಪ್ರತಿನಿತ್ಯ ದೇಹವನ್ನು ದಂಡಿಸಿ ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ದೈಹಿಕ ಆರೋಗ್ಯ ಉತ್ತಮವಾಗಿರುತ್ತದೆ ಎಂದು ಸಾಹೇ ವಿಶ್ವವಿದ್ಯಾನಿಲಯದ ಉಪಕುಲಪತಿಗಳಾದ ಡಾ.ಕೆ.ಬಿ.ಲಿಂಗೇಗೌಡ ತಿಳಿಸಿದರು.

ನಗರದ ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ಆವರಣದಲ್ಲಿ ಸೋಆಯೋಜಿಸಿದ್ದಂತಹ ಸಾಹೇ ವಿಶ್ವವಿದ್ಯಾಲಯದ ಇಂಟರ್ ಕಾಲೇಜು ವಾಲಿಬಾಲ್ ಪಂದ್ಯಾವಳಿಗೆ ಚಾಲನೆ ನೀಡಿ ಮಾತನಾಡಿದ ಅವರು ಕ್ರೀಡೆಗಳು ವಿದ್ಯಾರ್ಥಿಗಳ ಏಕಾಗ್ರತೆಯನ್ನು ಹೆಚ್ಚಿಸುತ್ತದೆ ಹಾಗಾಗಿ ವಿದ್ಯಾರ್ಥಿಗಳು ಹೆಚ್ಚು ಹೆಚ್ಚು ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಎಸ್ ಎಸ್ ಐಟಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಎಂ.ಎಸ್ ರವಿಪ್ರಕಾಶ್ ಮಾತನಾಡಿ ಕ್ರೀಡೆಯಲ್ಲಿ ಸೋಲುಗೆಲುವ ಮುಖ್ಯವಲ್ಲ ಕ್ರೀಡೆಯಲ್ಲಿ ಪಾಲ್ಗೊಳ್ಳುವುದು





ಮುಖ್ಯವಾದ್ದು, ಕ್ರೀಡಾಕೂಟಗಳು ಸೋಲು ಗೆಲುವಿನ ಅನುಭವವನ್ನು ನೀಡುತ್ತದೆ. ಗೆಲುವು ಮತ್ತು ಸೋಲು ಸಾಧನೆಯ ಹಾದಿಯಲ್ಲಿ ಮೆಟ್ಟಿಲುಗಳಿದ್ದಂತೆ ಹಾಗಾಗಿ ಸೋಲು ಗೆಲುವುಗಳೆರಡನ್ನು ಸಮಾನವಾಗಿ ಸ್ವೀಕರಿಸಿ ಮುನ್ನಡೆಯಿರಿ ಎಂದು ಕ್ರೀಡಾಪಟುಗಳಿಗೆ ಕಿವಿಮಾತು ಹೇಳಿದರು.

ಪಂದ್ಯಾವಳಿಯಲ್ಲಿ ಸಾಹೇ ವಿಶ್ವ ವಿದ್ಯಾಲಯದ ಕುಲಸಚಿವರಾದ ಡಾ. ಅಶೋಕ್ ಮೆಹತಾ, ಪರೀಕ್ಷಾ ನಿಯಂತ್ರಕರಾದ ಡಾ. ಜಿ. ಗುರುಶಂಕರ್, ಡೀನ್ ಡಾ. ಎಸ್ ರೇಣುಕಾಲತಾ, ದೈಹಿಕ ಶಿಕ್ಷಣ ಮತ್ತು ಕ್ರೀಡಾ ವಿಭಾಗದ ನಿರ್ದೇಶಕರಾದ ರುದ್ರೇಶ್ ಕೆ.ಆರ್, ಸಾಹೇ ವಿವಿ ದೈಹಿಕ ಶಿಕ್ಷಣ ನಿರ್ದೇಶಕರಾದ ಶಶಿಕುಮಾರ್, ಸಾಹೇ ವಿವಿ ಮತ್ತು ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಎಲ್ಲಾ ವಿಭಾಗದ ಮುಖ್ಯಸ್ಥರು ಹಾಗೂ ಎಲ್ಲಾ ಪ್ರಾಧ್ಯಾಪಕರು ಉಪಸ್ಥಿತರಿದ್ದರು.

ಎಸ್‌ಎಸ್‌ಐಟಿ ತಂಡಕ್ಕೆ ಗೆಲುವು: ಸಾಹೇ ವಿಶ್ವವಿದ್ಯಾನಿಲಯದ ಇಂಟರ್ ಕಾಲೇಜು ವಾಲಿಬಾಲ್ ಪಂದ್ಯಾವಳಿಯಲ್ಲಿ ಶ್ರೀ ಸಿದ್ಧಾರ್ಥ ಮೆಡಿಕಲ್ ಕಾಲೇಜು, ಟಿ.ಬೇಗೂರು ಮೆಡಿಕಲ್ ಕಾಲೇಜು, ಪ್ಯಾರಾಮೆಡಿಕಲ್ ಕಾಲೇಜು, ಅಲೈಡ್ ಸೈನ್ಸ್ ಕಾಲೇಜು, ಹಾಗೂ ಶ್ರೀ ಸಿದ್ಧಾರ್ಥ ಇಂಜಿನಿಯರಿಂಗ್ ಕಾಲೇಜಿನ ತಂಡಗಳು ಭಾಗವಹಿಸಿದ್ದವು. ಅಂತಿಮ ಪಂದ್ಯದ ಹಣಾಹಣಿಯಲ್ಲಿ ಶ್ರೀ ಸಿದ್ಧಾರ್ಥ ಮೆಡಿಕಲ್ ಕಾಲೇಜು ತಂಡವನ್ನು 2–1 ಅಂತರದಲ್ಲಿ ಮಣಿಸಿದ ಎಸ್ ಎಸ್ ಐಟಿ ಕಾಲೇಜು ತಂಡ ಸಾಹೇ ಇಂಟರ್ ಕೊಲಿಜಿಯೇಟ್ ವಾಲೀಬಾಲ್ ಟ್ರೋಫಿಯನ್ನು ಮುಡಿಗೇರಿಸಿಕೊಂಡಿತು.

## ಕಾರಿನೊಳಗೆ ಯುವಕ ಸಜೀವ ದಹನ; ಗೋಣಿಚೀಲದಲ್ಲಿ ತುಂಬಿದ್ದ ಸುಟ್ಟ ಮೃತದೇಹ ಪತ್ತೆ

**ಮುಂಬೈ :** ಕಾರಿನೊಳಗೆ ವ್ಯಕ್ತಿಯೊಬ್ಬ ಸಜೀವ ದಹನವಾಗಿರುವ ಆಘಾತಕಾರಿ ಘಟನೆ ಮಹಾರಾಷ್ಟ್ರದ ಲಾತೂರ್ ಜಿಲ್ಲೆಯಲ್ಲಿ ನಡೆದಿದೆ. ಕೈಕಾಲು ಕಟ್ಟಿ ಹಾಕಿದ ಸ್ಥಿತಿಯಲ್ಲಿ, ಸುಟ್ಟ ಯುವಕನ ಮೃತದೇಹ ಗೋಣಿಚೀಲದಲ್ಲಿ ಪತ್ತೆಯಾಗಿದೆ. ಈ ಸಂಬಂಧ ಕೊಲೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಕೈಗೆತ್ತಿಕೊಂಡಿದ್ದಾರೆ.

ಮೃತನನ್ನು ಔಸಾ ತಾಂಡಾ ನಿವಾಸಿ ಗಣೇಶ್ ಚವ್ಹಾಣ್ ಎಂದು ಗುರುತಿಸಲಾಗಿದೆ. ಕೊಲೆಯಾದ ಗಣೇಶ್ ಅವರನ್ನು ಚೀಲದೊಳಗೆ ತುಂಬಿಸಿ, ಕಾರಿನಲ್ಲಿ ಕೂಡಿಡಲಾಗಿದೆ. ನಂತರ ದುಷ್ಕರ್ಮಿಗಳು ವಾಹನಕ್ಕೆ ಬೆಂಕಿ ಹಚ್ಚಿದ್ದಾರೆ ಎಂದು ಆರೋಪಿಸಲಾಗಿದೆ. ಚವ್ಹಾಣ್ ಐಸಿಐಸಿಐ ಬ್ಯಾಂಕ್‌ನಲ್ಲಿ ರಿಕವರಿ ಏಜೆಂಟ್ ಆಗಿ ಕೆಲಸ ಮಾಡುತ್ತಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**